ಸಂಪುಟ: ೦೭/ ಸಂಚಿಕೆ: ೨೨೭/ ಶನಿವಾರ ದಿನಾಂಕ : ೦೧-೧೧-೨೦೨೫/ ಪುಟ: ೬/ ಬೆಲೆ ೨-೦೦

ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ

ಕಛೇರಿ ದೂರವಾಣಿ ಸಂಖ್ಯೆ 0831-3564491

# ಬೆಳಗಿನ ಸೂರ್ಯೋದಯ

ಕನ್ನಡ ನಾಡಿನ ಸಮಸ್ತ ಜನತೆಗೆ ೭೦ನೇ ಕರ್ನಾಟಕ ರಾಜ್ಯೋತ್ಸವದ ಹಾರ್ದಿಕ ಶುಭಾಶಯಗಳು

ಕನ್ನಡ ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ ■ ಧಾರವಾಡ ■ ಬಾಗಲಕೋಟ ■ ವಿಜಯಪುರ ■ ಗದಗ ■ ಕೊಪ್ಪಳ ■ ಹಾವೇರಿ ■ ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ. ಕದಮ, Editor : GURURAJ IRAPPA. KADAM Cell : 9620099959

Volume : 07/ ISSUE : 227 / SATURDAY Date : 01-11-2025 / RNI No. KARKAN/2019/77640/ Postal Reg No. PMG/KA/NK/BM/135/2025-27 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00

## ನಾಳೆ 11 ಜಿಲ್ಲೆಗಳ 316 ಕೇಂದ್ರಗಳಲ್ಲಿ ಕೆ-ಸೆಟ್ ಪರೀಕ್ಷೆ

**ಬೆಂಗಳೂರು:** ಪದವಿ ಕಾಲೇಜು ಉಪನ್ಯಾಸಕರ ಅರ್ಹತಾ ಪರೀಕ್ಷೆಯಾದ ಕೆ–ಸೆಟ್ ಪರೀಕ್ಷೆಯನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಭಾನುವಾರ (ನ.2) ನಡೆಸಲಿದ್ದು, ಕಟ್ಟುನಿಟ್ಟಿನ ಬಿಗಿ ಕ್ರಮಗಳನ್ನು ಕೈಗೊಂಡಿದೆ. ಈ ಬಾರಿಯೂ ಮುಖಚಹರೆ ಪತ್ತೆ ತಂತ್ರಜ್ಞಾನದ ಮೂಲಕ ಅಭ್ಯರ್ಥಿಗಳನ್ನು ತಪಾಸಣೆ ಮಾಡಿಯೇ ಪರೀಕ್ಷಾ ಕೇಂದ್ರಕ್ಕೆ ಬಿಡಲಾಗುತ್ತದೆ. ಕ್ಯಾಮರಾ ಕಣ್ಗಾವಲಿನಲ್ಲಿ ಪರೀಕ್ಷೆ ನಡೆಯಲಿದೆ ಎಂದು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಕಾರ್ಯನಿರ್ವಾಹಕ ನಿರ್ದೇಶಕ ಎಚ್.ಪ್ರಸನ್ನ ತಿಳಿಸಿದ್ದಾರೆ.

ಒಟ್ಟು 33 ವಿಷಯಗಳಿಗೆ ನಡೆಯುವ ಕೆ–ಸೆಟ್ ಪರೀಕ್ಷೆಯನ್ನು 1.36 ಲಕ್ಷ ಮಂದಿ ತೆಗೆದುಕೊಂಡಿದ್ದಾರೆ. 11 ಜಿಲ್ಲೆಗಳ (ಬೆಂಗಳೂರು, ಬಳ್ಳಾರಿ, ಬೆಳಗಾವಿ, ದಾವಣಗೆರೆ, ಧಾರವಾಡ, ಕಲಬುರ್ಗಿ, ಮಂಗಳೂರು, ಮೈಸೂರು, ಶಿವಮೊಗ್ಗ, ತುಮಕೂರು, ವಿಜಯಪುರ) 316 ಕೇಂದ್ರಗಳಲ್ಲಿ ಪರೀಕ್ಷೆ ನಡೆಯಲಿದೆ ಅವರು ವಿವರಿಸಿದ್ದಾರೆ. ಬೆಂಗಳೂರಿನಲ್ಲಿ ಎಲ್ಲ 33 ವಿಷಯಗಳ ಪರೀಕ್ಷೆ ನಡೆದರೆ, ಉಳಿದ ಜಿಲ್ಲೆಗಳಲ್ಲಿ 11 ವಿಷಯಗಳ ಪರೀಕ್ಷೆ ಗಳು ಮಾತ್ರ ನಡೆಯಲಿವೆ. ಈ ಪರೀಕ್ಷೆಗಳಿಗೆ ನೆಗೆಟಿವ್ ಮೌಲ್ಯಮಾಪನ ಇರುವುದಿಲ್ಲ ಎಂದು ಅವರು ತಿಳಿಸಿದ್ದಾರೆ. ಬೆಳಿಗ್ಗೆ 10ರಿಂದ ಮಧ್ಯಾಹ್ನ 1ಗಂಟೆವರೆಗೆ ಪರೀಕ್ಷೆಗಳು ನಡೆಯಲಿದ್ದು, ಒಮ್ಮೆಗೇ ಎರಡೂ ಪತ್ರಿಕೆಗಳ (ಪತ್ರಿಕೆ 1 & 2) ಪ್ರಶ್ನೆ ಪತ್ರಿಕೆಗಳನ್ನು ನೀಡಲಾಗುತ್ತದೆ. ಅಭ್ಯರ್ಥಿಗಳು ಮೂರು ಗಂಟೆ ಅವಧಿಯಲ್ಲಿ 100 ಅಂಕಗಳ ಸಾಮಾನ್ಯ ಜ್ಞಾನ ಮತ್ತು 200 ಅಂಕಗಳ ವಿಷಯವಾರು ಪತ್ರಿಕೆಗಳಿಗೆ ಉತ್ತರಿಸಬೇಕಾಗುತ್ತದೆ. ಎರಡೂ ಪತ್ರಿಕೆಗಳಿಗೆ ಪ್ರತ್ಯೇಕ ಓಎಂಆರ್ ನೀಡುತ್ತಿದ್ದು, ಆಯಾಯ ಓಎಂಆರ್ ನಲ್ಲೇ ಅದರ ಉತ್ತರಗಳನ್ನು ಎಚ್ಚರಿಕೆಯಿಂದ ದಾಖಲಿಸಬೇಕು ಎಂದು ಅವರು ಸಲಹೆ ನೀಡಿದ್ದಾರೆ. ಈ ಹಿಂದಿನ ಎಲ್ಲ ಪರೀಕ್ಷೆಗಳ ಹಾಗೆಯೇ ಈ ಪರೀಕ್ಷೆಗೂ ವಸ್ತ್ರ ಸಂಹಿತೆಯನ್ನು ಕಡ್ಡಾಯವಾಗಿ ಪಾಲಿಸಬೇಕು. ಪರೀಕ್ಷಾ ಕೇಂದ್ರಗಳ ಪ್ರವೇಶಕ್ಕೂ ಮುನ್ನ ಅಭ್ಯರ್ಥಿಗಳನ್ನು ಮುಖ ಚಹರೆ ಪತ್ತೆ ಮೂಲಕ ತೀವ್ರ ಶೋಧ ನಡೆಸಿಯೇ ಒಳ ಬಿಡಲಾಗುತ್ತದೆ. ಇದಕ್ಕೆ ಅಗತ್ಯ ಪೊಲೀಸ್ ಮತ್ತು ಗೃಹ ರಕ್ಷಕ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ ಎಂದು ಅವರು ವಿವರಿಸಿದ್ದಾರೆ.

# ಅಲೆಮಾರಿ ಸಮುದಾಯಕ್ಕೆ ಶೇ.1ರಷ್ಟು ಮೀಸಲಾತಿಗೆ ಕ್ರಮ

**ಬೆಂಗಳೂರು:** ಪರಿಶಿಷ್ಟ ಜಾತಿಯಲ್ಲಿ ಒಳಮೀಸಲಾತಿ ನೀಡದಿರುವುದರಿಂದ ಮುನಿಸಿಕೊಂಡು ಹೈಕೋರ್ಟ್ ಮೆಟ್ಟಿಲೇರಿದ್ದ ಅಲೆಮಾರಿ ಸಮುದಾಯಕ್ಕೆ ಶೇ.1ರಷ್ಟು ಮೀಸಲಾತಿ ನೀಡಲು ರಾಜ್ಯ ಸರ್ಕಾರ ಬದ್ಧವಾಗಿದೆ ಎಂದು ಸಿಎಂ ಸಿದ್ದರಾಮಯ್ಯ ತಿಳಿಸಿದರು.

ವಿಧಾನಸೌಧದಲ್ಲಿ ಶುಕ್ರವಾರ ಸಿಎಂ ಅಧ್ಯಕ್ಷತೆಯಲ್ಲಿ ಸಮಾಜ ಕಲ್ಯಾಣ ಇಲಾಖೆ ಸಚಿವ ಹೆಚ್.ಸಿ.ಮಹದೇವಪ್ಪ ಅವರು ಒಳಮೀಸಲಾತಿ ಅಲೆಮಾರಿ ಒಕ್ಕೂಟದ ಪದಾಧಿಕಾರಿಗಳೊಂದಿಗೆ ಸಭೆ ನಡೆಸಿದರು. ಈ ಸಂದರ್ಭದಲ್ಲಿ ಶೇ.1ರಷ್ಟು ಮೀಸಲಾತಿ ನೀಡಬೇಕು, ಅಲೆಮಾರಿ ನಿಗಮ ಸ್ಥಾಪಿಸಿ ಪ್ರತ್ಯೇಕ ಪ್ಯಾಕೇಜ್ ಘೋಷಿಸಬೇಕು ಎಂಬುದೂ ಸೇರಿದಂತೆ ವಿವಿಧ ಬೇಡಿಕೆಗಳನ್ನು ಅಲೆಮಾರಿ ಒಕ್ಕೂಟದ ನಿಯೋಗ ನೀಡಿತು.

ಸಮುದಾಯದ ನಾಯಕರೊಂದಿಗೆ ಸಭೆಯ ಬಳಿಕ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಸಾಮಾಜಿಕ ಪರಿಕಲ್ಪನೆಯಡಿ ಶೇ.1ರಷ್ಟು ಮೀಸಲಾತಿ ನೀಡಲು ಸರ್ಕಾರ ಬದ್ಧವಾಗಿದೆ. ಈ ಸಂಬಂಧ ಕಾನೂನು ಇಲಾಖೆಯೊಂದಿಗೆ ಚರ್ಚಿಸಿ ಕ್ರಮ ಕೈಗೊಳ್ಳಲಾಗುವುದು. ಮೀಸಲು ಜಾರಿಯಾದರೆ ರಾಜ್ಯದಲ್ಲಿರುವ 5.22 ಲಕ್ಷ ಅಲೆಮಾರಿ ಕುಟುಂಬಕ್ಕೆ ಅನುಕೂಲವಾಗಲಿದೆ ಎಂದರು.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಸುಧಾರಣೆಗೆ ಎಸ್‌ಸಿಪಿ ಹಾಗೂ ಟಿಎಸ್‌ಪಿ ಕಾರ್ಯಕ್ರಮಗಳನ್ನು ಜಾರಿಗೊಳಿಸಿದ್ದೇ ನಮ್ಮ ಸರ್ಕಾರ. ಪ್ರತಿಯೊಬ್ಬರಿಗೂ ಪರಿಹಾರ ಸಿಗಲಿ ಎನ್ನುವುದೇ ಸರ್ಕಾರದ ಉದ್ದೇಶ. ಯಾವುದೇ ಜಾತಿಯೊಳಗೆ ಇನ್ನೊಂದನ್ನು ಸೇರಿಸುವ, ಯಾವುದೇ ಸಮುದಾಯಕ್ಕೆ ಅನ್ಯಾಯ ಮಾಡುವ ಉದ್ದೇಶ ಸರ್ಕಾರಕ್ಕಿಲ್ಲ. ಇದಕ್ಕೊಂದು ಪರಿಹಾರ ಹುಡುಕಿ, ನ್ಯಾಯ ಒದಗಿಸಲಾಗುವುದು ಎಂದು ಹೇಳಿದರು.



ಅಲೆಮಾರಿಗಳ ಅಭಿವೃದ್ಧಿ ನಿಗಮ ಸ್ಥಾಪನೆ ಹಾಗೂ ವಿಶೇಷ ಆರ್ಥಿಕ ಅನುದಾನ ನೀಡುವಂತೆ ನಿಯೋಗ ಬೇಡಿಕೆ ಇಟ್ಟಿತ್ತು. ಶೇ.1ರಷ್ಟು ಮೀಸಲಾತಿ ಕಲ್ಪಿಸಲು ಕಾನೂನು ತಜ್ಞರೊಂದಿಗೆ ಚರ್ಚಿಸಲಾಗುವುದು. ನಿಗಮ ಸ್ಥಾಪನೆಗೆ ಅಭ್ಯಂತರವಿಲ್ಲ.

ಆರ್ಥಿಕ ಅನುದಾನ ಸೇರಿದಂತೆ ಪ್ರಮುಖ ಮೂರು ಬೇಡಿಕೆಗಳ ಈಡೇರಿಸಲು ಸಮಯಾವಕಾಶ ನೀಡುವಂತೆ ಹೇಳಿದ್ದೇನೆ. ನ್ಯಾಯಾಲಯದಲ್ಲಿ ದಾಖಲಾಗಿರುವ ಪ್ರಕರಣವನ್ನು ಹಿಂಪಡೆಯಬೇಕೆಂದು ಮನವಿ ಮಾಡಿದ್ದೇನೆ ಎಂದು ಸಿದ್ದರಾಮಯ್ಯ ತಿಳಿಸಿದರು.

ಶೇ.1ರಷ್ಟು ಮೀಸಲಾತಿ ಕಲ್ಪಿಸುವುದೂ ಸೇರಿದಂತೆ ಇನ್ನಿತರ ಬೇಡಿಕೆಗಳನ್ನು ಈಡೇರಿಸುವುದಾಗಿ ಸರ್ಕಾರ ಭರವಸೆ ನೀಡಿದೆ. ನ್ಯಾಯಾಲಯದಲ್ಲಿರುವ ಪ್ರಕರಣವನ್ನು ಹಿಂಪಡೆಯುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮನವಿ ಮಾಡಿದ್ದಾರೆ. ಕೇಸ್ ಹಿಂಪಡೆಯುವ ಸಂಬಂಧ ಇನ್ನೂ ನಿರ್ಧರಿಸಿಲ್ಲ. ಮುಂದಿನ ದಿನಗಳಲ್ಲಿ ಬೇಡಿಕೆ ಈಡೇರಿಕೆ ಪ್ರಕ್ರಿಯೆ ಗಮನಿಸಿ ನಿರ್ಧಾರ ಕೈಗೊಳ್ಳಲಾಗುವುದು ಎಂದು ಕರ್ನಾಟಕದ ಅಸ್ಪೃಶ್ಯ ಅಲೆಮಾರಿ ಸಮುದಾಯಗಳ ಮಹಾಒಕ್ಕೂಟದ ರಾಜಾಧ್ಯಕ್ಷ ಶೇಷಾಪ್ಪ ತಿಳಿಸಿದ್ದಾರೆ.

ನಿವೃತ್ತ ನ್ಯಾ.ನಾಗಮೋಹನ್ ದಾಸ್ ಅವರು ನೀಡಿದ ವರದಿಯಲ್ಲಿ ಅಲೆಮಾರಿ ಸಮುದಾಯಕ್ಕೆ ಶೇ.1ರಷ್ಟು ಮೀಸಲಾತಿ ನೀಡಬೇಕೆಂದು ಶಿಫಾರಸು ಮಾಡಿದ್ದರು. ಆದರೆ, ಸರ್ಕಾರ ಇದನ್ನು ಮಾನ್ಯ ಮಾಡಿರಲಿಲ್ಲ. ಸರ್ಕಾರದ ನಡೆ ವಿರೋಧಿಸಿ ಕರ್ನಾಟಕದ ಅಸ್ಪೃಶ್ಯ ಅಲೆಮಾರಿ ಸಮುದಾಯಗಳ ಮಹಾ ಒಕ್ಕೂಟದ ನಾಯಕರು ಹೈಕೋರ್ಟ್ ಮೊರೆ ಹೋಗಿದ್ದರು.

ಈ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಾಲಯ ಒಳಮೀಸಲಾತಿ ಪ್ರಕ್ರಿಯೆ ಅಂತಿಮಗೊಳ್ಳುವವರೆಗೂ ಬ್ಯಾಕ್ ಲಾಕ್ ಹುದ್ದೆಗಳಿಗೆ ನೇಮಕಾತಿ ನೀಡಬಾರದೆಂದು ಕೆಪಿಎಸ್ಸಿ ಹಾಗೂ ಕೆಇಎಗೆ ಆದೇಶಿಸಿ ನ.13ಕ್ಕೆ ವಿಚಾರಣೆ ಮುಂದೂಡಿತ್ತು.



## ಶತ್ರು ದೇಶಗಳಿಗೆ ನುಗ್ಗಿ ಹೊಡೆಯುವ ಸಾಮರ್ಥ್ಯ ಭಾರತಕ್ಕಿದೆ

**ಅಹಮದಾಬಾದ್:** ಶತ್ರುಗಳಿಗೆ ಭಾರತದ ಪ್ರತಿಕ್ರಿಯೆ ಈಗ ನಿರ್ಣಾಯಕವಾಗಿದೆ. ನಾವೀಗ ಬಲಿಷ್ಠರಾಗಿದ್ದೇವೆ ಎಂದು ಪ್ರಧಾನಿ ನರೇಂದ್ರ ಮೋದಿ ಇಂದಿಲ್ಲಿ ಕೆಲವು ರಾಷ್ಟ್ರಗಳಿಗೆ ಪರೋಕ್ಷ ಎಚ್ಚರಿಕೆ ನೀಡಿದ್ದಾರೆ.

ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ 150 ನೇ ಜನ್ಮ ದಿನಾಚರಣೆಯ ಸಂದರ್ಭವನ್ನು ಬಳಸಿಕೊಂಡು, ಭಾರತದ ಶತ್ರುಗಳಿಗೆ ಭಾರತದ ಪ್ರತಿಕ್ರಿಯೆ ಈಗ ನಿರ್ಣಾಯಕ, ಬಲಿಷ್ಠ ಮತ್ತು ಜಗತ್ತಿಗೆ ಗೋಚರಿಸುತ್ತದೆ ಎಂದು ಅವರು ಪ್ರತಿಪಾದಿಸಿದರು. ಆಪರೇಷನ್ ಸಿಂಧೂರ್ ಕಾರ್ಯಚರಣೆ ನಮ ಸೇನೆ ಶತ್ರು ಪ್ರದೇಶವನ್ನು ಪ್ರವೇಶಿಸಿ ದಾಳಿ ಮಾಡಬಹುದು ಎಂಬ ಸ್ಪಷ್ಟ ಸಂದೇಶವನ್ನು ರವಾನಿಸಿದೆ ಎಂದು ಹೇಳಿದರು.ಆಪರೇಷನ್ ಸಿಂಧೂರ್ ಸಮಯದಲ್ಲಿ, ಇಡೀ ಜಗತ್ತು ಭಾರತದ ಕಡೆಗೆ ಕಣ್ಣು ಎತ್ತಲು ಧೈರ್ಯ ಮಾಡಿದರೆ, ಭಾರತ್ ಘರ್ ಮೇ ಘುಸ್ ಕರ್ ಮಾರ್ತಾ ಹೈ (ಭಾರತ ಶತ್ರುಗಳ ಪ್ರದೇಶಕ್ಕೆ ನುಗ್ಗಿ ಹೊಡೆಯುತ್ತದೆ) ಎಂದು ಹೇಳಿದರು. ಇಂದು, ಪಾಕಿಸ್ತಾನ ಮತ್ತು ಭಯೋತ್ಪಾದನೆಯನ್ನು ನಿರ್ವಹಿಸುವವರಿಗೆ ಭಾರತದ ನಿಜವಾದ ಶಕ್ತಿ ಏನೆಂದು ತಿಳಿದಿದೆ ಎಂದು ಪ್ರಧಾನಿ ಹೇಳಿದರು, ದೇಶದ ದೃಢವಾದ ಭದ್ರತಾ ನಿಲುವನ್ನು ಸರ್ದಾರ್ ಪಟೇಲ್ ಅವರ ಸ್ವಾಭಿಮಾನಿ ಮತ್ತು ಏಕೀಕೃತ ಭಾರತದ ದೃಷ್ಟಿಕೋನಕ್ಕೆ ಜೋಡಿಸಿದರು.

ಕಾಂಗ್ರೆಸ್ ಪಕ್ಷ ಪಟೇಲ್ ಅವರ ದೃಷ್ಟಿಕೋನವನ್ನು ಮರೆತಿದೆ ಎಂದು ಅವರು ಆರೋಪಿಸಿದರು. ಪಟೇಲ್ ಅವರ ಆದರ್ಶಗಳು ಬಾಹ್ಯ ಬೆದರಿಕೆಗಳಿಗೆ ಮಾತ್ರವಲ್ಲದೆ ನಕ್ಸಲಿಸಂ ಮತ್ತು ಒಳನುಸುಳುವಿಕೆಯಂತಹ ಆಂತರಿಕ ಸವಾಲುಗಳಿಗೂ ಸರ್ಕಾರದ ವಿಧಾನವನ್ನು ಮಾರ್ಗದರ್ಶಿಸಿದವು ಎಂದು ಪ್ರಧಾನಿ ಮೋದಿ ಹೇಳಿದರು. 2014 ರ ಮೊದಲು, ನಕ್ಸಲರು ದೇಶದ ದೊಡ್ಡ ಭಾಗಗಳಲ್ಲಿ ತಮ್ಮದೇ ಆದ ಆಡಳಿತವನ್ನು ನಡೆಸುತ್ತಿದ್ದರು. ಶಾಲೆಗಳು, ಕಾಲೇಜುಗಳು ಮತ್ತು ಆಸ್ಪತ್ರೆಗಳನ್ನು ಸ್ಫೋಟಿಸಲಾಯಿತು ಮತ್ತು ಆಡಳಿತವು ಅಸಹಾಯಕವಾಗಿ ಕಾಣುತ್ತಿತ್ತು. ನಾವು ನಗರ ನಕ್ಸಲರ ವಿರುದ್ಧ ದೃಢವಾಗಿ ಕಾರ್ಯನಿರ್ವಹಿಸಿದೆವು, ಮತ್ತು ಇಂದು, ಫಲಿತಾಂಶಗಳು ಗೋಚರಿಸುತ್ತಿವೆ ಈ ಹಿಂದೆ 125 ಪೀಡಿತ ಜಿಲ್ಲೆಗಳಲ್ಲಿ ಕೇವಲ 11 ಮಾತ್ರ ಉಳಿದಿವೆ ಮತ್ತು ನಕ್ಸಲ್ ಪ್ರಾಬಲ್ಯ ಮೂರಕ್ಕೆ ಸೀಮಿತವಾಗಿದೆ ಎಂದು ಅವರು ಹೇಳಿದರು.



### ಅನಿತಾ ಸಂಸ್ಥೆಯಲ್ಲಿ ಶಾಸನಬದ್ಧ ಮಾನ್ಯತೆ ಪಡೆದ ಕನ್ನಡ ನಾಡ ಧ್ವಜ ಧ್ವಜಾರೋಹಣ

# ರಾಜ್ಯದಲ್ಲಿಯೇ ಪ್ರಪ್ರಥಮ ಬಾರಿಗೆ ಹಾರಾಡಲಿದೆ ಕನ್ನಡ ನಾಡ ಧ್ವಜ

**ವರದಿ: ಶಿವಾನಂದ ಮುಧೋಳ**

**ಮೂಡಲಗಿ:** ರಾಜ್ಯದಲ್ಲಿಯೇ ಪ್ರಪ್ರಥಮ ಬಾರಿಗೆ ಮೂಡಲಗಿಯ ಅನಿತಾ ಗ್ರಾಮೀಣ ಅಭಿವೃದ್ಧಿ ಸಂಸ್ಥೆಯಲ್ಲಿ ಶಾಸನಬದ್ಧ ಮಾನ್ಯತೆ ಪಡೆದ "ಕನ್ನಡ ನಾಡ ಧ್ವಜ" ಧ್ವಜಾರೋಹಣ ಕಾರ್ಯಕ್ರಮವು ನ 1 ರಂದು ಮುಂಜಾನೆ 9 ಗಂಟೆಗೆ ಸರ್ಕಾರದ ಗಮನ ಸೆಳೆಯಲು ರಾಜ್ಯೋತ್ಸವದ ವಿಶೇಷ ಕಾರ್ಯಕ್ರಮ ಹ ವಿ ್ಮ ಕೆ ೂ ಳ್ಳ ಲಾ ಗಿ ದೆ ಎಂದು ಉತ್ತರ ಕರ್ನಾಟಕ ಹೋರಾಟ ಸಮೀತಿ ಅಧ್ಯಕ್ಷ ಹಾಗೂ ಮಾಹಿತಿ ಹಕ್ಕು ಕಾರ್ಯಕರ್ತ ಭೀಮಪ್ಪ ಗುಂ ಗಡಾದ ಹೇಳಿದರು

**ಸರ್ಕಾರದ ಗಮನ ಸೆಳೆಯಲು ವಿಶೇಷ ಕಾರ್ಯಕ್ರಮ**

ಶುಕ್ರವಾರ ತಮ್ಮ ನಿವಾಸದಲ್ಲಿ ಕರೆದ ಪತ್ರಿಕಾ ಗೋಷ್ಠಿಯಲ್ಲಿ ಮಾತನಾಡಿ, ನಾಡಿನ ಹಿರಿಯ ಚಿಂತಕರು ಸಾಹಿತಿಗಳು ಹಾಗೂ ಪ್ರಮುಖ ಕನ್ನಡ ಪರ ಸಂಘಟನೆಗಳ ಮುಖಂಡರುಗಳೊಂದಿಗೆ ಚರ್ಚಿಸಿದ ನಂತರ ಈಗಿರುವ "ಕನ್ನಡ ನಾಡಧ್ವಜ" ಕ್ಕೆ ಹೊಸ ವಿನ್ಯಾಸವೊಂದನ್ನು ಸಿದ್ಧಪಡಿಸಿ ಸರ್ಕಾರಕ್ಕೆ ಸಲ್ಲಿಸಿತು ಸಾಕಷ್ಟು ಪರ ವಿರೋಧಗಳ ನಡುವೆಯು ಈ ಸಮೀತಿಯು ಸಿದ್ಧಪಡಿಸಿರುವ ಹೊಸ ವಿನ್ಯಾಸದ "ಕನ್ನಡ ನಾಡಧ್ವಜ"ಕ್ಕೆ 7 ಮಾರ್ಚ 2018 ರಂದು ಆಗಿನ ಮತ್ತು ಇಗೀನ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರವು ಸಚಿವ ಸಂಪುಟದಲ್ಲಿ ಅಂಗೀಕರಿಸುವ ಮೂಲಕ ಈ ಕನ್ನಡ ನಾಡಧ್ವಜಕ್ಕೆ ಶಾಸನಬದ್ಧ ಮಾನ್ಯತೆ ಕೂಡಾ ನೀಡಿತ್ತು,



ರಾಜ್ಯದ ಭಾಷೆ ಮತ್ತು ಸಂಸ್ಕೃತಿಯ ಸಂಕೇತ ವಾಗಿರುವ ಕನ್ನಡ ನಾಡಿನ ಹೆಮ್ಮೆಯ ಪ್ರತೀಕವಾಗಿರುವ "ಕನ್ನಡ ನಾಡಧ್ವಜ" ವನ್ನು ರಾಜ್ಯದ ಎಲ್ಲ ಕಛೇರಿಗಳ ಮೇಲೆ ದಿನನಿತ್ಯ ಹಾರಿಸುವ ಸಲುವಾಗಿ ಸರ್ಕಾರಕ್ಕೆ ಮನವಿ ಸಲ್ಲಿಸಿದ್ದರಿಂದ ಈ ಕುರಿತು ಸರ್ಕಾರವು ಅಡ್ವಕೇಟ್ ಜನರಲ್ ರವರ ಅಭಿಪ್ರಾಯ ಕೇಳಿ ಪತ್ರ ಬರೆದಿತ್ತು. ರಾಷ್ಟ್ರಧ್ವಜಕ್ಕೆ ಚ್ಯುತಿ ಬರದ ರೀತಿಯಲ್ಲಿ ಶಾಸನಬದ್ಧ ಮಾನ್ಯತೆ ಪಡೆದ "ಕನ್ನಡ ನಾಡಧ್ವಜ" ವನ್ನು ಹಾರಿಸಲ ಕಾನೂನಿನಲ್ಲಿ ಯಾವುದೇ ರೀಯ ತೊಂದರೆಗಳು ಇರುವುದಿಲ್ಲವೆಂದು ಉಚ್ಚ ನ್ಯಾಯಾಲಯದ ಅಡ್ವಕೇಟ್ ಜನರಲ್‌ರವರು ದಿ: 08-10-2015 ರಂದು ಸರ್ಕಾರಕ್ಕೆ ತಮ್ಮ ಲಿಖಿತ ಅಭಿಪ್ರಾಯ ತಿಳಿಸಿದ್ದಾರೆ ಎಂದರು. ಶಾಸನಬದ್ದ ಮಾನ್ಯತೆ ಪಡೆದ ಈ "ಕನ್ನಡ ನಾಡಧ್ವಜ" ವನ್ನು ಸರ್ಕಾರಿ ಆರೆ ಸರ್ಕಾರಿ ಕಛೇರಿಗಳ ಕಟ್ಟಡಗಳ ಮೇಲೆ ದಿನನಿತ್ಯ ಹಾರಿಸಲು ಸರ್ಕಾರ ಆದೇಶ ಹೊರಡಿಸದೇ ಇದ್ದಾಗ ಸರ್ಕಾರದ ವಿಳಂಬ ನೀತಿಯನ್ನು ಪ್ರಶ್ನಿಸಿ ಉಚ್ಚ ನ್ಯಾಯಾಲಯದಲ್ಲಿ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಕೂಡಾ ದಾಖಲಿಸಲಾಗಿತ್ತು ಇದರ ವಿಚಾರಣೆಯನ್ನು ದಿ: 25-10-2024 ರಂದು ಕೈಗೆತ್ತಿಕೊಂಡಿದ್ದ ನ್ಯಾಯಪೀಠವು ಪ್ರತ್ಯೇಕ ನಾಡಧ್ವಜ ಹೊಂದುವ ವಿಚಾರವು ನ್ಯಾಯಾಲಯದ ವ್ಯಾಪ್ತಿಗೆ ಬರುವುದಿಲ್ಲ ಆದರೂ ಕೂಡಾ ಅರ್ಜಿದಾರರು ಸರ್ಕಾರದ ಮುಂದೆ ಸಲ್ಲಿಸಿರುವ ಮನವಿ ಮುಂದುವರಿಸಬಹುದು ಎಂದು ಅಭಿಪ್ರಾಯ ಪಟ್ಟು ಅರ್ಜಿಯನ್ನು ವಜಾ ಮಾಡಿತು,

ಈ ಕಾರಣದಿಂದಾಗಿ ಮತ್ತು ಮಾನ್ಯತೆ ಪಡೆದ ಧ್ವಜವನ್ನು ರಾಷ್ಟ್ರಧ್ವಜಕ್ಕೆ ಚ್ಯುತಿ ಬರದಂತೆ ಹಾರಿಸಲು ಯಾವುದೇ ತೊಂದರೆಗಳು ಇರುವುದಿಲ್ಲ ಎಂದು ಅಡ್ವೋಕೇಟ್ ಜನರಲ್ ರವರು ಅಭಿಪ್ರಾಯ ನೀಡಿರುವುದರಿಂದ ರಾಜ್ಯದಲ್ಲಿಯೇ ಪ್ರಪ್ರಥಮ ಬಾರಿಗೆ ಶಾಸನಬದ್ಧ ಮಾನ್ಯತೆ ಪಡೆದಿರುವ "ಕನ್ನಡ ನಾಡಧ್ವಜ" ವನ್ನು ಸಂಭ್ರಮ ಸಡಗರಗಳಿಂದ ಧ್ವಜಾರೋಹಣ ಮಾಡಲಾಗುವುದು ಎಂದರು

ಪತ್ರಿಕಾ ಗೋಷ್ಠಿಯಲ್ಲಿ ಮುಖಂಡ ಸಿದ್ದಣ್ಣ ಬಳಿಗಾರ ಆಚಾರ್ಯ ಕಲಾ ವಿಜ್ಞಾನ ಮತ್ತು ವಾಣಿಜ್ಯ ಮಹಾವಿದ್ಯಾಲಯದ ಪ್ರೀನ್ಸಿಪಾಲ ಪ್ರವೀಣ ಕುಲಗೋಡ,ಸಮರ್ಥ ಕನ್ನಡ ಮಾದ್ಯಮ ಶಾಲೆಯ ಪ್ರಧಾನ ಗುರು ಮಹಾಂತೇಶ ಮಾಳಿ ಇದ್ದರು.

# ಹೂವಿನ ಗಿಡ ನೆಟ್ಟು ಕನ್ನಡ ರಾಜ್ಯೋತ್ಸವಕ್ಕೆ ಚಾಲನೆ



**ನೇಸರಗಿ:** ಗ್ರಾಮದ ಜತ್ತ ಜಂಬೋಟಿ ರಸ್ತೆಯ ಗ್ರಾಮದ ಗ್ಯಾರೇಜದಿಂದ ಹಿಡಿದು ಶ್ರೀ ಬಸವೇಶ್ವರ ಸರ್ಕಲ್ (ನೇಸರಗಿ ಕ್ರಾಸ್ ) ವರೆಗೆ ರಸ್ತೆ ಮದ್ಯ ಡಿವೈಡರ ಒಳಿಗಿನ ಭಾಗದ ಎಲ್ಲ ತರಹದ ಹೂವಿನ ಗಿಡಗಳನ್ನು ನೆಟ್ಟು ನಾಳೆ ನಡೆಯುವ ಭರ್ಜರಿ 70 ನೇ ಕರ್ನಾಟಕ ರಾಜ್ಯೋತ್ಸವದ ಮೆರವಣಿಗೆ ಅಂಗವಾಗಿ ಗ್ರಾಮದ ಪಂಚಾಯತ, ಸಂಘ, ಸಂಸ್ಥೆಗಳು, ನೇಸರಗಿ ಗೆಳೆಯರ ಬಳಗ, ರಾಜ್ಯೋತ್ಸವ ಉತ್ಸವ ಕಮಿಟಿ, ಮಾಜಿ ಸೈನಿಕರ ಸಂಘ, ಡಿ ಎಸ್ ಎಸ್, ಎಲ್ಲ ಸಮಾಜದ ಮುಖಂಡರ ಮತ್ತು ಯುವಕರ ನೇತೃತ್ವದಲ್ಲಿ ಹೂ ಗಿಡಗಳನ್ನು ನಾಟಿ ಮಾಡಿ ವಿಶಿಷ್ಟವಾಗಿ ಕರ್ನಾಟಕ ರಾಜ್ಯೋತ್ಸವವನ್ನು ಆಚರಿಸಲು ತಯಾರಿ ನಡೆಸಿದ್ದಾರೆ. ಗ್ರಾಮದ ಎಲ್ಲ ರಸ್ತೆಗಳಲ್ಲಿ ಕನ್ನಡ ಧ್ವಜ ರಾರಾಜಿಸುತ್ತಿದ್ದು, ಗ್ಯಾರೇಜ್ ನಿಂದ ನೇಸರಗಿ ಕ್ರಾಸ್ ವರೆಗೆ ನೋಡುಗರ ಕಣ್ಣು, ಮನ ಸೆಳೆಯುತ್ತಿವೆ.

ಈ ಕಾರ್ಯಕ್ರಮದಲ್ಲಿ ಪಂಚಾಯತ್ ಅಧ್ಯಕ್ಷರು, ಸದಸ್ಯರು, ಸರ್ಕಾರಿ ಅಧಿಕಾರಿಗಳು, ಎಲ್ಲ ಸಂಘ ಸಂಸ್ಥೆಗಳ ಪದಾಧಿಕಾರಿಗಳು, ಎಲ್ಲ ಸಮಾಜದ ಮುಖಂಡರು, ಯುವಕರು ಭಾಗವಹಿಸಿದ್ದರು.



# ಮಾಜಿ ಪ್ರಧಾನಿ ಇಂದಿರಾಗಾಂಧಿ ಪುಣ್ಯಸ್ಮರಣೆ

**ರಾಯಬಾಗ:** ಪಟ್ಟಣದಲ್ಲಿ ಭಾರತರತ್ನ ಉಕ್ಕಿನ ಮಹಿಳೆ ದುರ್ಗೆಯ ಸ್ವರೂಪ ಮಾಜಿ ಪ್ರಧಾನಿ ಇಂದಿರಾಗಾಂಧಿ ಅವರ ಪುಣ್ಯಸ್ಮರಣೆಯ ನಿಮಿತ್ಯ ಇಂದು ರಾಯಬಾಗ ಕಾಂಗ್ರೆಸ್ ಕಾರ್ಯಾಲಯದಲ್ಲಿ ಅವರ ಭಾವಚಿತ್ರಕ್ಕೆ ಪೂಜೆ ಮಾಡುವ ಮೂಲಕ ಅವರಿಗೆ ಗೌರವಪೂರ್ಣ ನಮನಗಳನ್ನು ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಡಿಸಿಸಿ ಬ್ಯಾಂಕ್ ನಿರ್ದೇಶಕರಾದ ಅಪ್ಪಾಸಾಬ ಕುಲಗುಡೆ ಟೌನ್ ಅಧ್ಯಕ್ಷರಾದ ಹಾಜಿ ಮುಲ್ಲಾ ಕೆಪಿಸಿಸಿ ಸದಸ್ಯರಾದ ದಿಲೀಪ ಜಮಾದಾರ ಕೆಡಿಪಿ ಸದಸ್ಯರಾದ ಶ್ರವಣಕುಮಾರ ಕಾಂಬಳೆ , ಡಿಸಿಸಿ ಎಸ್ ಸಿ ಅಧ್ಯಕ್ಷರಾದ ನಾಮದೇವ ಕಾಂಬಳೆ ಗ್ಯಾರಂಟಿ ಅಧ್ಯಕ್ಷರಾದ ಅರ್ಜುನ ಬಂಡಗರ ಪ.ಪಂ ನಾಮ ನಿರ್ದೇಶನ ಸದಸ್ಯರಾದ ದಿಲೀಪ ಪಾಯನ್ನವರ ಮುಖಂಡರಾದ ಮಾರುತಿ ನಾಯಿಕ ಫಾರೂಕ ಮೊಮೀನ ಯುನೂಸ ಅತ್ತಾರ ಅಜರ ಮುಲ್ಲಾ ಆದಂ ಪಠಾಣ ಹಾಗೂ ಅಪಾರ ಕಾಂಗ್ರೆಸ್ ಕಾರ್ಯಕರ್ತರು ಹಾಗೂ ಮುಖಂಡರು ಉಪಸ್ಥಿತರಿದ್ದರು

### ಅಗ್ನಿಶಾಮಕ ದಳದ ಜಾಗ ಗುರುತಿಸಲು ಅಧಿಕಾರಿಗಳ ವಿಳಂಬ

# ಅನುದಾನ ವಾಪಸ್ ಹೋದರೆ ಅಧಿಕಾರಿಗಳೆ ಹೊಣೆ: ಎಚ್ಚರಿಕೆ

**ತೇರದಾಳ:** ತೇರದಾಳ ಜನತೆಯ ಬಹುದಿನಗಳ ಬೇಡಿಕೆಯಾಗಿದ್ದ ಅಗ್ನಿಶಾಮಕ ದಳ ಕಟ್ಟಡ ನಿರ್ಮಾಣಕ್ಕೆ ಸರಕಾರ ಹನಗಂಡಿ ಗ್ರಾಮದ ಸರ್ವೆ ನಂಬರ 13/ಅರಲ್ಲಿ ಎರಡು ಎಕರೆ ಜಾಗ ನೀಡಿದೆ. ಜತೆಗೆ ಅಗ್ನಿಶಾಮಕ ಠಾಣೆ ಹಾಗೂ ಸಿಬ್ಬಂದಿಗಳ ವಸತಿ ಗೃಹ ನಿರ್ಮಾಣಕ್ಕೆ 3.10 ಕೋಟಿ ಅನುದಾನ ಮಂಜುರು ಮಾಡಿದೆ. ಆದರೆ ಅರಣ್ಯ ಹಾಗೂ ಕಂದಾಯ ಇಲಾಖೆ ಅಧಿಕಾರಿಗಳು ಅಗ್ನಿಶಾಮಕ ದಳಕ್ಕೆ ಸರಹದ್ದು ಗುರುತಿಸಿಕೊಡಲು ಉದ್ದೇಶ ಪೂರ್ವಕವಾಗಿ ವಿಳಂಬ ಮಾಡುತ್ತಿದ್ದಾರೆಂದು ಪುರಸಭೆ ಅಧ್ಯಕ್ಷೆ ಶಿಲ್ಪಾ ರೋಡಕರ, ಸದಸ್ಯರಾದ ಸಚಿನ ಕೊಡತೆ, ಸಂತೋಷ ಜಮಖಂಡಿ, ಸುರೇಶ ಕಬಾಡಗಿ, ಶೆಟ್ಟೆಪ್ಪ ಸುಣಗಾರ ಆರೋಪಿಸಿದ್ದಾರೆ.

ಈ ಕುರಿತು ಸುದ್ದಿಗಾರರೊಂದಿಗೆ ಮಾತನಾಡಿರುವ ಅವರು, ಅಗ್ನಿಶಾಮಕ ದಳಕ್ಕೆ ನೀಡಿರುವ ಜಾಗ ಅರಣ್ಯ ಇಲಾಖೆ ಜಾಗದ ಗಡಿಗೆ ಹೊಂದಿಕೊಂಡಿದೆ. ಇದರಿಂದ ಬೆಳಗಾವಿ ವಿಭಾಗದ ಅರಣ್ಯ ಇಲಾಖೆ ಅಧಿಕಾರಿಗಳು ಹಾಗೂ ತಾಲೂಕಿನ ಕಂದಾಯ ಇಲಾಖೆ ಅಧಿಕಾರಿಗಳು ಜಂಟಿಯಾಗಿ ಸರ್ವೆ ನಡೆಸುತ್ತಿದ್ದಾರೆ. ಸರ್ವೆ ಪ್ರಾರಂಭಿಸಿ ಸುಮಾರು ದಿನಗಳಾಗಿವೆ. ಇದುವರೆಗೆ ಪೂರ್ಣಗೊಳಿಸಿಲ್ಲ.

ಒಂದು ದಿನ ಬಂದರೆ ವಾರಗಟ್ಟಲೆ ಸರ್ವೆ ನಡೆಸಲು ಬರುವುದಿಲ್ಲ. ಈ ಬಗ್ಗೆ ಶಾಸಕ ಸಿದ್ದು ಸವದಿ, ಜಮಖಂಡಿ ಉಪವಿಭಾಗಾಧಿಕಾರಿ ಶ್ವೇತಾ ಬೀಡಕರ ತಕ್ಷಣವೇ ಸರ್ವೆ ಕಾರ್ಯ ಪೂರ್ಣಗೊಳಿಸುವಂತೆ ಅಧಿಕಾರಿಗಳಿಗೆ ಸೂಚನೆಯನ್ನು ನೀಡಿದ್ದಾರೆ. ಸರ್ವೆ ಕಾರ್ಯ ಬೇಗನೆ ಮುಗಿಯದಿದ್ದರೆ ಕಟ್ಟಡದ ಅನುದಾನ ವಾಪಸ್ ಹೋಗುವ ಸಾಧ್ಯತೆ ಇದೆ.

ಈ ಬಗ್ಗೆಯೂ ಉಭಯ ಇಲಾಖೆ ಅಧಿಕಾರಿಗಳಿಗೆ ಮನವರಿಕೆ ಮಾಡಿಕೊಟ್ಟರು ನಮ್ಮ ಬೇಡಿಕೆಗೆ ಸ್ಪಂದಿಸುತ್ತಿಲ್ಲ. ಬದಲಾಗಿ ವಿಳಂಬ ಮಾಡುತ್ತಿದ್ದಾರೆ. ಕೂಡಲೇ ಈ ಬಗ್ಗೆ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರು ಕಂದಾಯ ಹಾಗೂ ಅರಣ್ಯ ಇಲಾಖೆ ಅಧಿಕಾರಿಗಳಿಗೆ ತೇರದಾಳ ಅಗ್ನಿಶಾಮಕ ದಳದ ಜಾಗದ ಸರಹದ್ದು ಗುರುತಿಸಲು ಸೂಚನೆ ನೀಡಬೇಕು.

ಕಟ್ಟಡದ ಅನುದಾನ ವಾಪಸ್ ಹೋದರೆ ಅದಕ್ಕೆ ಕಂದಾಯ ಹಾಗೂ ಅರಣ್ಯ ಇಲಾಖೆ ಅಧಿಕಾರಿಗಳನ್ನೆ ನೇರ ಹೊಣೆಯನ್ನಾಗಿ ಮಾಡಿ ಅವರ ವಿರುದ್ಧ ಕ್ರಮ ಕೈಗೊಳ್ಳಲು ಬೀದಿಗಿಳಿದು ಹೋರಾಟ ನಡೆಸಬೇಕಾಗುತ್ತದೆ ಎಂದು ಪುರಸಭೆ ಮಾಜಿ ಅಧ್ಯಕ್ಷ ಹನಮಂತ ರೋಡನ್ನವರ, ಮುಖಂಡ ಶಂಕರ ಕುಂಬಾರ, ಸದಾಶಿವ ಹೊಸಮನಿ, ಕಾಶಿನಾಥ ರಾಠೋಡ ಎಚ್ಚರಿಕೆ ನೀಡಿದ್ದಾರೆ.

# ಮಾನಸಿಕ ಆರೋಗ್ಯ ಪುನರ್ ವಿಮರ್ಶೆ ಕಚೇರಿ ಉದ್ಘಾಟನೆ

**ವಿಜಯಪುರ:** ಜಿಲ್ಲಾಸ್ಪತ್ರೆಯಲ್ಲಿನ ಜಿಲ್ಲಾ ಮಾನಸಿಕ ಆರೋಗ್ಯ ಪುನರ ವಿಮರ್ಶಾ ಮಂಡಳಿಯ ಕಚೇರಿಯನ್ನು ಜಿಲ್ಲಾ ಪ್ರಧಾನ ಹಾಗೂ ಸತ್ರ ನ್ಯಾಯಾಧೀಶರಾದ ಹರೀಶ.ಎ ಹಾಗೂ ಒಂದನೇ ಹೆಚ್ಚುವರಿ ಜಿಲ್ಲಾ ನ್ಯಾಯಾಧೀಶರಾದ ಎಚ್.ಎ.ಮೋಹನ್ ಅವರ ಶುಕ್ರವಾರ ಉದ್ಘಾಟಿಸಿದರು.

ನ್ಯಾಯಾಧೀಶರಾದ ಹರೀಶ.ಎ ಅವರು ಈ ಸಂದರ್ಭದಲ್ಲಿ ಮಾತನಾಡಿ, ಮಾನಸಿಕ ಆರೋಗ್ಯದ ಮಹತ್ವ ಹಾಗೂ ಸಾರ್ವಜನಿಕರಲ್ಲಿ ಈ ಕುರಿತಾಗಿ ಶಿಬಿರಗಳ ಏರ್ಪಡಿಸುವ ಮೂಲಕ ಹೆಚ್ಚಿನ ಅರಿವು ಮೂಡಿಸುವ ಅಗತ್ಯವಿದೆ ಎಂದು ಹೇಳಿದರು. ಜಿಲ್ಲಾ ಶಸ್ತ್ರಚಿಕಿತ್ಸಕರಾದ ಶಿವಾನಂದ ಮಾಸ್ತಿಹೊಳಿ ಅವರು ಇಂದಿನ ದಿನಗಳಲ್ಲಿ ಪ್ರತಿಯೊಬ್ಬರಿಗೂ ಸಾಮಾಜಿಕ, ಆಧ್ಯಾತ್ಮಿಕ, ಮಾನಸಿಕ ಆರೋಗ್ಯದ ಮಹತ್ವದ ಕುರಿತು ತಿಳಿಸಿದರು.ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮದ ಮನೋವೈದ್ಯರಾದ ಮಂಜುನಾಥ ಮಸಳಿಯವರು ಜಿಲ್ಲಾ ಮಾನಸಿಕ ಆರೋಗ್ಯ ಪುನರ್ ವಿಮರ್ಶೆ ಮಂಡಳಿಯ ಕುರಿತು ಪ್ರಾಸ್ತಾವಿಕವಾಗಿ ಮಾತನಾಡಿದರು.

ಈ ಸಂದರ್ಭದಲಿ ಅರವಿಂದ ಹಾಗರಗಿ ಹಿರಿಯ ಸಿವಿಲ್ ನ್ಯಾಯಾಧೀಶರೂ ಆದ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಅರವಿಂದ ಹಾಗರಗಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಸಂಪತ್ ಗುಣಾರಿ ಸ್ಥಳೀಯ ವೈದ್ಯಾಧಿಕಾರಿ ಚಂದು ರಾಠೋಡ,ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮಾಧಿಕಾರಿಗಳಾದ ಅರ್ಚನಾ ಕುಲಕರ್ಣಿ ಮನೊರೋಗ ತಜ್ಞ ನಾಗರಾಜ ಹೆಚ್ ಬಗಾಲೆ ಕ್ಲಿನಿಕಲ್ ಸೈಕೋಲಾಜಿಸ್ಟ ಶ್ರೀಮತಿ ರೇಣುಕಾದೇವಿ, ಸೋಶಿಯಲ್ ಸೈಕೊಲಾಜಿಸ್ಟ ಚಂದ್ರು ಮಣ್ಣೂರ ಹಾಗೂ ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮದ ಸಿಬ್ಬಂದಿಗಳು ಉಪಸ್ಥಿತರಿದ್ದರು.



### ಜಿಲ್ಲೆಯ 65,217 ರೈತ ಫಲಾನುಭವಿಗಳ 72,909.36 ಹೆಕ್ಟರ್ ಪ್ರದೇಶ

# 63.16 ಕೋಟಿ ರೂ. ಪರಿಹಾರ ಮೊತ್ತ ವಿತರಣೆ

**ಧಾರವಾಡ:** 2025-26ನೇ ಸಾಲಿನಲ್ಲಿ ಆಗಸ್ಟ್-2025 ಮಾಹೆಯಲ್ಲಿ ಧಾರವಾಡ ಜಿಲ್ಲೆಯಲ್ಲಿ ನೈಸರ್ಗಿಕ ವಿಕೋಪಗಳಾದ ಪ್ರವಾಹ, ಅತೀವೃಷ್ಠಿಯಿಂದ ಉಂಟಾದ ಬೆಳೆ ಹಾನಿ ಪರಿಹಾರವನ್ನು ಪಾವತಿಸುವ ಕುರಿತು ಬೆಳೆ ಸಮೀಕ್ಷೆ ದತ್ತಾಂಶ, ಫ್ರೂಟ್ ಐಡಿ (ಈಖಗಿಖಖಿಖ ಖಆ) ಹೊಂದಿರುವ ರೈತರಿಗೆ ಮತ್ತು ಬೆಳೆಹಾನಿ ಅಂತಿಮ ಜಂಟಿ ಸಮೀಕ್ಷೆ ವರದಿಯ ಆಧಾರದ ಮೇಲೆ ಭೂಮಿ ಪರಿಹಾರ ತಂತ್ರಾಂಶದ ಮೂಲಕ ಪರಿಹಾರ ವಿತರಣೆ ಮಾಡಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಧಾರವಾಡ ತಾಲೂಕಿನಲ್ಲಿ 11,981 ರೈತರು ಫಲಾನುಭವಿಗಳು ಇದ್ದು, 12,462.49 ಹೆಕ್ಟರ್ ಪ್ರದೇಶಕ್ಕೆ ಸಂಬಂಧಿಸಿದಂತೆ ರೂ.10,59,97,343 ಪರಿಹಾರ ಮೊತ್ತ ವಿತರಣೆ ಮಾಡಲಾಗಿದೆ.

ನವಲಗುಂದ ತಾಲೂಕಿನಲ್ಲಿ 18,433 ರೈತರು ಫಲಾನುಭವಿಗಳು ಇದ್ದು, 20,685.16 ಹೆಕ್ಟರ್ ಪ್ರದೇಶಕ್ಕೆ ಸಂಬಂಧಿಸಿದಂತೆ ರೂ.18,74,89,876 ಪರಿಹಾರ ಮೊತ್ತ ವಿತರಣೆ ಮಾಡಲಾಗಿದೆ.



ಹುಬ್ಬಳ್ಳಿ ತಾಲೂಕಿನಲ್ಲಿ 11,058 ರೈತರು ಫಲಾನುಭವಿಗಳು ಇದ್ದು 13,856.43 ಹೆಕ್ಟರ್ ಪ್ರದೇಶಕ್ಕೆ ಸಂಬಂಧಿಸಿದಂತೆ ರೂ.11,78,05,212 ಪರಿಹಾರ ಮೊತ್ತ ವಿತರಣೆ ಮಾಡಲಾಗಿದೆ.

ಕುಂದಗೋಳ ತಾಲೂಕಿನಲ್ಲಿ 10,912 ರೈತರು ಫಲಾನುಭವಿಗಳು ಇದ್ದು, 11,261.02 ಹೆಕ್ಟರ್ ಪ್ರದೇಶಕ್ಕೆ ಸಂಬಂಧಿಸಿದಂತೆ ರೂ.9,58,22,368 ಪರಿಹಾರ ಮೊತ್ತ ವಿತರಣೆ ಮಾಡಲಾಗಿದೆ.

ಹುಬ್ಬಳ್ಳಿ ನಗರ ತಾಲೂಕಿನಲ್ಲಿ 839 ರೈತರು ಫಲಾನುಭವಿಗಳು ಇದ್ದು, 769.12 ಹೆಕ್ಟರ್ ಪ್ರದೇಶಕ್ಕೆ ಸಂಬಂಧಿಸಿದಂತೆ ರೂ.65,51,452 ಪರಿಹಾರ ಮೊತ್ತ ವಿತರಣೆ ಮಾಡಲಾಗಿದೆ.

ಅಣ್ಣಿಗೇರಿ ತಾಲೂಕಿನಲ್ಲಿ 11,994 ರೈತರು ಫಲಾನುಭವಿಗಳು ಇದ್ದು, 13,875.13 ಹೆಕ್ಟರ್ ಪ್ರದೇಶಕ್ಕೆ ಸಂಬಂಧಿಸಿದಂತೆ ರೂ.11,79,64,677 ಪರಿಹಾರ ಮೊತ್ತ ವಿತರಣೆ ಮಾಡಲಾಗಿದೆ.

ಒಟ್ಟಾರೆಯಾಗಿ ಧಾರವಾಡ ಜಿಲ್ಲೆಯಲ್ಲಿ 6 ತಾಲ್ಲೂಕಿನ ಬೆಳೆ ಪರಿಹಾರವನ್ನು ಎನ್ ಡಿಆರ್ ಎಫ್, ಎಸ್.ಡಿಆರ್ ಎಫ್ (ಓಆಖಈ/ ಖಆಖಈ) ಮಾರ್ಗಸೂಚಿಯಂತೆ ಒಟ್ಟು 65,217 ರೈತ ಫಲಾನುಭವಿಗಳ 72,909.36 ಹೆಕ್ಟರ್ ಪ್ರದೇಶಕ್ಕೆ ಸಂಬಂಧಿಸಿದಂತೆ ರೂ.63.16 ಕೋಟಿ ಪರಿಹಾರ ಮೊತ್ತ ವಿತರಣೆ ಮಾಡಲಾಗಿದೆ ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಮುದಾಯ ಭವನ ನಿರ್ಮಾಣಕ್ಕೆ ಭೂಮಿಪೂಜೆ

**ಉಗರಗೋಳ:** ರೈತರು ಕೃಷಿ ಬೆಳೆಗಳನ್ನು ಬೆಳೆದರಷ್ಟೇ ಸಾಲದು, ಬೆಳೆಗಳ ಮೌಲ್ಯವರ್ಧನೆ ಮಾಡಿ ಆರ್ಥಿಕವಾಗಿ ಸಬಲರಾಗಬೇಕು ಎಂದು ರಾಜ್ಯಸಭಾ ಸದಸ್ಯ ಈರಣ್ಣ ಕಡಾಡಿ ಹೇಳಿದರು.

ಸವದತ್ತಿ ತಾಲ್ಲೂಕಿನ ಹಂಚಿನಾಳದಲ್ಲಿ ಗುರುವಾರ, ಮರಿಯಮ್ಮ ದೇವಿ ದೇವಸ್ಥಾನದ ಹತ್ತಿರ 2025-26ನೇ ಸಾಲಿನ ಸಂಸದರ ಸ್ಥಳೀಯ ಪ್ರದೇಶಾಭಿವೃದ್ಧಿ ನಿಧಿಯ 10 ಲಕ್ಷ ರೂಪಾಯಿ ವೆಚ್ಚದಲ್ಲಿ ಸಮುದಾಯ ಭವನ ನಿರ್ಮಾಣಕ್ಕೆ ಭೂಮಿಪೂಜೆ ನೆರವೇರಿಸಿ ಮಾತನಾಡಿದರು.

ಕೃಷಿ ಮಾಡಿ ಕೂಡ ಗೌರವಯುತ ಬದುಕು ಕಟ್ಟಿಕೊಳ್ಳಬಹುದು. ಆದರೆ, ಶ್ರಮವಹಿಸಿ ಬೆವರು ಹರಿಸಿ ದುಡಿಯಬೇಕು. ಇಂದು ನಾವು ಗೋವಿನಜೋಳ, ಶೇಂಗಾ ಬೆಳೆದು ಮಾರಿದರೆ ಸಾಲದು. ಅದರ ಮೌಲ್ಯವರ್ಧನೆ ಮಾಡಿ ಮಾರಿ ಹೆಚ್ಚಿನ ಆದಾಯ ಗಳಿಸಬೇಕು ಎಂದರು.


ಕೃಷಿಯಲ್ಲಿ ಉಪಕಸುಬು ಕೈಗೊಳ್ಳಲು ಸರ್ಕಾರ ವಿವಿಧ ರೀತಿಯ ಯೋಜನೆಗಳನ್ನು ಜಾರಿಗೆ ತರುತ್ತಿದ್ದು, ಅವುಗಳ ಸದುಪಯೋಗ ಮಾಡಿಕೊಳ್ಳಬೇಕು ಎಂದು ಕರೆಕೊಟ್ಟರು.



ಸವದತ್ತಿ ತಾಲೂಕಿನ ಹಂಚಿನಾಳ ಗ್ರಾಮದಲ್ಲಿ 10 ಲಕ್ಷ ರೂ ವೇಚ್ಚದಲ್ಲಿ ಸಮುಧಾಯ ಭವನ ಕಟ್ಟಡ ಕಾಮಗಾರಿಗೆ ಭೋವಿ ಪೂಜೆ ನೇರವೆರಿಸಿದ ರಾಜ್ಯಸಭಾ ಸದಸ್ಯ ಈರಣ್ಣ ಕಡಾಡಿ ಹಾಗೂ ಇತರರಿದ್ದಾರೆ.

ವಿರುಪಾಕ್ಷ ಮಾಮನಿ, ಜಗದೀಶ ಕೌಜಗೇರಿ, ಪಂಚನಗೌಡ ದ್ಯಾಮನಗೌಡರ, ಗುರುನಾಥ ಗಂಗಲ, ಶೆಟ್ಟೆಪ್ಪ ನಡಕಟ್ಟಿನ, ಈರಣ್ಣಾ ಕೆಂಗಾನೂರ, ಬಸಲಿಂಗಪ್ಪ ಬಿಂಗಿ ಮರಬಸಪ್ಪ ಗೊರವನಕೊಳ್ಳ, ಬಸಪ್ಪ ಹೂಗಾರ, ಕಸ್ತೂರಿ ಬಳಿಗೇರ, ಮರೆಪ್ಪ ಛಲವಾದಿ, ಲಕ್ಷ್ಮಣ ಗಾಣಿಗೇರ, ಮುದಕಣ್ಣ ಮಡಿವಾಳರ, ಮುತ್ತು ಮಾದರ, ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

# ಪಟೇಲರು ದೇಶದ ಏಕೀಕರಣದ ರೂವಾರಿ: ಬಂಡೆ



**ಇಂಡಿ:** ಪಟೇಲರು ತಮ್ಮ ದೂರದರ್ಶಿತ್ವ, ದೇಶಭಕ್ತಿ, ಜಾಣತನ, ಮನವೊಲಿಸುವ ಸಾಮರ್ಥ್ಯದಿಂದ ದೇಶದ ಏಕತೆಗೆ ಶ್ರಮಿಸಿದ ಅಪ್ರತಿಮ ವ್ಯಕ್ತಿಯಾಗಿದ್ದಾರೆ. ಅವರ ತತ್ವಾದರ್ಶ ಎಲ್ಲರಿಗೂ ಮಾರ್ಗದರ್ಶಿ ಎಂದು ಶಿಕ್ಷಕ ಸಂತೋಷ ಬಂಡೆ ಹೇಳಿದರು.

ಶುಕ್ರವಾರದಂದು ತಾಲೂಕಿನ ಹಿರೇರೂಗಿ ಗ್ರಾಮದ ಯುಬಿಎಸ್ ಶಾಲೆಯಲ್ಲಿ ಸರ್ದಾರ ವಲ್ಲಭಭಾಯಿ ಪಟೇಲ್ ಅವರ ಜನ್ಮದಿನದ ನಿಮಿತ್ತ ಹಮ್ಮಿಕೊಂಡ ರಾಷ್ಟ್ರೀಯ ಏಕತಾ ದಿನವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ತಮ್ಮ ವಕೀಲಿ ವೃತ್ತಿ, ದೊಡ್ಡ ಮನೆ, ಸಂಪತ್ತು ಎಲ್ಲವನ್ನೂ ತ್ಯಜಿಸಿ, ಸರಳ ಜೀವನ, ಕಷ್ಟಕಾರ್ಪಣ್ಯಗಳಿಗೆ ತಮ್ಮನ್ನು ತಾವು ಅರ್ಪಿಸಿಕೊಂಡು, ಸ್ವಾತಂತ್ರ್ಯ ಹೋರಾಟಕ್ಕೆ ಧುಮುಕಿದರು. ಅಸ್ಪೃಶ್ಯತೆ, ಮದ್ಯಪಾನದ ವಿರುದ್ಧ ವ್ಯಾಪಕ ಚಳುವಳಿ ನಡೆಸಿದ ಅವರು?ಯುವ ಜನತೆಗೆ ಸ್ಪೂರ್ತಿಯ ಸೆಲೆ. ಅವರ ಆದರ್ಶ ಮತ್ತು ದೇಶ ಪ್ರೇಮವು ವಿದ್ಯಾರ್ಥಿಗಳಲ್ಲೂ ಬೆಳೆಯಬೇಕು ಎಂದು ಆಶಿಸಿದರು. ಮುಖ್ಯ ಶಿಕ್ಷಕ ಎಸ್ ಎಸ್ ಅರಬ ಅಧ್ಯಕ್ಷತೆ ವಹಿಸಿ ಮಾತನಾಡಿ, ಸರ್ದಾರ್ ಪಟೇಲ್ ಅವರು ನಿಜವಾದ ರಾಜಕೀಯ ಪ್ರಜ್ಞೆ ಹೊಂದಿದ್ದ ಮುತ್ಸದ್ಧಿಯಾಗಿದ್ದರು. ಅವರ ಏಕೈಕ ಗುರಿ ದೃಢವಾದ ಮತ್ತು ಸಂಪೂರ್ಣ ಏಕೀಕೃತವಾದ ಭಾರತವನ್ನು ಕಟ್ಟುವುದಾಗಿತ್ತು ಎಂದು ಹೇಳಿದರು.

ಶಿಕ್ಷಕಿ ಎನ್ ಬಿ ಚೌಧರಿ ಕಾರ್ಯಕ್ರಮ ನಿರ್ವಹಿಸಿದರು. ಅತಿಥಿ ಶಿಕ್ಷಕಿ ಅಲ್ಫಿಯಾ ಅಂಗಡಿ ಸೇರಿದಂತೆ ಮಕ್ಕಳು ಭಾಗವಹಿಸಿದ್ದರು. ಇದೇ ಸಂದರ್ಭದಲ್ಲಿ ರಾಷ್ಟ್ರೀಯ ಏಕತಾ ದಿನದ ಪ್ರತಿಜ್ಞಾ ವಿಧಿ ಬೋಧಿಸಲಾಯಿತು.

# ನಾಳೆ ವಿದ್ಯುತ್ ವ್ಯತ್ಯಯ

**ಬೆಳಗಾವಿ:** ಕ.ವಿ.ಪ್ರ.ನಿ.ನಿ. ವತಿಯಿಂದ ಮೂರನೇಯ ತ್ರೈಮಾಸಿಕ ನಿರ್ವಹಣೆ ಹಾಗೂ ಇತರೆ ತುರ್ತು ನಿರ್ವಹಣಾ ಕಾರ್ಯಗಳನ್ನು ಕೈಗೊಳ್ಳುತ್ತಿರುವುದರಿಂದ 110 ಕೆ.ವ್ಹಿ. ಹೊನಗಾ ಉಪಕೇಂದ್ರದಿಂದ ಸರಬರಾಜು ಆಗುವ ಬೆಳಗಾವಿ ತಾಲೂಕಿನ ಬೈಲೂರ, ಜುಮನಾಳ, ಹೆಗ್ಗೇರಿ, ಕೆಂಚಾನಟ್ಟಿ, ಬೆನ್ನಾಳಿ, ದಾಸರವಾಡಿ, ಜೋಗ್ಯಾನಟ್ಟಿ, ಭೂತರಾಮಟ್ಟಿ, ಬಂಬರಗಾ, ಸಿದ್ದಗಂಗಾ ಆಯಿಲ್ ಮಿಲ್, ತುಳಜಾ ಅಲ್ಲಾಯ್ಸ್, ಹತ್ತರಕಿ ಫೀಡ್ಸ್, ವಿನಾಯಕ ಸ್ಟೀಲ್ ಇಂಡಸ್ಟ್ರೀಸ್, ಹರ್ಷದೃವ, ಜಿ. ಹೊಸೂರ, ಗುಗ್ರ್ಯಾನಟ್ಟಿ, ಗೋಡಿಹಾಳ, ರಾಮದುರ್ಗ, ಉಕ್ಕಡ, ವಂಟಮುರಿ, ಮಾಶಾನಟ್ಟಿ, ಹಾಲಭಾವಿ, ಬೊಮ್ಮನಟ್ಟಿ, ವೀರಭಾವಿ, ಹಳೆ ಹೊಸೂರ, ಹೊಸ ಹೊಸೂರ, ಸುತಗಟ್ಟಿ, ಹೊನಗಾ, ದೇವಗಿರಿ ಗ್ರಾಮಗಳಿಗೆ ಹಾಗೂ ಹೊನಗಾ ಔದ್ಯೋಗಿಕ ಕ್ಷೇತ್ರಗಳಿಗೆ ಹಾಗೂ ಸದರಿ ಗ್ರಾಮಗಳ ನೀರಾವರಿ ಪಂಪ್‌ಸೆಟ್‌ಗಳ ಏರಿಯಾಗಳಿಗೆ ನವೆಂಬರ, 02, 2025 ರಂದು ಬೆಳಿಗ್ಗೆ 09 ಘಂಟೆಯಿಂದ ಸಂಜೆ 04 ಘಂಟೆಯವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂದು ಹು.ವಿ.ಸ.ಕಂ.ನಿ, ಕಾ ಮತ್ತು ಪಾ ಗ್ರಾಮೀಣ ವಿಭಾಗ ಕಾರ್ಯನಿರ್ವಾಹಕ ಇಂಜಿನೀಯರರು(ವಿ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಡಿ. 07 ರಂದು ಮಾಜಿ ಸೈನಿಕರ ರ‍್ಯಾಲಿ

**ಬೆಳಗಾವಿ:** ನಗರದ ಮರಾಠಾ ಲೈಟ್ ಇನ್‌ಫೆಂಟ್ರಿ ರೆಜಿಮೆಂಟಲ್ ಸೆಂಟರ್‌ನ ಶಿವಾಜಿ ಸ್ಟೇಡಿಯಂನಲ್ಲಿ ಹೆಚ್ಚು ಸೌತ್ ಇಂಡಿಯಾ ಸೆಕ್ಟರ್ ನೇತೃತ್ವದಲ್ಲಿ ಡಿಸೆಂಬರ 07, 2025 ರಂದು ಬೆಳಿಗ್ಗೆ 08 ಗಂಟೆಯಿಂದ ಸಂಜೆ 05 ಗಂಟೆಯ ವರೆಗೆ ಮಾಜಿ ಸೈನಿಕರ ರ‍್ಯಾಲಿ ನಡೆಯಲಿದೆ.ಸೇವೆ/ಪಿಂಚಣಿ ಸಂಬಂಧಿತ ಸಮಸ್ಯೆಗಳಿಗೆ ಸಂಬಂಧಿಸಿದಂತೆ ಮಾಜಿ ಸೈನಿಕರು ತಮ್ಮ ಕುಂದುಕೊರತೆಗಳ ಬಗ್ಗೆ ಮಾರ್ಗ ದರ್ಶನ ಮತ್ತು ಸ್ಪಷ್ಟೀಕರಣವನ್ನು ಪಡೆಯಬಹುದಾಗಿದೆ. ಮಾಜಿ ಸೈನಿಕರ ಅನುಕೂಲಕ್ಕಾಗಿ ವೈದ್ಯಕೀಯ ಶಿಬಿರ, ವಿವಿಧ ರೆಜಿಮೆಂಟ್‌ಗಳು/ಇ.ಸಿ.ಎಚ್.ಎಸ್ ಗಳಿಗೆ ಪ್ರತ್ಯೇಕ ಕೌಂಟರ್ಗಳು, SPARSH ಅಪಡೇಟ್ ಮತ್ತು ಬ್ಯಾಂಕ್ ಕೌಂಟರಗಳನ್ನು ಸ್ಥಾಪಿಸಲಾಗುವು. ಹೆಚ್ಚಿನ ಮಾಹಿತಿಗಾಗಿ ಕಛೇರಿ ದೂರವಾಣಿ ಸಂಖ್ಯೆ: 08312402821, 831350584 ಗೆ ಅಥವಾ greatonlla@nic.in ಅನ್ನು ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

### ಬಿಮ್ಸ್ ನರ್ಸಿಂಗ್ ವಿದ್ಯಾರ್ಥಿಗಳಿಂದ ವೃದ್ಧಾಶ್ರಮಕ್ಕೆ ಭೇಟಿ

# ಹಿರಿಯರ ಆಶೀರ್ವಾದವೇ ನಮ್ಮ ನಾಳೆಯ ಬಲ



**ಬೆಳಗಾವಿ:** ನಗರದ ಬಿಮ್ಸ್ (ಃಖಒಖ) ನರ್ಸಿಂಗ್ ಕಾಲೇಜಿನ ವಿದ್ಯಾರ್ಥಿಗಳು ದೇವರಾಜ್ ಅರಸ್ ಕಾಲೋನಿ, ಬಸವನ ಕುಡಚಿ ಸಮೀಪದ ನಾಗನೂರ ಶ್ರೀ ಶಿವಬಸವೇಶ್ವರ ಟ್ರಸ್ಟ್ ಹಿರಿಯ ನಾಗರಿಕರ ವೃದ್ಧಾಶ್ರಮಕ್ಕೆ ಭೇಟಿ ನೀಡಿದರು.

ಸಮಾಜದ ಹಿರಿಯರ ಕಲ್ಯಾಣಕ್ಕಾಗಿ ಕೈಗೊಂಡ ಈ ಸಾಮಾಜಿಕ ಹೊಣೆಗಾರಿಕೆಯ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು ವೃದ್ಧ ನಿವಾಸಿಗಳೊಂದಿಗೆ ಸ್ನೇಹಪೂರ್ಣವಾಗಿ ಸಮಯ ಕಳೆಯುತ್ತ, ಅವರ ಜೀವನ ಪರಿಸ್ಥಿತಿಯನ್ನು ನೇರವಾಗಿ ಅರ್ಥಮಾಡಿಕೊಂಡರು.

ಈ ಭೇಟಿಯ ಉದ್ದೇಶ ವೃದ್ಧರು ಎದುರಿಸುತ್ತಿರುವ ದೈಹಿಕ, ಮಾನಸಿಕ ಹಾಗೂ ಸಾಮಾಜಿಕ ಸಮಸ್ಯೆಗಳನ್ನು ತಿಳಿದುಕೊಳ್ಳುವುದು, ಅವರಿಗೆ ಮನಸಿಗೆ ಆತ್ಮೀಯತೆ ನೀಡುವುದು ಮತ್ತು ಪ್ರೋತ್ಸಾಹಿಸುವುದಾಗಿತ್ತು. ವಿದ್ಯಾರ್ಥಿಗಳು ಹಿರಿಯ ನಾಗರಿಕರೊಂದಿಗೆ ಮಾತನಾಡಿ ಅವರ ಜೀವನ ಅನುಭವಗಳನ್ನು ಕೇಳಿದರು, ಆರೋಗ್ಯ ಸಲಹೆಗಳನ್ನು ನೀಡಿದರು. ಸುವಿಚಾರ, ಕವನ ಪಠಣ, ಹಾಡುಗಳ ಮೂಲಕ ಮನೋರಂಜನೆ ನೀಡುತ್ತ, ವೃದ್ಧರ ಮನಸ್ಸಿಗೆ ನೆಮ್ಮದಿ ನೀಡಿದರು. ಈ ಸಂದರ್ಭದಲ್ಲಿ ಡಾ. ನಾಮದೇವ ಮಾಲಗಿ, ಪ್ರಾಚಾರ್ಯರು ಮತ್ತು ವಿಭಾಗಾಧ್ಯಕ್ಷರು, ವೈದ್ಯಕೀಯ-ಶಸ್ತ್ರಚಿಕಿತ್ಸಾ ನರ್ಸಿಂಗ್ ಮಾತನಾಡಿ, "ವೃದ್ಧರು ನಮ್ಮ ಸಮಾಜದ ಜೀವಂತ ಇತಿಹಾಸ. ಅವರ ಆಶೀರ್ವಾದವೇ ನಮ್ಮ ನಾಳೆಯ ಬಲ. ಯುವ ಪೀಳಿಗೆ ಅವರು ಅನುಭವಿಸಿದ ಜೀವನ ಪಾಠಗಳಿಂದ ಪ್ರೇರಣೆ ಪಡೆಯಬೇಕು. ವೃದ್ಧಾಶ್ರಮದ ಈ ಭೇಟಿಯು ವಿದ್ಯಾರ್ಥಿಗಳಲ್ಲಿ ಮಾನವೀಯತೆ, ಕರುಣೆ ಮತ್ತು ಸೇವಾಭಾವನೆ ಬೆಳೆಸುವ ಉತ್ತಮ ಪ್ರಯತ್ನವಾಗಿದೆ," ಎಂದು ಹೇಳಿದರು.

ಈ ವೇಳೆ, ಡಾ. ರವಿ ಅಜೂರ್, ಡಾ. ತನ್ವೀರ್ ಗುಂಡಗಿ, ಡಾ. ಗೋವಿಂದ ಲಮಾಣಿ, ಡಾ. ರೂಪಾ ಕಾಳೆ, ರಾಜೇಶ್ ಕೆ ಹಾಗೂ ನರ್ಸಿಂಗ್ ವಿದ್ಯಾರ್ಥಿಗಳು ಮತ್ತು ವೃದ್ಧಾಶ್ರಮದ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಕನಕದಾಸರು, ಓಬವ್ವನ ಜಯಂತಿ ಅರ್ಥಪೂರ್ಣ ಆಚರಣೆ

**ಬಾಗಲಕೋಟೆ:** ದಾಸ ಶ್ರೇಷ್ಠ ಕನಕ ದಾಸರು ಹಾಗೂ ವೀರ ವನಿತೆ ಓಬವ್ವನ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಲು ನಿರ್ದರಿಸಲಾಗಿದೆ ಎಂದು ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ ಹೇಳಿದರು.



ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಗುರುವಾರದಂದು ಆಯೋಜಿಸಲಾಗಿದ್ದ ಕನಕದಾಸ ಜಯಂತಿ ಹಾಗೂ ವೀರ ವನಿತೆ ಓಬವ್ವ ಜಯಂತಿ ಆಚರಣೆಯ ಪೂರ್ವ ಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ನವೆಂಬರ್ 8 ರಂದು ಕನಕದಾಸ ಜಯಂತಿ ಹಾಗೂ ನವೆಂಬರ 11 ರಂದು ಓಬವ್ವ ಜಯಂತಿಯನ್ನು ಜಿಲ್ಲಾಡಾಳಿತ, ಜಿಲ್ಲಾ ಪಂಚಾಯತಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗುತ್ತಿದೆ ಎಂದರು.

ದಾಸ ಶ್ರೇಷ್ಠ ಕನಕದಾಸರ ಜಯಂತಿಯನ್ನು ನವನಗರದ ಕಲಾಭವನದಲ್ಲಿ ಆಯೋಜಿಸಲಾಗುವುದು ಹಾಗೂ ವೀರ ವನಿತೆ ಓಬವ್ವನ ಜಯಂತಿಯನ್ನು ನಗರದ ಡಾ.ಃ ಖ ಅಂಬೇಡ್ಕರ ಭವನದಲ್ಲಿ ಬೆಳಿಗ್ಗೆ 11 ಗಂಟೆಗೆ ವೇದಿಕೆ ಕಾರ್ಯಕ್ರಮದೊಂದಿಗೆ ಅರ್ಥಪೂರ್ಣವಾಗಿ ಆಚರಿಸಲಾಗುವುದು ಎಂದು ಸಭೆಗೆ ಮಾಹಿತಿ ನೀಡಿದರು. ಜಿಲ್ಲಾಡಳಿತ ಭವನದ ಆವರಣದಿಂದ ಬೆಳಿಗ್ಗೆ 10 ಗಂಟೆಗೆ ವಿವಿಧ ರೀತಿಯ ಕಲಾತಂಡಗಳ ಜೊತೆ ಪೂರ್ಣ ಕುಂಭ ದೊಂದಿಗೆ ಮೆರವಣಿಗೆಯನ್ನು ಕಲಾಭವನದವರೆಗೆ ಕನಕದಾಸ ಜಯಂತಿಯಂದು ಹಾಗೂ ಡಾ. ಅಂಬೇಡಕರ ಭವನದವರೆಗೆ ಓಬವ್ವ ಜಯಂತಿಯಂದು ನಡೆಸಲಾಗುವುದು, ವೇದಿಕೆ ಕಾರ್ಯಕ್ರಮದಲ್ಲಿ ಸಂಗೀತ ಗಾರರಿಂದ ಸಂಗೀತ ಹಾಗೂ ಸಂಪನ್ಮೂಲ ವ್ಯಕ್ತಿಯಿಂದ ಉಪನ್ಯಾಸ ಮಾಡಿಸಲಾಗುವುದು ಎಂದರು.

ಎರಡು ಜಯಂತಿ ಸಂದರ್ಭದಲ್ಲಿ ನಿಯಮಾನುಸಾರ ಆಹ್ವಾನ ಪತ್ರಿಕೆ ಮುದ್ರಿಸಿ, ಶಿಸ್ತಾಚಾರದಂತೆ ಗಣ್ಯ ಮಾನ್ಯರನ್ನು ಆಹ್ವಾನಿಸಲಾಗುವುದು. ಕನಕದಾಸ ಜಯಂತಿಯಂದು ಕನಕದಾಸರ ಸಾಹಿತ್ಯ ಸಂಶೋಧನೆ, ಕೀರ್ತನೆ ಕುರಿತಂತೆ ಗಣನೀಯ ಸೇವೆ ಸಲ್ಲಿಸಿದ ಸಾಧಕರನ್ನು ಗುರುತಿಸಿ ಸಾಧನೆ ಮಾಡಿದ ಮಹಾನಿಯನಿಯರಿಗೆ ಕನಕ ಸಿರಿ ಪ್ರಶಸ್ತಿ ಹಾಗೂ ನಗದು ಪುರಸ್ಕಾರ ನೀಡಿ ಗೌರವಿಸಲಾಗುವುದು ಎಂದು ಹೇಳಿದರು. ಒಟ್ಟಾರೆಯಾಗಿ ಕನಕದಾಸರು ಹಾಗೂ ವೀರ ವನಿತೆ ಓಬವ್ವನ ಕುರಿತಾಗಿ ಮುಂದಿನ ಪೀಳಿಗೆಗೆ ತಿಳಿಸುವುದು ಪ್ರತಿಯೊಬ್ಬ ನಾಗರಿಕನ ಆದ್ಯ ಕರ್ತವ್ಯವಾಗಿದೆ ಎಂದರು.

ಸಭೆಯಲ್ಲಿ ಸಮುದಾಯ ಮುಖಂಡರಾದ ಡಿ.ಬಿ.ಸಿದ್ದಾಪೂರ, ಧರ್ಮಣ್ಣ ಸುನಗದ, ಸುವರ್ಣಾ ನಾಗರಾಳ, ಶೇಖರಪ್ಪ ಚಹಾಟಿ ವಿವೇಕಾನಂದ ಗರಸಂಗಿ, ಬಸವರಾಜ ಚಲವಾದಿ, ಹೊಸಮನಿ. ವಾಯ್ ಎನ್ ಚಲವಾದಿ, ಅಶೋಕ ನಾರಾಯಣಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಸಂತೋಷ ಭೋವಿ, ವಾರ್ತಾಧಿಕಾರಿ ಕಸ್ತೂರಿ ಪಾಟೀಲ, ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಪಂಕಜಾ, ಗ್ರೇಡ್ –2 ತಹಶಿಲ್ದಾರ ಮಲ್ಲನಗೌಡ ಬಿರಾದಾರ ಸೇರಿದಂತೆ ಇತರರು ಇದ್ದರು.

# ನ.2 ರಂದು ವಿದ್ಯಾರ್ಥಿ ನಿಲಯ ಉದ್ಘಾಟನೆ

**ಹಾವೇರಿ:** ಸಮಾಜ ಕಲ್ಯಾಣ ಇಲಾಖೆ ಹಾಗೂ ಲೋಕೋಪಯೋಗಿ ಇಲಾಖೆ ಸಹಯೋಗದಲ್ಲಿ ಸವಣೂರ ಪಟ್ಟಣದಲ್ಲಿನ ಡಾ.ಬಿ.ಆರ್.ಅಂಬೇಡ್ಕರ್ ಸರ್ಕಾರಿ ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿ ನಿಲಯ ಕಟ್ಟಡದ ಉದ್ಘಾಟನಾ ಸಮಾರಂಭ ನವಂಬರ್ 2 ರಂದು ರವಿವಾರ ಬೆಳಿಗ್ಗೆ 10–30ಕ್ಕೆ ಸವಣೂರ ಪಟ್ಟಣದಲ್ಲಿ ಜರುಗಲಿದೆ.

ಕೇಂದ್ರ ಕಲ್ಲಿದ್ದಲು, ಗಣಿ ಮತ್ತು ಸಂಸದೀಯ ವ್ಯವಹಾರಗಳ ಸಚಿವರಾದ ಪ್ರಲ್ಹಾದ್ ಜೋಶಿ, ವಿಧಾನ ಪರಿಷತ್ ಸಭಾಪತಿಗಳಾದ ಬಸವರಾಜ ಹೊರಟ್ಟಿ, ಸಮಾಜ ಕಲ್ಯಾಣ ಇಲಾಖೆ ಹಾಗೂ ಮೈಸೂರು ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್.ಸಿ.ಮಹದೇವಪ್ಪ, ಲೋಕೋಪಯೋಗಿ ಹಾಗೂ ಬೆಳಗಾವಿ ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ ಜಾರಕಿಹೊಳಿ ಅವರ ಗೌರವಾನ್ವಿತ ಉಪಸ್ಥಿತಿಯಲ್ಲಿ, ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ನಿರ್ದೇಶನಾಲಯ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಹಾಗೂ ಹಾವೇರಿ ಜಿಲ್ಲಾ ಉಸ್ತುವಾರಿ ಸಚಿವರಾದ ಶಿವಾನಂದ ಪಾಟೀಲ ಅವರು ಉದ್ಘಾಟನೆ ನೆರವೇರಸಲಿದ್ದಾರೆ.

ಶಾಸಕರಾದ ಯಾಸೀರ ಅಹ್ಮದಖಾನ್ ಪಠಾಣ ಅಧ್ಯಕ್ಷತೆ ವಹಿಸಲಿದ್ದು, ಮುಖ್ಯ ಅತಿಥಿಗಳಾಗಿ ವಿಧಾನಸಭಾ ಉಪಾಧ್ಯಕ್ಷರಾದ ರುದ್ರಪ್ಪ ಲಮಾಣಿ, ವಿಧಾನ ಪರಿಷತ್ ಮುಖ್ಯ ಸಚೇತಕ ಸಲೀಂ ಅಹ್ಮದ್, ಶಾಸಕರು ಹಾಗೂ ಕರ್ನಾಟಕ ರಾಜ್ಯ ಅರಣ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷ ಬಸವರಾಜ ಶಿವಣ್ಣನವರ, ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ ಅಧ್ಯಕ್ಷ ಸೈಯದ್ ಅಜೀಮ್‌ಪೀರ್ ಖಾದ್ರಿ, ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಉಪಾಧ್ಯಕ್ಷ ಎಸ್.ಆರ್.ಪಾಟೀಲ, ವಿಧಾನ ಪರಿಷತ್ ಶಾಸಕರಾದ ಪ್ರೊ.ಎಸ್.ವಿ.ಸಂಕನೂರ, ಪ್ರದೀಪ ಶೆಟ್ಟರ, ಕರ್ನಾಟಕ ಗಡಿ ಪ್ರದೇಶದ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಸೋಮಣ್ಣ ಬೇವಿನಮರದ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಅಧ್ಯಕ್ಷ ಎಂ.ಎಂ.ಹಿರೇಮಠ, ಸವಣೂರ ಪುರಸಭೆ ಅಧ್ಯಕ್ಷ ಅಲ್ಲಾವುದ್ದೀನ ಮನಿಯಾರ, ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಅಧ್ಯಕ್ಷ ಸುಭಾಸ ಮಜ್ಜಗಿ ಹಾಗೂ ಪುರಸಭೆ ಉಪಾಧ್ಯಕ್ಷ ಖಮರುನ್ನಿಸಾ ಪಟೇಲ್ ಹಾಗೂ ವಿಶೇಷ ಆಹ್ವಾನಿತರಾಗಿ ಲೋಕೋಪಯೋಗಿ ಇಲಾಖೆ ಸರ್ಕಾರದ ಕಾರ್ಯದರ್ಶಿ ಸಿ.ಸತ್ಯನಾರಾಯಣ ಅವರು ಪಾಲ್ಗೊಳ್ಳಲಿದ್ದಾರೆ.

## ಭ್ರಷ್ಟಾಚಾರ ವಿರುದ್ಧ ಜಾಗೃತಿ ಅರಿವು ಸಪ್ತಾಹ

**ಹಾವೇರಿ:** ಜಿಲ್ಲಾಡಳಿತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಹಾವೇರಿ ಕರ್ನಾಟಕ ಲೋಕಾಯುಕ್ತ ಘಟಕದ ಸಹಯೋಗದಲ್ಲಿ "ಭ್ರಷ್ಟಾಚಾರ ವಿರುದ್ಧ ಜಾಗೃತಿ ಅರಿವು ಸಪ್ತಾಹ" ಕಾರ್ಯಕ್ರಮ ನವೆಂಬರ್ 3 ರಂದು ಬೆಳಿಗ್ಗೆ 9–30 ಗಂಟೆಗೆ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜರುಗಲಿದೆ.

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಅಧ್ಯಕ್ಷರಾದ ದೇವೆಂದ್ರಪ್ಪ ಎನ್.ಬಿರಾದಾರ ಅವರು ಉದ್ಘಾಟನೆ ನೆರವೇರಿಸಲಿದ್ದು, ಜಿಲ್ಲಾಧಿಕಾರಿ ಡಾ.ವಿಜಯಮಹಾಂತೇಶ ದಾನಮ್ಮನವರ ಅವರು ಅಧ್ಯಕ್ಷತೆ ವಹಿಸಲಿದ್ದಾರೆ.ಮುಖ್ಯ ಅತಿಥಿಗಳಾಗಿ ಜಿ.ಪಂ.ಮುಖ್ಯ ಕಾರ್ಯನಿರ್ವಹಣಾಧಿಕಾರಿ ಶ್ರೀಮತಿ ರುಚಿ ಬಿಂದಲ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಯಶೋಧಾ ವಂಟಗೋಡಿ, ಹಿರಿಯ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಶ್ರೀಶೈಲಜಾ ಎಚ್.ಎ., ಅಪರ ಜಿಲ್ಲಾಧಿಕಾರಿ ಡಾ.ನಾಗರಾಜ್ ಎಲ್., ಜಿಲ್ಲಾ ನ್ಯಾಯವಾದಿಗಳ ಸಂಘದ ಅಧ್ಯಕ್ಷ ಎಸ್. ಎಚ್.ಜತ್ತಿ, ಕಾರ್ಯದರ್ಶಿ ಪಿ.ಎಸ್.ಹೆಬ್ಬಾಳ ಅವರು ಭಾಗವಹಿಸಲಿದ್ದಾರೆ. ಕರ್ನಾಟಕ ಲೋಕಾಯುಕ್ತ ದಾವಣಗೆರೆ ಪೊಲೀಸ್ ಅಧೀಕ್ಷಕ ಎಂ.ಎಸ್. ಕೌಲಾಪುರೆ ಹಾಗೂ ಹಾವೇರಿ ಪೊಲೀಸ್ ಉಪ ಅಧೀಕ್ಷಕ ಮಧುಸೂದನ ಸಿ ಅವರು ಪ್ರತಿಜ್ಞಾವಿಧಿ ಬೋಧನೆ ಮಾಡಲಿದ್ದಾರೆ.

## ನಾಗೇಂದ್ರ ಮಹಾಸ್ವಾಮಿಗಳ 89ನೇ ಪುಣ್ಯಸ್ಮರಣೆ

**ಬೆಳಗಾವಿ:** ತಾಲೂಕಿನ ಪಾವನಕ್ಷೇತ್ರ ಬಡೆಕೋಳ್ಳಮಠದಲ್ಲಿ ನ.02 ಮತ್ತು 03 ರಂದು ಎರಡು ದಿನಗಳ ಕಾಲ ಪವಾಡಪುರುಷ ಶ್ರೀ ಸದ್ಗುರು ನಾಗೇಂದ್ರ ಮಹಾಸ್ವಾಮಿಗಳ 89ನೇ ಪುಣ್ಯಸ್ಮರಣೆ ಕಾರ್ಯಕ್ರಮವು ಜರುಗಲಿದೆ. ರವಿವಾರ ದಿ. 02 ರಂದು ಸಂಜೆ 7 ರಿಂದ ಭಜನೆ, ಜಾಗರಣೆ, ಹಾಗೂ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ಜರುಗವವು.

ಸೋಮವಾರ ದಿ. 03 ರಂದು ಬೆಳಿಗ್ಗೆ ನಾಗೇಂದ್ರ ಮಹಾಸ್ವಾಮಿಗಳ ಗದ್ದುಗೆಗೆ ಮಹಾರುದ್ರಾಭಿಷೇಕ, ನಂತರ ಸಣ್ಣ ಮಕ್ಕಳ ಜಡೆ ತೆಗೆವದು ಹಾಗೂ ಹರಕೆ ಹೊತ್ತ ಭಕ್ತಾಧಿಗಳಿಂದ ತೂಕಾನು ತೂಕ ಕೊಡುವುದು. ಮತ್ತು ಧೀರ್ಘದಂಡ ನಮಸ್ಕಾರ ಹಾಗೂ ಮಧ್ಯಾಹ್ನ 1 ಗಂಟೆಗೆ ಮಹಾಪ್ರಸಾದ ನಡೆಯುವುದೆಂದು ಮಠದ ತೃತೀಯ ಪೀಠಾಧಿಕಾರಿಗಳಾದ ಪ.ಪೂ ಶ್ರೀ ನಾಗಯ್ಯ ಮಹಾಸ್ವಾಮಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಮೊ; 9379788855, 9538056691, 7406821309 ಇವರನ್ನು ಸಂಪರ್ಕಿಸಿ.

### ಉಪಲೋಕಾಯುಕ್ತರಿಂದ ಅಹವಾಲು ಸ್ವೀಕಾರ ಕಾರ್ಯಕ್ರಮದ ಅಂಗವಾಗಿ ಜಾಗೃತಿ ಅರಿವು ಸಪ್ತಾಹ

# ಮಕ್ಕಳಲ್ಲಿ ಭ್ರಷ್ಟಾಚಾರ ವಿರೋಧಿ ಭಾವನೆ ಮೂಡಿಸಬೇಕು

**ಕೊಪ್ಪಳ:** ಭ್ರಷ್ಟಾಚಾರವು ದೇಶದ ಆರ್ಥಿಕ, ಸಮಾಜಿಕ ಅಭಿವೃದ್ಧಿಗೆ ಬಹು ಮುಖ್ಯ ತೊಡಕಾಗಿದ್ದು, ಅದನ್ನ ಬೇರಿನಿಂದಲೇ ನಿರ್ಮೂಲನೆ ಮಾಡಲು ಚಿಕ್ಕ ವಯಸ್ಸಿನಲ್ಲಿಯೇ ಮಕ್ಕಳಿಗೆ ಭ್ರಷ್ಟಾಚಾರ ವಿರೋಧಿ ಭಾವನೆ ಮೂಡಿಸಬೇಕು, ಸ್ವಯಂ ಭ್ರಷ್ಟಾಚಾರ ವಿರೋಧಿ ಧೋರಣೆ ಅನುಸರಿಸಬೇಕು ಎಂದು ಕರ್ನಾಟಕ ಲೋಕಾಯುಕ್ತದ ಗೌರವಾನ್ವಿತ ಉಪಲೋಕಾಯುಕ್ತರಾದ ನ್ಯಾ. ಬಿ.ವೀರಪ್ಪ ಅವರು ಹೇಳಿದರು.

ಗುರುವಾರದಂದು ಜಿಲ್ಲಾಡಳಿತ ಭವನದ ಆಡಿಟೋರಿಯಂ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ಗೌರವಾನ್ವಿತ ಉಪಲೋಕಾಯುಕ್ತರಿಂದ ಸಾರ್ವಜನಿಕರ ದೂರು, ಅಹವಾಲು ಸ್ವೀಕಾರ ಕಾರ್ಯಕ್ರಮ ಹಾಗೂ ಬಾಕಿ ಇರುವ ಪ್ರಕರಣಗಳ ವಿಚಾರಣೆ ಮತ್ತು ಇದರ ಅಂಗವಾಗಿ ನಡೆದ ಜಾಗೃತಿ ಅರಿವು ಸಪ್ತಾಹ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಪ್ರತಿಯೊಬ್ಬರಿಗೂ ಭ್ರಷ್ಟಾಚಾರದ ಅರ್ಥ, ಅಪರಾಧದ ಬಗ್ಗೆ ತಿಳಿದಿದ್ದರೂ ಪರೋಕ್ಷವಾಗಿ ಎಲ್ಲರೂ ಆ ಪ್ರಕ್ರಿಯೆಯಲ್ಲಿ ಒಳಗೊಂಡಿರುತ್ತಾರೆ. ಲಂಚ ಪಡೆಯುವುದು ಮಾತ್ರವಲ್ಲ ಕೊಡುವುದು ಕೂಡ ಅಪರಾಧವೇ. ಹಾಗೂ ಭ್ರಷ್ಟಾಚಾರದ ಅರ್ಥ ವ್ಯಾಪ್ತಿ ಕೇವಲ ಲಂಚ ಮಾತ್ರವಲ್ಲ, ದುರಾಡಳಿತ, ಸ್ವಜನ ಪಕ್ಷಪಾತವನ್ನೂ ಒಳಗೊಂಡಿದೆ. ಭ್ರಷ್ಟಾಚಾರ ನಿರ್ಮೂಲನೆಗೆ ಸ್ವಯಂ ಅರಿವು, ಸ್ವಯಂ ಪ್ರತಿಜ್ಞೆ ಬಹಳ ಮುಖ್ಯ. ಆ ಪ್ರಜ್ಞೆ ಮೂಡಬೇಕೆಂದರೆ ಮಕ್ಕಳಿಗೆ ಚಿಕ್ಕವಯಸ್ಸಿನಲ್ಲೇ ಭ್ರಷ್ಟಾಚಾರ ವಿರೋಧಿ ಭಾವನೆ ಮೂಡಿಸಬೇಕು. ಮಗುವಿನ ಬೆಳವಣಿಗೆಯ ಪ್ರತಿ ಹಂತವೂ ಧನಾತ್ಮಕ ಪ್ರಭಾವ ಹೊಂದಿರಬೇಕು ಎಂದು ಅವರು ಹೇಳಿದರು.



ಎಷ್ಟೇ ಅರಿವಿದ್ದರೂ, ಕಾನೂನು, ಕಾಯ್ದೆಗಳಿದ್ದರೂ ಮತ್ತೆ ಮತ್ತೆ ಭ್ರಷ್ಟಾಚಾರದ ಬಗ್ಗೆ ಅರಿವು, ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದು ವಿಷಾದನೀಯ. ಅಧಿಕಾರ ಎಂದರೆ ಭ್ರಷ್ಟಾಚಾರ ಮಾಡಲು ನೀಡಿದ ಲೈಸೆನ್ಸ್ ಅಲ್ಲ ಎಂಬುದನ್ನು ಪ್ರತಿ ಒಬ್ಬ ಸರ್ಕಾರಿ, ಸಾರ್ವಜನಿಕ ಸಂಸ್ಥೆಯ ಅಧಿಕಾರಿ, ನೌಕರ ಅರ್ಥ ಮಾಡಿಕೊಳ್ಳಬೇಕು. ಸ್ವಾತಂತ್ರಪೂರ್ವದಲ್ಲಿ ದೇಶದ ಶೈಕ್ಷಣಿಕ ಮಟ್ಟ ಶೇ.18 ಇತ್ತು, ಪ್ರಸ್ತುತ ಅದು ಶೇ.80 ರಷ್ಟಿದೆ. ಆದರೆ ಮುಂಚಿಗಿಂತ ಈಗಿನ ಕಾಲಘಟ್ಟದಲ್ಲಿ ಭ್ರಷ್ಟಾಚಾರ ಪ್ರಕರಣಗಳು ಹೆಚ್ಚು ಕಂಡುಬರುತ್ತವೆ. ಇದನ್ನು ವಿದ್ಯಾವಂತರ ದಡ್ಡತನ ಅಥವಾ ದುರಾಸೆ ಎಂದು ಕರೆಯಬಹುದು ಎಂದು ಉಪಲೋಕಾಯುಕ್ತರು ಅಭಿಪ್ರಾಯ ಪಟ್ಟರು.

ದೇಶದಲ್ಲಿ ಸಂವಿಧಾನವೇ ಸರ್ವೋಚ್ಚ ಹಾಗೂ ಶ್ರೇಷ್ಠವಾದದ್ದು. ಅದನ್ನು ಮೀರಿದವರು ಯಾರೂ ಇಲ್ಲ ಹಾಗು ಯಾವ ಕಾನೂನು ಇಲ್ಲ. ಸಂವಿಧಾನದಲ್ಲಿನ ಅನುಚ್ಛೇದ 21 ಪ್ರತಿ ಜೀವಿಗೂ ಬದುಕುವ ಹಕ್ಕು ನೀಡಿದೆ. ಅದರಂತೆ ಅನುಚ್ಛೇದ 51ಎ ಮೂಲಭೂತ ಕರ್ತವ್ಯಗಳನ್ನು ತಿಳಿಸುತ್ತದೆ. ಪ್ರತಿಯೊಬ್ಬ ವಿದ್ಯಾವಂತ ವ್ಯಕ್ತಿಯೂ ಸಂವಿಧಾನವನ್ನು ಓದಬೇಕು. ಸಂವಿಧಾನ ಎಲ್ಲರಿಗೂ ಸಮಾನ ಅವಕಾಶ, ಹಕ್ಕುಗಳನ್ನು ನೀಡಿದೆ. ಅವುಗಳನ್ನು ನಾವು ಕಾನೂನಾತ್ಮಕವಾಗಿ ಬಳಸಿಕೊಳ್ಳಬೇಕು ಎಂದು ಅವರು ಸಂವಿಧಾನದ ಮಹತ್ವದ ಬಗ್ಗೆ ಮಾಹಿತಿ ನೀಡಿದರು.

ಆರೋಗ್ಯ ಇಲಾಖೆ, ಜಿಲ್ಲಾ ಪಂಚಾಯತಿ ಸೇರಿದಂತೆ ಎಲ್ಲ ಇಲಾಖೆಗಳ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು ಕಡ್ಡಾಯವಾಗಿ ಕೇಂದ್ರ ಸ್ಥಾನದಲ್ಲಿಯೇ ಇರಬೇಕು. ಸಾರ್ವಜನಿಕರ ಅಗತ್ಯದ ಸಮಯದಲ್ಲಿ ವೈದ್ಯರು, ಅಧಿಕಾರಿಗಳು ಅವರಿಗೆ ಲಭ್ಯವಾಗಬೇಕು. ಈ ಬಗ್ಗೆ ಎಲ್ಲ ಇಲಾಖೆಗಳ ಮುಖ್ಯಸ್ಥರು ನಿರ್ದಿಷ್ಟ ಸುತ್ತೋಲೆ ಹೊರಡಿಸಿ. ಎಪಿಎಂಸಿ, ಕಟ್ಟಡ ಕಾರ್ಮಿಕರಿಗೆ, ಸರಕು ಹಾಗೂ ಸೇವೆ ಡೆಲಿವರಿ ಮಾಡುವ ಉದ್ಯೋಗಿಗಳಿಗೆ ಆಯಾ ಇಲಾಖಾ ವ್ಯಾಪ್ತಿಯ ಅಧಿಕಾರಿಗಳು ಮತುವರ್ಜಿ ವಹಿಸಿ ವಿಮೆ ಮಾಡಿಸಿ ಎಂದು ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾಧಿಕಾರಿ ಡಾ.ಸುರೇಶ ಬಿ.ಇಟ್ನಾಳ ಅವರು ಮಾತನಾಡಿ, ಅಧಿಕಾರಿ, ನೌಕರರು ಸ್ವಜನ ಪಕ್ಷಪಾತ ಹಾಗೂ ಸ್ವಹಿತಾಸಕ್ತಿಯನ್ನು ಬಿಟ್ಟು ಸಾರ್ವಜನಿಕ ಸೇವೆಗಳನ್ನು ನೀಡಬೇಕು. ಸರ್ಕಾರಿ ಸೇವೆಯು ರಾಜ್ಯ, ದೇಶದ ಅಭಿವೃದ್ದಿಗೆ ಪೂರಕವಾಗಿರಬೇಕು. ಸರ್ಕಾರಿ ಸವಲತ್ತು, ಸೇವೆಗಳನ್ನು ಅರ್ಹರಿಗೆ ತಲುಪಿಸುವುದು ಅಧಿಕಾರಿಗಳ ಜವಾಬ್ದಾರಿ ಹಾಗೂ ಕರ್ತವ್ಯ ಎಂದು ಹೇಳಿದರು.

ನಂತರ ಪ್ರತಿಯೊಬ್ಬರೂ ಭ್ರಷ್ಟಾಚಾರದ ವಿರುದ್ಧದ ಮನೋಭಾವನೆ ಹೊಂದುವ ಉದ್ದೇಶದಿಂದ ಭ್ರಷ್ಟಾಚಾರ ವಿರೋಧಿ ಪ್ರತಿಜ್ಞಾ ವಿಧಿಯನ್ನು ಗೌರವಾನ್ವಿತ ಉಪಲೋಕಾಯುಕ್ತರಾದ ನ್ಯಾ.ಬಿ.ವೀರಪ್ಪ ಅವರು ಬೋಧಿಸಿದರು.

ಈ ಸಂದರ್ಭ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಅಧ್ಯಕ್ಷರು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಕೊಪ್ಪಳದ ಗೌರವಾನ್ವಿತ ಚಂದ್ರಶೇಖರ ಸಿ., ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಸದಸ್ಯ ಕಾರ್ಯದರ್ಶಿಗಳು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಮಹಾಂತೇಶ್ ಎಸ್. ದರಗದ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ರಾಮ್ ಎಲ್. ಅರಸಿದ್ದಿ, ಕರ್ನಾಟಕ ಲೋಕಾಯುಕ್ತದ ವಿಚಾರಣೆ ಅಪರ ನಿಬಂಧಕರಾದ ಡಾ. ಕಸನಪ್ಪ ನಾಯ್ಕ, ರಮಾಕಾಂತ್ ಚವ್ಹಾಣ ಹಾಗೂ ಅರವಿಂದ ಎನ್.ವಿ., ರಾಯಚೂರು ಲೋಕಾಯುಕ್ತ ಪೊಲೀಸ್ ಅಧೀಕ್ಷಕರಾದ ಸತೀಶ್ ಎಸ್. ಚಿಟಗುಬ್ಬಿ, ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ, ಅಪರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಆರ್.ಹೇಮಂತಕುಮಾರ್, ಉಪ ವಿಭಾಗಾಧಿಕಾರಿ ಮಹೇಶ ಮಾಲಗಿತ್ತಿ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಯ ಅಧಿಕಾರಿಗಳು ಮತ್ತು ಅಹವಾಲು ಹಾಗೂ ದೂರುಗಳನ್ನು ಸಲ್ಲಿಸಲು ಬಂದ ಸಾರ್ವಜನಿಕರು ಉಪಸ್ಥಿತರಿದ್ದರು.

# ಕರಾಟೆ ಕ್ರೀಡಾಕೂಟ: ರಾಜ್ಯಮಟ್ಟಕ್ಕೆ ಆಯ್ಕೆಯಾದ 42 ವಿದ್ಯಾರ್ಥಿಗಳು

**ಬಾಗಲಕೋಟೆ:** ಬಾಗಲಕೋಟೆ ಜಿಲ್ಲೆಯ ಕರಾಟೆ ವಿದ್ಯಾರ್ಥಿಗಳು ರಾಜ್ಯ ಮಟ್ಟದ ಕರಾಟೆ ಕ್ರೀಡಾಕೂಟದಲ್ಲಿ ಕೇವಲ ಭಾಗವಹಿಸದೇ ತಮಗೆ ನೀಡಿದ ತರಬೇತಿಯನ್ನು ಅತ್ಯುತ್ತಮವಾಗಿ ಪ್ರದರ್ಶಿಸಿ ಪ್ರಥಮ ಸ್ಥಾನ ಪಡೆದು ರಾಷ್ಟ್ರಮಟ್ಟಕ್ಕೆ ಆಯ್ಕೆಯಾಗಿ ಮಿಂಚಬೇಕೆಂದು ಬಾಗಲಕೋಟೆ ಜಿಲ್ಲಾ ಕರಾಟೆ ಅಸೋಸಿಯೇಷನ್ ಅಧ್ಯಕ್ಷ ಎಸ್. ಆರ್. ರಾಠೋಡ ಹೇಳಿದರು.




ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಮತ್ತು ಶಾಲಾ ಶಿಕ್ಷಣ ಇಲಾಖೆ ಹಾಗೂ ಬಾಗಲಕೋಟೆ ಜಿಲ್ಲಾ ಕರಾಟೆ ಅಸೋಸಿಯೇಷನ್ ಸಹಯೋಗದೊಂದಿಗೆ ನಡೆದ ಜಿಲ್ಲಾ ಮಟ್ಟದ ಶಾಲಾ ಕರಾಟೆ ಕ್ರೀಡಾಕೂಟದಲ್ಲಿ ಮಾತನಾಡಿದ ಅವರು, ಈಗಾಗಲೇ ಜಿಲ್ಲೆಯ ಕರಾಟೆ ಪಟುಗಳು ರಾಷ್ಟ್ರದಾದ್ಯಂತ ಹೆಸರುವಾಸಿಯಾಗಿದ್ದು, ಅದರಂತೆ ರಾಜ್ಯ ಸರ್ಕಾರದಿಂದ ನಡೆಯುವ ಕರಾಟೆ ಕ್ರೀಡಾಕೂಟಗಳಲ್ಲಿ ವಿದ್ಯಾರ್ಥಿಗಳು ಡಬ್ಲುಕೆಎಫ್ ನಿಯಮಾವಳಿಯಂತೆ ಹೆಚ್ಚಿನ ತರಬೇತಿಯೊಂದಿಗೆ ಸಾಧನೆ ಮಾಡಬೇಕೆಂದು ಹೇಳಿದರು. ಜಿಲ್ಲೆಯ ವಿವಿಧ ತಾಲೂಕುಗಳಿಂದ ಆಯ್ಕೆಯಾಗಿ ಬಂದ ವಿದ್ಯಾರ್ಥಿಗಳು ಕುಮಿಟೆ (ಪೈಟಿಂಗ್)ನಲ್ಲಿ ಅದ್ಭುತ ಪ್ರದರ್ಶನ ನೀಡಿದ ದಾವಣಗೆರೆ ಮತ್ತು ಚಿಕ್ಕಬಳ್ಳಾಪುರದಲ್ಲಿ ನಡೆಯಲಿರುವ ರಾಜ್ಯ ಮಟ್ಟದ ಶಾಲಾ ಕರಾಟೆ ಕ್ರೀಡಾಕೂಟಕ್ಕೆ ಆಯ್ಕೆಯಾಗಿದ್ದಾರೆ.

ಜಿಲ್ಲಾ ಮಟ್ಟದಲ್ಲಿ ಸೆಣಸಾಡಿ ಪ್ರಥಮ ಸ್ಥಾನ ಪಡೆದು ರಾಜ್ಯಮಟ್ಟದ ಚಾಂಪಿಯನ್‌ಶೀಪ್‌ನಲ್ಲಿ ಬಾಗಲಕೋಟೆ ಜಿಲ್ಲೆಯನ್ನು ಪ್ರತಿನಿಧಿಸಿ ಸೆಣಸಾಡಲಿದ್ದಾರೆ. ಪ್ರಥಮ ಹಾಗೂ ದ್ವೀತಿಯ ಸ್ಥಾನ ಪಡೆದ ಶಾಲಾ ವಿದ್ಯಾರ್ಥಿಗಳಿಗೆ ಜಿಲ್ಲಾ ದೈಹಿಕ ಶಿಕ್ಷಣಾಧಿಕಾರಿ ಆರ್.ಆರ್.ಪಾಟೀಲ್, ಜಿಲ್ಲಾ ಜಿಲ್ಲಾ ಕರಾಟೆ ಅಸೋಸಿಯೇಷನ್ ಅಧ್ಯಕ್ಷ ಎಸ್.ಆರ್.ರಾಠೋಡ, ಕಾರ್ಯದರ್ಶಿ ಮುತ್ತಣ್ಣ ಭಜಂತ್ರಿ, ಕವಿಗಳಾದ ಎಚ್.ಎನ್ ಶೇಬನ್ನವರ, ಮುತ್ತು ಮಾಚಕನೂರ, ದೈಹಿಕ ಶಿಕ್ಷಕರಾದ ರವಿಕುಮಾರ ಲಮಾಣಿ, ಹನಮಂತ ರಾಂಪೂರ, ಶಿಕ್ಷಕರು ಪ್ರಶಸ್ತಿ ಪತ್ರ ನೀಡಿ ಶುಭಕೋರಿದರು.

# ಇಂಗಳಗೇರಿ ಗ್ರಾಪಂ 2ನೇ ಅವಧಿಗೆ ಅಧ್ಯಕ್ಷ ಉಪಾಧ್ಯಕ್ಷರ ಆಯ್ಕೆ

**ಮುದ್ದೇಬಿಹಾಳ;** ಇಂಗಳಗೇರಿ ಗ್ರಾಪಂ ಎರಡನೇ ಅವಧಿಗೆ ನಡೆದ ಚುನಾವಣೆಯಲ್ಲಿ ಅಧ್ಯಕ್ಷರಾಗಿ ಪ್ರಕಾಶ ಗುರುನಾಥಪ್ಪ ಮಾಲಗತ್ತಿ ಉಪಾಧ್ಯಕ್ಷರಾಗಿ ಶೀಲವಂತಿ ಬಾಲಪ್ಪ ಮಾದರ ಆಯ್ಕೆಯಾಗಿದ್ದಾರೆಂದು ಚುನಾವಣಾ ಅಧಿಕಾರಿ ತಾಪಂ ಇಒ ವೆಂಕಟೇಶ ವಂದಾಲ ಘೋಷಣೆ ಮಾಡಿದರು.



ಗುರುವಾರ ನಡೆದ ಚುನಾವಣೆಯಲ್ಲಿ ಅಧ್ಯಕ್ಷ ಸ್ಥಾನಕ್ಕೆ ಪ್ರಕಾಶ ಮಾಲಗತ್ತಿ ಹಾಗೂ ಫೀರಣ್ಣಿ ರಾಜಾಪಟೇಲ ತೆಳಗಿನಮನಿ ನಾಮಪತ್ರ ಸಲ್ಲಿಸಿದ್ದರು ಗೌಪ್ಯಮತದಾನದಲ್ಲಿ ಒಟ್ಟು 15 ಸದಸ್ಯರು ಪಾಲ್ಗೊಂಡು ಮತದಾನ ಮಾಡಿದ್ದರು ಫೀರಣ್ಣಿ ತೆಳಗಿನಮನಿ 7 ಮತಗಳನ್ನು ಪಡೆದರೆ ಪ್ರಕಾಶ ಮಾಲಗತ್ತಿ 8 ಮತಗಳನ್ನು ಪಡೆದು ಜಯಶಾಲಿಯಾಗಿ ಅಧ್ಯಕ್ಷ ಸ್ಥಾನಕ್ಕೆ ಆಯ್ಕೆಯಾದರು ಉಪಾಧ್ಯಕ್ಷ ಎಸ್ಸಿ ಮೀಸಲು ಸ್ಥಾನಕ್ಕೆ ಶೀಲವಂತಿ ಮಾದರ ಒಬ್ಬರೇ ನಾಮಪತ್ರ ಸಲ್ಲಿಸಿದ್ದರಿಂದ ಅವಿರೋಧವಾಗಿ ಆಯ್ಕೆಯಾದರು. ಎರಡನೇ ಅವಧಿಗೆ ಆಯ್ಕೆ ಯಾದ ನೂತನ ಅಧ್ಯಕ್ಷ ಪ್ರಕಾಶ ಮಾಲಗತ್ತಿ ಎಲ್ಲಾ ಸದಸ್ಯರ ಸಹಕಾರದಿಂದ ಅಧ್ಯಕ್ಷನಾಗಿ ಆಯ್ಕೆಯಾಗಿದ್ದೇನೆ ಎಲ್ಲಾ ಸದಸ್ಯರನ್ನು ವಿಶ್ವಾಸಕ್ಕೆ ಪಡೆದುಕೊಂಡು ಇಂಗಳಗೇರಿ ಗ್ರಾಪಂ ನಾಲ್ಕು ಗ್ರಾಮಗಳಗೆ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಕಾರ್ಯ ಮಾಡುತ್ತೇನೆ ಗ್ರಾಪಂ ಕಟ್ಟಡಕ್ಕೆ ಜಾಗೆ ಇದ್ದು ಗ್ರಾಪಂ ನೂತನ ಕಟ್ಟಡ ಮಾಡುವುದಾಗಿ ತಿಳಿಸಿದರು.

ಸಹಾಯಕ ಚುನಾವಣಾ ಅಧಿಕಾರಿಯಾಗಿ ಎಸ್ಎಸ್ ಬಂಗಾರಗುಂಡ, ಪಿಡಿಒ ಮುಕ್ಕಣ್ಣ ನಾಯಕ, ಕಾರ್ಯದರ್ಶಿ ಗುರಡ್ಡಿ ಬಿರಾದಾರ ಕಾರ್ಯ ನಿರ್ವಹಿಸಿದರು. ಮುಂಜಾಗ್ರತಾ ಕ್ರಮವಾಗಿ ಪೊಲೀಸ್ ಬಿಗಿಬಂದೂಬಸ್ತ ಏರ್ಪಸಿಲಾಗಿತ್ತು ಪಿಎಸೈ ಜ್ಯೋತಿ ಖೋತ್ ಸ್ಥಳದಲ್ಲಿ ಇದ್ದರು.

# ಮುಂಗಡ ಹಣಕ್ಕೆ ಒತ್ತಾಯಿಸಿ ರೈತರಿಂದ ಬೃಹತ್ ಪ್ರತಿಭಟನೆ

**ಮೂಡಲಗಿ:** ಬೆಳಗಾವಿ, ಬಾಗಲಕೋಟ ಮತ್ತು ವಿಜಯಪೂರ ಜಿಲ್ಲೆಗಳ ಸಕ್ಕರೆ ಕಾರ್ಖಾನೆ ಮಾಲೀಕರು ರೈತರಿಗೆ ಮಹಾರಾಷ್ಟ ಮಾದರಿಯಲ್ಲಿ ಮೊದಲ ಕಂತಿನ (ಮುಂಗಡ) 3.5 ಸಾವಿರ ಹಣ ನೀಡುವ ವಾಗ್ದಾನ ಮಾಡಿಯೇ ಸಕ್ಕರೆ ಕಾರ್ಖಾನೆಗಳನ್ನು ಆರಂಬಿಸಬೇಕೆಂದು ಗುರುವಾರ ತಾಲೂಕಿನ ಗುರ್ಲಾಪೂರದಲ್ಲಿ ರಾಜ್ಯ ಹೆದ್ದಾರಿಯನ್ನು ಬಂದ ಮಾಡಿ ರೈತರು. ಮುಖಂಡರು ಬೃಹತ್ ಪ್ರತಿಭಟನೆ ಮಾಡಿದರು,

ಸಂದರ್ಭದಲ್ಲಿ ಗೋಕಾಕ, ಮಹಾಲಿಂಗಪುರ, ಮೂಡಲಗಿ, ರಾಮದುರ್ಗ, ಇನ್ನಿತರ ಭಾಗಗಳಿಂದ ಹೆಚ್ಚಿನ ಸಂಖ್ಯೆಯಲ್ಲಿ ರೈತ ಮುಖಂಡರು ಗುರ್ಲಾಪೂರಕ್ಕೆ ಬಂದು ನಮ್ಮ ಹಕ್ಕಿನ ಮುಂಗಡ ಹಣಕ್ಕೆ ಮನವಿ ಮಾಡಿದರು.

ಸರ್ಕಾರ ಗೃಹಲಕ್ಷ್ಮಿ ಹಣ ಮೂರುತಿಂಗಳಿಂದ ಬಿಡುಗಡೆ ಮಾಡಿಲ್ಲಾ ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ ಕುರಿತು ಈ ಸಮಯದಲ್ಲಿ ರೈತ ಮಹಿಳೆ ಮಾತುಗಳಿಂದ ಟೀಕಿಸಿದರು,

ಸಂಸದ ಈರಣ್ಣ ಕಡಾಡಿ ಸಹೋದರ ಶಿವಪ್ಪ ಕಡಾಡಿ, ರೈತ ಸಂಘ ರಾಜ್ಯಾಧ್ಯಕ್ಷ ಚುನ್ನಪ್ಪ ಪೂಜಾರಿ, ರಾಮದುರ್ಗದ ಶಿವಾನಂದ ದೊಡಗೌಡರ ಚಿಕ್ಕೋಡಿ ಜಿಲ್ಲಾಧ್ಯಕ್ಷ ಮಲ್ಲಪ್ಪ ಅಂಗಡಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಶ್ರೀಶೈಲ್ ಅಂಗಡಿ, ರಾಜ್ಯ ಸಂಚಾಲಕ ಬಾಬುರಾವ್ ಪಾಟೀಲ್ ಮತ್ತು ಶಿವಲಿಂಗಪ್ಪ ಕೌಜಲಗಿ ಅನೇಕ ರೈತರು ತಮ್ಮ ಆಕ್ರೋಶದ ಮಾತುಗಳ ಮೂಲಕ ಸರ್ಕಾರವನ್ನು ಹಾಗೂ ಕಾರ್ಖಾನೆಗಳ ಮಾಲಿಕರನ್ನು ಎಚ್ಚರಿಸುವ ಕೆಲಸ ಮಾಡಿದರು,

ಅನ್ನದಾತನ ಪ್ರತಿಭಟನೆಗೆ ಜಿಲ್ಲೆಯ ಯಾವದೇ ಶಾಸಕರು, ಸಂಸದರು, ಮಾಜಿ ಶಾಸಕರು ಮಾಜಿ ಸಂಸದರು, ಹಿರಿಯ ಮಟ್ಟದ ಅಧಿಕಾರಿಗಳು ಬರದೆ ಮುಂಜಾನೆಯಿಂದ ಸಂಜೆಯವರೆಗೆ ಪ್ರತಿಭಟಿಸಿದ ರೈತ ಸಮುದಾಯಕ್ಕೆ ಅವಮಾನಿಸಿದ ಘಟನೆ ಜರುಗಿತು,



## ದೂರವಾಣಿ ಮೂಲಕ ಸಂಸದ ಕಡಾಡಿ ಮನವಿ

ಪ್ರತಿವರ್ಷ ರೈತರು ತಮ್ಮ ಕಬ್ಬಿನ ಬೆಲೆ ನಿಗದಿಗಾಗಿ ತಮ್ಮ ಕೃಷಿ ಚಟುವಟಿಕೆಗಳನ್ನು ಬದಿಗೊತ್ತಿ ಬೀದಿಗಿಳಿದು ಹೋರಾಟ ಮಾಡುವದು ದುರಂತ. ಸಕ್ಕರೆ ಕಾರ್ಖಾನೆಯ ಮಾಲಿಕರನ್ನು ಒಪ್ಪಿಸಿಲು ಪ್ರಯತ್ನ ಮಾಡಿದರು ಅದು ಸಾಧ್ಯವಾಗದ ಕಾರಣ ಇಂದು ರಸ್ತೆ ತಡೆ ಪ್ರತಿಭಟನೆ ಮಾಡಿದ್ದಾರೆ ಈ ಹೋರಾಟಕ್ಕೆ ನಮ್ಮ ಬೆಂಬಲ ಇದೆ ಎಂದ ಅವರು, ಸಕ್ಕರೆ ಉತ್ಪಾದನೆಗೆ ಮಾತ್ರ ಹಣ ನೀಡುತ್ತಿದ್ದು ಇತರೆ ಉತ್ಪಾದನೆಗಳಾದ ಎಥಿನಾಲ, ಡಿಲ್ಸರಿ ಸಹಿತ ಹಲವು ವಸ್ತುಗಳ ಉತ್ಪಾದನೆಗಳ ಮೇಲೆ ಸರ್ಕಾರ ರೈತರಿಗೆ ಸೂಕ್ತವಾದ ಹಾಗೂ ವೈಜ್ಞಾನಿಕವಾದ ಬೆಲೆ ನಿಗದಿಗೆ ಮುಖ್ಯಮಂತ್ರಿಗಳು ಸಕ್ಕರೆ ಸಚಿವರು, ರೈತ ಮುಖಂಡರು ಒಂದು ಸಭೆ ಮಾಡಿ ದರ ನಿಗದಿ ಮಾಡಬೇಕು, ಕೇಂದ್ರದ ಸಕ್ಕರೆ ಸಚಿವರನ್ನು ಬೆಟ್ಟಿಯಾಗಲು ನಿಯೋಗವನ್ನು ಸಿದ್ದ ಪಡಿಸಲು ಸೂಚಿಸಿದರು, ಅವರೊಂದಿಗೆ ಮಾತುಕತೆ ನಡೆಸಲು ಎಲ್ಲ ವವ್ಯಸ್ಥೆ ಮಾಡುವದಾಗಿ ಎಂಬ ಸಂದೇಶವನ್ನು ದೂರವಾಣಿ ಮೂಲಕ ನೀಡಿ ರೈತರಿಗೆ ಬೆಂಬಲ ವ್ಯಕ್ತ ಪಡಿಸಿದರು.

ಮುಂಜಾನೆಯಿಂದ ಸಾವಿರ ಸಾವಿರ ಸಂಖ್ಯೆಯಲ್ಲಿ ಗುರ್ಲಾಪೂರ ಕ್ರಾಸಿನಲ್ಲಿ ಜಮೆಯಾದ ರೈತರು,ರೈತರಿಗೆ ಅಲ್ಲಿಯೇ ಊಟದ ವವ್ಯಸ್ಥೆ ಮಾಡಿದ ಮುಖಂಡರು, ರಸ್ತೆ ಬಂದ ಆದ ಕಾರಣ ಪ್ರಯಾಣಿಕರ ಪರದಾಟವು ಜರುಗಿತು, ಸಂಜೆ ಚಿಕ್ಕೋಡಿಯ ಉಪವಿಭಾಗಾಧಿಕಾರಿಗಳು ಬಂದ ಮನವಿ ಸ್ವಿಕರಿಸಿದರು, ಯಾವದೇ ಅಹಿತಕರ ಘಟನೆಗಳು ನಡೆಯದಂತೆ ಮೂಡಲಗಿ ಪೋಲಿಸರು ಸೂಕ್ತ ಬಂದೂ ಬಸ್ತ ಮಾಡಿದರು.

# ಕಾನೂನು ರಕ್ಷಣೆ ನಮ್ಮೆಲ್ಲರ ಹಕ್ಕು: ನ್ಯಾ. ದಿಡ್ಡಿ

**ಬಾಗಲಕೋಟ:** ಇಂದಿನ ಯುವ ಸಮೂಹಕ್ಕೆ ಕಾನೂನಿನ ಅರಿವು ಅತಿ ಮುಖ್ಯವಾಗಿದ್ದು, ಕಾನೂನು ರಕ್ಷಣೆ ನಮ್ಮೆಲ್ಲರ ಹಕ್ಕಾಗಿದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಬಾಗಲಕೋಟಯ ಸದಸ್ಯ ಕಾರ್ಯದರ್ಶಿಗಳು ಹಿರಿಯ ದಿವಾಣಿ ನ್ಯಾಯಾಧೀಶರಾದ ಚಂದ್ರಶೇಖರ ದಿಡ್ಡಿ ಹೇಳಿದರು.

ಅವರು ನಗರದ ಬಿ ವ್ಹಿ ವ್ಹಿ ಸಂಘದ ಬಸವೇಶ್ವರ ವಿಜ್ಞಾನ ಪದವಿ ಪೂರ್ವ ಮಹಾವಿದ್ಯಾಲಯದಲ್ಲಿ ಕಾನೂನು ಅರಿವು ಕಾರ್ಯಕ್ರಮವನ್ನು ಸಸಿಗೆ ನೀರುಣಿಸುವ ಮೂಲಕ ಉದ್ಘಾಟಿಸಿ ಮಾತನಾಡಿದ ಅವರು ಪ್ರಚಲಿತ ವರ್ತಮಾನದ ಸುದ್ದಿಗಳ ಅರಿವು ಮುಖ್ಯವಾಗಿದ್ದು, ಸ್ಪರ್ಧಾತ್ಮಕವಾದ ಪರೀಕ್ಷೆಯ ಸಲುವಾಗಿ ಸಾಮಾನ್ಯ ಜ್ಞಾನವನ್ನು ಹೆಚ್ಚಿಸಿಕೊಳ್ಳಲು ಒಳ್ಳೆಯ ಸುದ್ದಿ ಪತ್ರಿಕೆಗಳನ್ನು ಓದಬೇಕು ಇದರಿಂದ ಪ್ರಪಂಚಜ್ಞಾನ, ವಿಷಯಗಳ ಅರಿವು, ಸ್ಪರ್ಧಾತ್ಮಕ ವಿಷಯಗಳನ್ನು ತಿಳಿಯಬಹುದು.

ಭಾಷೆ ಬಗ್ಗೆ ಒಂದು ಭಾಷೆಯಿಂದ ಇನ್ನೊಂದು ಭಾಷೆಯ ಬಗ್ಗೆ ಅನುವಾದ, ಪ್ರತಿದಿನ ಒಂದು ಒಳ್ಳೆಯ ದಿನಪತ್ರಿಕೆಗಳನ್ನು ಓದುವ ಹವ್ಯಾಸವನ್ನು ಬೆಳೆಸಿಕೊಳ್ಳಿ ಸ್ಪರ್ಧಾತ್ಮಕ ಪರೀಕ್ಷೆಗಾಗಿ ಒಳ್ಳೆಯ ಪುಸ್ತಕಗಳನ್ನು ಆಯ್ಕೆ ಮಾಡಿ ಎಂದು ಹೇಳಿ ಭಾರತದ ಸರ್ವೋಚ್ಚ ನ್ಯಾಯಾಲಯದ ಐದು ಯೋಜನೆಗಳಾದ ಆಶಾ ಯೋಜನೆ, ಡಾನ್ ಯೋಜನೆ, ಸಾತಿ ಯೋಜನೆ, ಜಾಗೃತಿ ಯೋಜನೆ, ಸಂವಾದ ಯೋಜನೆ ಬಗ್ಗೆ ವಿದ್ಯಾರ್ಥಿಗಳಿಗೆ ಅರಿವನ್ನು ಮೂಡಿಸಿದರು. ಸತತ ಪ್ರಯತ್ನ ಮಾಡಿ ನಿಮ್ಮ ಗುರಿಯನ್ನು ಮುಟ್ಟಿರಿ ಎಂದರು



ಕಾರ್ಯಕ್ರಮದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿ ಕಾರ ಬಾಗಲಕೋಟೆ, ಪ್ರಧಾನ ಕಾನೂನು ಅಭಿರಕ್ಷಕರು ಪ್ರಕಾಶ್ ಮಾಳೆದ ಮಾತನಾಡಿದರು,

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ ಪ್ರಾಚಾರ್ಯ ಡಾ.ಎನ್, ಹೆಚ್, ಬೇವಿನಹಳ್ಳಿ ಮಾತನಾಡಿ ಯಾವಾಗಲೂ ಕಾನೂನು ಅದರ ರಕ್ಷಣೆ ಬಗ್ಗೆ ಜಾಗೃತವಾಗಿರಿ ಗೌರವನ್ನು ಕೊಡುವುದರ ಜೊತೆಗೆ ಪ್ರಾಮಾಣಿಕತೆಯಲ್ಲಿ ನಮ್ಮ ಜೀವನವನ್ನು ನಡೆಸಿದಾಗ ಮಾತ್ರ ನಾವು ನಮ್ಮ ಗುರಿಯನ್ನು ಹೊಂದಲು ಸಾಧ್ಯ ಎಂದರು.

ಈ ಕಾರ್ಯಕ್ರಮದಲ್ಲಿ ಎಸ್,ಎನ್, ಮಂಕಣಿ ಸ್ವಾಗತಿಸಿದರು ಆರ್,ಆರ್,ರಡ್ಡೇರ ವಂದಿಸಿದರು, ಜಿ,ಎಚ್, ಜಗಳೂರ ನಿರೂಪಿಸಿದರು. ಈ ಕಾರ್ಯಕ್ರಮದಲ್ಲಿ ಮಹಾವಿದ್ಯಾಲಯದ ಎಲ್ಲಾ ವಿದ್ಯಾರ್ಥಿಗಳು ಹಾಗೂ ಬೋಧಕ ಸಿಬ್ಬಂದಿ ಹಾಜರಿದ್ದರು.

### ಚಿತ್ರಕಲಾ ಸ್ಪರ್ಧೆಗೆ ಜಿಲ್ಲಾಧಿಕಾರಿ ಡಾ.ಆನಂದ ಕೆ. ಚಾಲನೆ

# ಮಾಲಿನ್ಯ ನಿಯಂತ್ರಣ ಮಂಡಳಿ ಸುವರ್ಣ ಮಹೋತ್ಸವ

**ವಿಜಯಪುರ:** ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಸುವರ್ಣ ಮಹೋತ್ಸವದ ಅಂಗವಾಗಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಪ್ರವಾಸೋದ್ಯಮ ಇಲಾಖೆ, ಪುರಾತತ್ವ ಇಲಾಖೆ ಇವರ ಸಹಯೋಗದೊಂದಿಗೆ ಬುಧವಾರ ನಗರದ ಗಗನ್ ಮಹಲ್ ಆವರಣದಲ್ಲಿ ಆಯೋಜಿಸಿದ್ದ ಜಿಲ್ಲಾ ಮಟ್ಟದ ಚಿತ್ರಕಲಾ ಸ್ಪರ್ಧೆಯನ್ನು ಜಿಲ್ಲಾಧಿಕಾರಿ ಡಾ.ಆನಂದ ಕೆ. ಅವರು ಚಿತ್ರ ಬಿಡಿಸುವ ಮೂಲಕ ಚಾಲನೆ ನೀಡಿ ಗಮನ ಸೆಳೆದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿಗಳು ಮಾತನಾಡಿ, ವಿದ್ಯಾರ್ಥಿಗಳು ತಮ್ಮ ಓದಿನೊಂದಿಗೆ ಸೃಜನಾತ್ಮಕ ಕಲೆಯನ್ನು ರೂಢಿಸಿಕೊಳ್ಳುವ ಮೂಲಕ, ಸಂಗೀತ, ಚಿತ್ರಕಲೆ, ಕ್ರೀಡಾ ಕ್ಷೇತ್ರ ಸೇರಿದಂತೆ ಆಟೋಟಗಳಲ್ಲಿ ತಮ್ಮ ವ್ಯಕ್ತಿತ್ವವನ್ನು ವಿಕಸನಗೊಳಿಸಿಕೊಳ್ಳಬೇಕು ಎಂದು ವಿದ್ಯಾರ್ಥಿಗಳಿಗೆ ಪ್ರೋತ್ಸಾಹಿತ ನುಡಿಗಳನ್ನಾಡಿದರು.



ಸ್ಪರ್ಧೆಯಲ್ಲಿ ಜಿಲ್ಲೆಯ ವಿವಿಧ ಶಾಲೆಗಳಿಂದ ಒಟ್ಟು 568 ವಿದ್ಯಾರ್ಥಿಗಳು ಭಾಗವಹಿಸಿದ್ದರು. ಈ ಪೈಕಿ ಪ್ರಾಥಮಿಕ ಹಂತದಲ್ಲಿ ಎಂಪಿಎಸ್ ಗಣಿಹಾರ ಶಾಲೆಯ ಸಮೀನಾ ಶೇಖ ಪ್ರಥಮ, ವಿಜಯಪುರದ ಬಿ.ಎಂ.ಪಾಟೀಲ ಪಬ್ಲಿಕ್ ಶಾಲೆಯ ಪ್ರಜ್ಞಾ ಪಿ.ಶಿಂಧೆ ದ್ವಿತೀಯ ಹಾಗೂ ಇಟ್ಟಂಗಿಹಾಳದ ಎಕ್ಸಲೆಂಟ್ ಪ್ರಾಥಮಿಕ ಶಾಲೆಯ ಐಶ್ವರ್ಯ ಡೋಣಗಿ ತೃತೀಯ ಸ್ಥಾನ ಪಡೆದುಕೊಂಡರು.

ಪ್ರೌಢಶಾಲಾ ವಿಭಾಗದಲ್ಲಿ ನಗರದ ಪ್ರೇರಣಾ ಪಬ್ಲಿಕ್ ಶಾಲೆಯ ಅಪೂರ್ವ ಪಿ.ಲಮಾಣಿ ಪ್ರಥಮ, ಬಿ.ಎಂ.ಪಾಟೀಲ ಪಬ್ಲಿಕ್ ಶಾಲೆಯ ವೈಷ್ಣವಿ ಆರ್.ಪಾಟೀಲ ದ್ವಿತೀಯ, ನಗರದ ಸೆಂಟ್ ಜೋಷೆಫ್ ಆಂಗ್ಲ ಮಾಧ್ಯಮ ಶಾಲೆಯ ವಿಜಯಲಕ್ಷ್ಮಿ ಕೊಕಟನೂರ ತೃತೀತಯ ಸ್ಥಾನ ಪಡೆದುಕೊಂಡಿದ್ದಾರೆ.

ಈ ಸಂದರ್ಭದಲ್ಲಿ ಕರ್ನಾಟಕ ಮಾಲಿನ್ಯ ನಿಯಂತ್ರಣ ಮಂಡಳಿ ಅಧಿಕಾರಿ ವಿವೇಕ ಗುಣಗಾ, ಪ್ರವಾಸೋದ್ಯಮ ಇಲಾಖೆ ಉಪನಿರ್ದೇಶಕ ಅರವಿಂದ ಹೂಗಾರ, ಪುರಾತತ್ವ ಸರ್ವೇಕ್ಷಣಾ ಇಲಾಖೆಯ ಸಹಾಯಕ ಸಂರಕ್ಷಣಾದಿಕಾರಿ ವಿಜಯಕುಮಾರ, ವಿವಿಧ ಶಾಲೆಗಳ ಚಿತ್ರಕಲಾ ಶಿಕ್ಷಕರು-ಶಿಕ್ಷಕಿಯರು ಉಪಸ್ಥಿತರಿದ್ದರು.

### ವೀರ ವನಿತೆ ಒನಕೆ ಓಬವ್ವ ಜಯಂತಿ ಪೂರ್ವಭಾವಿ ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಡಾ.ದುರಗೇಶ್ ಕೆ.ಆರ್ ಸೂಚನೆ

# ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಿ



**ಗದಗ:** ವೀರವನಿತೆ ಒನಕೆ ಓಬವ್ವ ಜಯಂತಿ ಕಾರ್ಯಕ್ರಮವನ್ನು ನವೆಂಬರ್ 11 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ದಲ್ಲಿ ಸರ್ಕಾರದಿಂದ ಅರ್ಥಪೂರ್ಣವಾಗಿ ಹಾಗೂ ವ್ಯವಸ್ಥಿತವಾಗಿ ಆಚರಿಸಲು ಕ್ರಮ ವಹಿಸಬೇಕೆಂದು ಅಪರ ಜಿಲ್ಲಾಧಿಕಾರಿ ಡಾ.ದುರಗೇಶ್ ಕೆ.ಆರ್. ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ವೀರವನಿತೆ ಒನಕೆ ಓಬವ್ವ ಜಯಂತಿ ಆಚರಣೆ ಕುರಿತು ಜರುಗಿದ ಪೂರ್ವಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಶಿಷ್ಟಾಚಾರದನ್ವಯ ಜಯಂತಿ ಆಮಂತ್ರಣ ಪತ್ರಿಕೆ ಮುದ್ರಣಕ್ಕೆ ಕ್ರಮ ವಹಿಸಬೇಕು. ವೀರ ವನಿತೆ ಒನಕೆ ಓಬವ್ವ ಕುರಿತು ಆಳವಾಗಿ ಅಧ್ಯಯನ ಮಾಡಿದವರನ್ನು ಉಪನ್ಯಾಸಕರನ್ನಾಗಿ ಆಯ್ಕೆ ಮಾಡಲು ಕ್ರಮ ವಹಿಸಬೇಕು. ಹೆಚ್ಚಿನ ಸಂಖ್ಯೆಯಲ್ಲಿ ಜನರು ಒನಕೆ ಓಬವ್ವ ಜಯಂತಿ ಕಾರ್ಯಕ್ರಮಕ್ಕೆ ಆಗಮಿಸುವಂತೆ ನೋಡಿಕೊಳ್ಳಬೇಕು. ಎಸ್.ಎಸ್.ಎಲ್.ಸಿ., ಪಿಯುಸಿ, ಪದವಿ ಪರೀಕ್ಷೆಯಲ್ಲಿ ಅತೀ ಹೆಚ್ಚು ಅಂಕ ಗಳಿಸಿದ ಸಮಾಜದ ವಿದ್ಯಾರ್ಥಿಗಳಿಗೆ ಜಯಂತಿ ಸಮಾರಂಭದಲ್ಲಿ ಸನ್ಮಾನ ಕಾರ್ಯಕ್ರಮ ಜರುಗಲಿದ್ದು ಒಟ್ಟಾರೆಯಾಗಿ ವೀರ ವನಿತೆ ಓಬವ್ವ ಜಯಂತಿ ಅಚ್ಚುಕಟ್ಟಾಗಿ ನಡೆಸಬೇಕೆಂದು ಅಪರ ಜಿಲ್ಲಾಧಿಕಾರಿ ನಿರ್ದೇಶನ ನೀಡಿದರು.

ಸಭೆಯಲ್ಲಿ ವಿವಿಧ ಕಲಾತಂಡಗಳೊಂದಿಗೆ ಮೆರವಣಿಗೆ, ವೇದಿಕೆ ವ್ಯವಸ್ಥೆ, ಅಲ್ಪೋಪಹಾರದ ವ್ಯವಸ್ಥೆ, ಬ್ಯಾನರ್ ಅಳವಡಿಕೆ ಕುರಿತು ಚರ್ಚಿಸಲಾಯಿತು.

ಈ ಸಂದರ್ಭದಲ್ಲಿ ನಗರಾಬಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸವರಾಜ ಕೋಟೂರ, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಸ್.ಬಿ.ಮಸನಾಯಕ,ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್.ಬುರುಡಿ, ತಹಶೀಲ್ದಾರ ಶ್ರೀನಿವಾಸಮೂರ್ತಿ ಕುಲಕರ್ಣಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿ ಮಹಬೂಬ ತುಂಬರಮಟ್ಟಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ಸಮಾಜದ ಗಣ್ಯರು, ಹಿರಿಯರು ಹಾಜರಿದ್ದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಡಾ.ಬಸವರಾಜ ಬಳ್ಳಾರಿ ಅವರು ಸ್ವಾಗತಿಸಿ ವಂದಿಸಿದರು.

# ಸಾಹಿತಿಗಳ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಿ

**ರಾಮದುರ್ಗ:** ನಾಡಿನ ಖ್ಯಾತ ಕವಿ ಸಾಹಿತಿಗಳ ಆದರ್ಶಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿ ಕೊಂಡರೆ ತಾವೂ ಕೂಡಾ ಸಾಧಕರಾಗ ಬಹುದು ಎಂದು ಸಾಹಿತಿ ಬಾಳಾಸಾಹೇಬ ಲೋಕಾಪೂರ ವಿದ್ಯಾರ್ಥಿಗಳಿಗೆ ಕವಿಮಾತು ಹೇಳಿದರು.

ಸ್ಥಳೀಯ ಸಿ.ಎಸ್.ಬೆಂಬಳಗಿ ಕಾಲೇಜಿನ ಕರ್ನಾಟಕ ಸಂಘದ ಅಡಿಯಲ್ಲಿ ಅಂತರರಾಷ್ಟ್ರೀಯ ಬುಕರ್ ಪ್ರಶಸ್ತಿ ವಿಜೇತ ಲೇಖಕಿಯರಾದ ಬಾನು ಮುಷ್ತಾಕ ಹಾಗೂ ದೀಪಾ ಭಸ್ತಿ ಅವರುಗಳ ಭಾವಚಿತ್ರ ಅನಾವರಣಗೊಳಿಸಿ ಮಾತನಾಡಿದ ಅವರು, ಬೆಂಬಳಗಿ ಕಾಲೇಜು ಸಾಹಿತಿಗಳ ಭಾವಚಿತ್ರ ಅನಾರಣದಂತಹ ಕಾರ್ಯಕ್ರಮ ಹಮ್ಮಿಕೊಳ್ಳುತ್ತ ಬಂದಿರುವುದು ಶ್ಲಾಘನೀಯ. ಬೇರಾವ ಶಿಕ್ಷಣ ಸಂಸ್ಥೆಗಳಲ್ಲಿ ಇಲ್ಲದೇ ಇರುವಷ್ಟು ಸಾಹಿತಿಗಳ ಭಾವಚಿತ್ರಗಳು ಈ ಕಾಲೇಜಿನಲ್ಲಿರುವುದು ಒಂದು ಮಾದರಿಯಾಗಿದೆ ಎಂದು ಹರ್ಷವ್ಯಕ್ತಪಡಿಸಿದರು.

ಭಾವಚಿತ್ರಗಳನ್ನು ಕೊಡುಗೆ ನೀಡಿದ ಶಶಿಕಾಂತ ನೆಲ್ಲೂರ ಮಾತನಾಡಿ, ಕನ್ನಡ ನಾಡು, ನುಡಿ, ಸಾಹಿತ್ಯ ಸಂಸ್ಕೃತಿಗಳ ಬಗ್ಗೆ ವಿದ್ಯಾರ್ಥಿಗಳು ಅಭಿಮಾನ ಆಸಕ್ತಿ ಬೆಳೆಸಿಕೊಳ್ಳಬೇಕು ಎಂದು ಹೇಳಿದರು.



ವಿದ್ಯಾ ಪ್ರಸಾರಕ ಸಮಿತಿಯ ಅಧ್ಯಕ್ಷ ಎಸ್. ಎಸ್. ಸುಲ್ತಾನಪೂರ ಅಧ್ಯಕ್ಷತೆ ವಹಿಸಿ ಮಾತನಾಡಿ, ವಿದ್ಯಾರ್ಥಿಗಳು ಓದಿನ ಕಡೆಗೆ ಗಮನಹರಿಸಿ ಲೇಖಕಿಯರ ಹಾಗೆ ಸಾಧನೆಯ ಹಾದಿಯಲ್ಲಿ ಸಾಗಬೇಕು ಎಂದು ಹೇಳಿದರು.

ವಿದ್ಯಾ ಪ್ರಸಾರಕ ಸಮಿತಿಯ ಸದಸ್ಯರಾದ ಪಿ.ಎಂ.ಜಗತಾಪ, ಜಮಖಾನಾ ಉಪಾಧ್ಯಕ್ಷ ಎ. ಡಿ. ಕಾಮತ್, ಕನ್ನಡ ವಿಭಾಗ ಮುಖ್ಯಸ್ಥ ಡಾ.ಎಚ್.ಪಿ.ಹಾಲೊಳ್ಳಿ, ಕರ್ನಾಟಕ ಸಂಘದ ಕಾರ್ಯಾಧ್ಯಕ್ಷ ಡಾ.ಎಂ.ಎನ್.ಶಿದ್ಧಗಿರಿ ಉಪಸ್ಥಿತರಿದ್ದರು.

ಪ್ರಾಚಾರ್ಯ ಡಾ.ಪಿ.ಬಿ.ತೆಗ್ಗಿಹಳ್ಳಿ ಸ್ವಾಗತಿಸಿದರು. ಗೀತಾಂಜಲಿ ರಾಠೋಡ ನಿರೂಪಿಸಿದರು. ಆಶ್ವಿನಿ ಪಾಟೀಲ ವಂದಿಸಿದರು.

# ಸಮಿಕ್ಷೆ ನಿರ್ವಹಣೆ ತಿಮ್ಮಾಪುರ ಶ್ಲಾಘನೆ

**ಮುಧೋಳ:** ಹಿಂದೂಳಿದ ವರ್ಗಗಳ ಆಯೋಗದ ಶೈಕ್ಷಣಿಕ ಮತ್ತು ಸಾಮಾಜಿಕ ಸಮಿಕ್ಷೆ, ಬಾಗಲಕೋಟೆ ಜಿಲ್ಲೆಯಲ್ಲಿ ಮುಧೋಳ ತಾಲೂಕವು ಶೇಕಡಾ 93.05 ಸಮಿಕ್ಷೆಯನ್ನು ಪೂರೈಸಿ ಜಿಲ್ಲೆಯಲ್ಲಿ ಪ್ರಥಮ ಸ್ಥಾನ ಪಡೆದುಕೊಂಡಿದೆ. ಎಂದು ಅಬಕಾರಿ ಹಾಗೂ ಜಿಲಾ ್ಲಉಸ್ತುವಾರಿ ಸಚಿವ ಆರ್.ಬಿ. ತಿಮ್ಮಾಪೂರ ತಿಳಿಸಿದ್ದಾರೆ.

ಸಮಿಕ್ಷೆ ಆರಂಭದಲ್ಲಿ ಹಲವಾರು ಗೊಂದಲಗಳನ್ನು ಎದುರಿಸಿದ ಸಮಿಕ್ಷೆದಾರರು ಈಗ ಬಹುತೇಕ ಎಲ್ಲ ತಾಂತ್ರಿಕ ಸಮಸ್ಯೆಗಳಿಂದ ಮುಕ್ತವಾಗಿದ್ದು, ಸಮೀಕ್ಷೆದಾರರು ಅಚ್ಚುಕಟ್ಟಾಗಿ ಕಾರ್ಯನಿರ್ವಹಿಸಿ ಮುಧೋಳವನ್ನು ಪ್ರಥಮ ಸ್ಥಾನಕ್ಕೆ ತಲುಪಿಸುರುವುದಕ್ಕೆ ಅವರು ಎಲ್ಲ ಅಧಿಕಾರಿಗಳಿಗೆ ಹಾಗೂ ಗಣತಿದಾರರ ಕಾರ್ಯಕ್ಕೆ ಶ್ಲಾಘನೆ ವ್ಯಕ್ತಪಡಿಸಿದ್ದಾರೆ.

# ಹಿರಿಯ ನಾಗರಿಕರಿಗೆ ಕಾನೂನು ಅರಿವು ನೆರವು ಕಾರ್ಯಕ್ರಮ




**ಹಾವೇರಿ:** ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಮಂತ್ರಾಲಯ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಣೇಬೆನ್ನೂರು ತಾಲೂಕು ಆಡಳಿತ, ಹಿರಿಯ ನಾಗರಿಕರ ಸ್ವಯಂ ಸೇವಾ ಸಂಸ್ಥೆಗಳು ಹಾಗೂ ರಾಣೇಬೆನ್ನೂರು ನಿವೃತ್ತ ನೌಕರರ ಸಂಘದ ಸಹಯೋಗದಲ್ಲಿ ಹಿರಿಯ ನಾಗರಿಕರಿಗೆ ರಾಜ್ಯ ಕ್ರಿಯಾ ಯೋಜನೆ ಕುರಿತು ಕಾನೂನು ಅರಿವು ನೆರವು ಕಾರ್ಯಕ್ರಮ ಬುಧವಾರ ರಾಣೇಬೆನ್ನೂರು ನಗರದ ನಿವೃತ್ತ ಸಮುದಾಯ ಭವನದಲ್ಲಿ ಜರುಗಿತು.

ಕಾರ್ಯಕ್ರಮದ ಉದ್ಘಾಟನೆ ನೆರವೇರಿಸಿದ 1ನೇ ಹೆಚ್ಚುವರಿ ದಿವಾಣಿ ನ್ಯಾಯಾಧೀಶರು ಹಾಗೂ ತಾಲೂಕು ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಮೇಘಶ್ರೀ ಅವರು, ಹಿರಿಯ ನಾಗರಿಕರ ಸಂರಕ್ಷಣಾ ಕಾಯ್ದೆ ಕುರಿತು ಮಾಹಿತಿ ನೀಡಿದರು ಹಾಗೂ ಕಾನೂನಿನ ಸದುಪಯೋಗ ಪಡೆದುಕೊಳ್ಳಬೇಕು ಎಂದು ಸಲಹೆ ನೀಡಿದರು.

ಡಾ.ನೇತ್ರಾ ಹಾಗೂ ಡಾ.ವಿನೋದಾ ಎಸ್. ಅವರು ಹಿರಿಯ ನಾಗರಿಕರಲ್ಲಿ ಕಂಡುಬರುವ ವಯೋಸಹಜ ಕಾಯಿಲೆ ಮತ್ತು ಚಿಕಿತ್ಸೆ ಬಗ್ಗೆ ಮಾಹಿತಿ ನೀಡಿದರು. ರಾಣೇಬೆನ್ನೂರು ಸಿಪಿಐ ವೆಂಕಟೇಶ ಎನ್. ಅವರು ಸೈಬರ್ ಕ್ರೈಂ, ಡಿಜಿಟಲ್ ಅರೆಸ್ಟ್ ಹಾಗೂ ಮುಂಜಾಗ್ರತಾ ಕ್ರಮಗಳ ಬಗ್ಗೆ ವಿವರವಾದ ಮಾಹಿತಿ ನೀಡಿದರು. ಜಿಲ್ಲಾ ವಿಕಲಚೇತನರ ಕಲ್ಯಾಣಾಧಿಕಾರಿ ಆಶು ನದಾಫ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಬಿ.ಎಚ್.ಬುರಡಿಕಟ್ಟಿ, ಹೊನ್ನಪ್ಪ ಎಚ್ ತಿಮ್ಮೇನಹಳ್ಳಿ, ಸುರೇಶ ಎನ್.ದ್ಯಾವಕ್ಕಳವರ, ವಿ.ಎಂ.ಕರ್ಜಗಿ, ಎನ್.ಎಸ್.ಪಾಟೀಲ, ಎಸ್.ಕೆ.ನೇಸ್ವಿ ಇತರರು ಉಪಸ್ಥಿತರಿದ್ದರು. ನಿವೃತ್ತ ನೌಕರರ ಸಂಘದ ಉಪಾಧ್ಯಕ್ಷ ಎಂ.ಬಿ.ಬೆನಕಣ್ಣನವರ ಸ್ವಾಗತಿಸಿದರು.



# ವಿದ್ಯುತ್ ಲೈನ್ ಹರಿದು ಮೃತ ಪಟ್ಟಿದ್ದ ಕುಟುಂಬಕ್ಕೆ ನೆರವು

**ಕಾರವಾರ:** ಹೊನ್ನಾವರ ತಾಲೂಕಿನ ಕಾಸರಕೋಡ ಪಂಚಾಯತ ಬಟ್ಟೆ ವಿನಾಯಕಕೇರಿಯಲ್ಲಿ ಮನೆಯ ಬಳಿಯಿಂದ ಹಾದು ಹೋಗಿದ್ದ ವಿದ್ಯುತ್ ಲೈನ್ ಹರಿದು ಬಿದ್ದ ಪರಿಣಾಮ ಸಂತೋಷ ಗೌಡ ಎನ್ನುವವರು ಮೃತಪಟ್ಟಿದ್ದು ಅವರ ರಕ್ಷಣೆಗೆಂದು ಹೋದ ಪತ್ನಿಗೂ ವಿದ್ಯುತ್ ತಗುಲಿ ಇಬ್ಬರು ದಾರುಣವಾಗಿ ಮೃತಪಟ್ಟ ಘಟನೆಗೆ ಸಂಭಂದ ಅವರ ಮನೆಗೆ ಭೇಟಿ ನೀಡಿ ಕುಟುಂಬಸ್ಥರನ್ನು ಭೇಟಿ ಮಾಡಿ ಮಕ್ಕಳ ಆರೋಗ್ಯ ವಿಚಾರಿಸಿದ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಮಂಕಾಳ ವೈದ್ಯ ಅವರು, ಅಪಘಾತದಲ್ಲಿ ಮೃತ ಪಟ್ಟ ಕುಟುಂಬದವರಿಗೆ ಸರಕಾರದಿಂದ ರೂ. 10 ಲಕ್ಷ ರೂಪಾಯಿಯ ಪರಿಹಾರದ ಚೆಕ್‌ನ್ನು ಹಸ್ತಾಂತರಿಸಿ, ಮಕ್ಕಳ ವಿದ್ಯಾಭ್ಯಾಸಕ್ಕಾಗಿ ವಯಕ್ತಿಕ ರೂ.5 ಲಕ್ಷ ರೂಪಾಯಿ ಸಹಾಯ ನೀಡುವುದರ ಜೊತೆಗೆ ಮಕ್ಕಳಿಗೆ ಉದ್ಯೋಗ ನೀಡುವ ಭರವಸೆ ನೀಡಿದರು.

# ವಿವಿಧ ಜಯಂತಿಗಳ ಪೂರ್ವಭಾವಿ ಸಭೆ

**ಧಾರವಾಡ:** ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ನವೆಂಬರ್ 8 ರಂದು ಬೆಳಿಗ್ಗೆ 11 ಗಂಟೆಗೆ ಶ್ರೀ ಕನಕದಾಸರ ಜಯಂತಿ, ನವೆಂಬರ್ 11 ರಂದು ಬೆಳಿಗ್ಗೆ 11 ಗಂಟೆಗೆ ವೀರವನಿತೆ ಒನಕೆ ಓಬವ್ವ ಜಯಂತಿಯನ್ನು ಕರ್ನಾಟಕ ಕುಲಪುರೋಹಿತ ಆಲೂರು ವೆಂಕಟರಾವ್ ಸಾಂಸ್ಕೃತಿಕ ಭವನದಲ್ಲಿ ಆಯೋಜಿಸಲಾಗುವುದು ಎಂದು ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ. ಅವರು ಹೇಳಿದರು.

ಅವರು ಗುರುವಾರ ಸಂಜೆ ಜಿಲ್ಲಾಧಿಕಾರಿಗಳ ಕಚೇರಿಯ ನೂತನ ಸಭಾಭವನದಲ್ಲಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಜಯಂತಿ ಕಾರ್ಯಕ್ರಮವನ್ನು ನಾವೆಲ್ಲರೂ ವಿಜೃಂಭಣೆಯಿಂದ ಪ್ರತಿವರ್ಷದಂತೆ ಆಚರಿಸೋಣ ಎಂದು ತಿಳಿಸಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕುಮಾರ ಬೆಕ್ಕೇರಿ ಅವರು ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು. ಸಮಾಜದ ಹಿರಿಯ ಮುಖಂಡರು ಹಾಗೂ ಸಾರ್ವಜನಿಕರು ಸಭೆಯಲ್ಲಿ ಉಪಸ್ಥಿತರಿದ್ದರು.



ಯರಗಟ್ಟಿ: ಸ್ಥಳೀಯ ತಿರಂಗಾ ಕರಾಟೆ ತರಬೇತಿ ಶಾಲೆಯ ಮಕ್ಕಳು ಹುಬ್ಬಳ್ಳಿಯಲ್ಲಿ ನಡೆದ ರಾಜ್ಯ ಮಟ್ಟದ ಕರಾಟೆ ಸ್ಪರ್ಧೆಯಲ್ಲಿ ಅಮೋಘ ಸಾಧನೆ ಮಾಡುವ ಮೂಲಕ ಎಲ್ಲರ ಮನೆ ಮಾತಾಗಿದ್ದಾರೆ.ಕರಾಟೆ ಮಾಸ್ಟರ್, ಸುಹಾಸ ವಕ್ಕುಂದ, ದೇಮು ನಾಯ್ಕರ ಮಾರ್ಗದರ್ಶನದಲ್ಲಿ 15 ವಿದ್ಯಾರ್ಥಿಗಳು ಕರಾಟೆ ಸ್ಪರ್ಧೆಯಲ್ಲಿ ಭಾಗವಹಿಸಿ 11 ಬಂಗಾರದ ಪದಕ 7 ಬೆಳ್ಳಿ, 9 ಕಂಚಿನ ಪದಕ ಪಡೆದು ಪಟ್ಟಣದ ಕೀರ್ತಿ ಹೆಚ್ಚಿಸಿದ್ದಾರೆ.

# ಪ್ರವಾಸಿ ತಾಣಗಳ ಅಭಿವೃದ್ಧಿ ಕಾಮಗಾರಿ ಯೋಜನಾ ವರದಿಗೆ ಸೂಚನೆ

**ವಿಜಯಪುರ:** ನಗರದ ಐತಿಹಾಸಿಕ ಆನಂದ ಮಹಲ್ ಆವರಣದಲ್ಲಿ ಪಾರ್ಕಿಂಗ ವ್ಯವಸ್ಥೆ, ಪುಡಕೋರ್ಟ, ಕರಕುಶಲ ಮಳಿಗೆ, ಲ್ಯಾಂಡ ಸ್ಕೇಪಿಂಗ, ಲೈಟಿಂಗ ವ್ಯವಸ್ಥೆ, ಕಂಪೌಂಡ್ ನಿರ್ಮಾಣ, ಸಿಸಿ ಟಿವಿ ಸೇರಿದಂತೆ ಪ್ರವಾಸಿ ಮೂಲಭೂತ ಸೌಲಭ್ಯ ಕಲ್ಪಿಸುವ ಕಾಮಗಾರಿಗಳನ್ನು ಕೈಗೊಳ್ಳಲು ಸೂಕ್ತ ಯೋಜನಾ ವರದಿ ತಯಾರಿಸಲು ಜಿಲ್ಲಾಧಿಕಾರಿ ಡಾ.ಆನಂದ ಕೆ. ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

2025-26 ನೇ ಸಾಲಿನ ಆಯವ್ಯಯ ಘೋಷಣೆಯಲ್ಲಿ ರಾಜ್ಯದ ಆಯ್ದ 10 ಜಿಲ್ಲೆಗಳಲ್ಲಿನ ಪ್ರವಾಸಿ ತಾಣಗಳನ್ನು ಅಭಿವೃದ್ಧಿ ಪಡಿಸುವ ಉದ್ದೇಶದಿಂದ ವಿಜಯಪುರ ನಗರದ ಆನಂದ ಮಹಲ್ ಆವರಣವನ್ನು ಸಮಗ್ರವಾಗಿ ಅಭಿವೃದ್ಧಿ ಪಡಿಸಲು ರೂ.5.00 ಕೋಟಿಗಳ ವೆಚ್ಚದಲ್ಲಿ ಕಾಮಗಾರಿಯನ್ನು ಕೈಗೊಳ್ಳಲು ಘೋಷಿಸಿರುವ ಹಿನ್ನಲೆಯಲ್ಲಿ ಅ.30ರ ಗುರುವಾರ ಬೆಳಿಗ್ಗೆ ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಲಕ್ಷ್ಮಣ ನಿಂಬರಗಿ ಅವರೊಂದಿಗೆ ಸ್ಥಳಕ್ಕೆ ಭೇಟಿ ನೀಡಿದ ಜಿಲ್ಲಾಧಿಕಾರಿಗಳು ಸದರಿ ಕಟ್ಟಡದಲ್ಲಿ ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ ವತಿಯಿಂದ ಸರ್ಕಾರಿ ವಸ್ತು ಸಂಗ್ರಹಾಲಯ ನಿರ್ಮಿಸಲು ಅನುಮೋದನೆ



ನೀಡಲಾಗಿರುವ ಕಾಮಗಾರಿಗಳ ಕುರಿತು ಚರ್ಚಿಸಿ, ಈಗಾಗಲೇ ಪ್ರವಾಸೋದ್ಯಮ ಇಲಾಖೆಯ ಅನುದಾನದಲ್ಲಿ ರೂ.5.00 ಕೋಟಿ ವೆಚ್ಚದಲ್ಲಿ ಪಾರಂಪರಿಕ ಆನಂದ ಮಹಲ್ ಕಟ್ಟಡವನ್ನು ಸಂರಕ್ಷಣೆ ಕಾಮಗಾರಿಯನ್ನು ಕೈಗೊಂಡು ಪೂರ್ಣಗೊಳಿಸಲಾಗಿದ್ದು, ಪಾರ್ಕಿಂಗ್, ಗಾರ್ಡನ ಅಭಿವೃದ್ಧಿ ಪೂಡಕೋರ್ಟ ಜಿಲ್ಲಾಧಿಕಾರಿಗಳ ಕಛೇರಿ ಆವರಣದಲ್ಲಿ ಲ್ಯಾಂಡಸ್ಕೇಪಿಂಗ್, ರಸ್ತೆಬದಿ ಸೌಲಭ್ಯಗಳನ್ನು ಪಾದಚಾರಿ ಮಾರ್ಗಗಳನ್ನು ಅಭಿವೃದ್ಧಿ ಪಡಿಸಲು ಸೂಚಿಸಲಾಯಿತು.

ನಂತರ ಆನಂದ ಮಹಲ ಆವರಣ, ಗಗನ ಮಹಲ, ಮೆಕ್ಕಾ ಮಸೀದ ಹತ್ತಿರ ಇರುವ ಗಾರ್ಡನ ಪ್ರದೇಶ, ಕೋಟೆಗೋಡೆ ಆವರಣ, ಜಿಲ್ಲಾಧಿಕಾರಿಗಳ ಕಛೇರಿ ಆವರಣ, ಸಾತ್ ಮಂಜಿಲ್ ಹಾಗೂ ಇನ್ನಿತರೆ ಪ್ರದೇಶಗಳಿಗೆ ಭೇಟಿ ನೀಡಿ ಸಮಗ್ರ ಯೋಜನಾ ವರದಿಯನ್ನು ತಯಾರಿಸಲು ಸ್ಥಳ ಪರಿಶೀಲನೆ ನಡೆಸಲಾಯಿತು. ಪ್ರವಾಸೋದ್ಯಮ ಇಲಾಖೆ ಉಪನಿರ್ದೇಶಕ ಅರವಿಂದ ಹೂಗಾರ ಜಿಲ್ಲಾಧಿಕಾರಿಗಳಿಗೆ ಮಾಹಿತಿ ನೀಡಿದರು. ಜಿಲ್ಲಾ ಪ್ರವಾಸೋದ್ಯಮ ಸಮಾಲೋಚಕರಾದ ಅನಿಲಕುಮಾರ. ರಾ.ಬಣಜಿಗೇರ ತಯಾರಿಸಿರುವ ಪ್ರಾತ್ಯಕ್ಷತೆಯನ್ನು ಪ್ರಸ್ತುತ ಪಡಿಸಿದರು. ಈ ಸಂದರ್ಭದಲ್ಲಿ ಉಪ ವಿಭಾಗಾಧಿಕಾರಿ ಗುರುನಾಥ ದಡ್ಡೆ, ಪಾಲಿಕೆ ಆಯುಕ್ತ ವಿಜಯ ಮೆಕ್ಕಳಕಿ, ನಗರಾಭಿವೃದ್ಧಿ ಪ್ರಾಧಿಕಾರದ ಆಯುಕ್ತರಾದ ರಾಜಶೇಖರ ಡಂಬಳ, ಭಾರತೀಯ ಪುರಾತತ್ವ ಸರ್ವೇಕ್ಷಣಾ ಇಲಾಖೆಯ ಲಾವರೆನ್ಸ್ ಸಿ.ಎ., ವಿಜಯಪುರ ತಹಶೀಲ್ದಾರ ಪ್ರಶಾಂತ ಚನಗೊಂಡ, ಹೇರಿಟೇಜ್ ತಜ್ಞರಾದ ಪೀಟರ್ ಅಲೆಕ್ಸಾಂಡರ, ಅಮೀನ್ ಹುಲ್ಲೂರ,ವಿವಿಧ ಅಧಿಕಾರಿಗಳು ಉಪಸ್ಥಿತರಿದ್ದರು.

### ಪುರಸಭೆ ಅಧ್ಯಕ್ಷೆ ಜಗದೇವಿ ಗುಂಡಳ್ಳಿ ಅಧ್ಯಕ್ಷತೆಯಲ್ಲಿ ಜರುಗಿದ ಸಾಮಾನ್ಯ ಸಭೆ

# ಗೊಬ್ಬರ ಮಾರಾಟಕ್ಕೆ ಠರಾವು ಪಾಸ್

**ಬಸವನಬಾಗೇವಾಡಿ:** ಪಟ್ಟಣದ ಪುರಸಭೆ ಸಭಾಂಗಣದಲ್ಲಿ ಪುರಸಭೆ ಅಧ್ಯಕ್ಷೆ ಜಗದೇವಿ ಗುಂಡಳ್ಳಿ ಅಧ್ಯಕ್ಷತೆಯಲ್ಲಿ ಗುರುವಾರ ಜರುಗಿದ ಸಾಮಾನ್ಯ ಸಭೆಯಲ್ಲಿ ಪುರಸಭೆ ವ್ಯಾಪ್ತಿಯಲ್ಲಿ ಪ್ರತಿದಿನ ಮನೆ-ಮನೆಯಿಂದ ಸಂಗ್ರಹವಾಗುವ ಹಸಿ ತ್ಯಾಜ್ಯವನ್ನು ಇವಣಗಿ ರಸ್ತೆಯಲ್ಲಿರುವ ಘನತ್ಯಾಜ್ಯ ವಿಲೇವಾರಿ ಘಟಕದಲ್ಲಿ ಸಂಗ್ರಹಿಸಿರುವ ಎರೆಹುಳ ಗೊಬ್ಬರ ಪ್ರತಿ ಕೆಜಿಗೆ ರೂ. 5, ವಿಂಡ್ರೋಗೊಬ್ಬರ ಒಂದು ಟ್ಯಾಕ್ಟರ್ ಗೆ 1500 ರೂ.,ಟ್ರಮೇಲ್ ಮಷಿನನಿಂದ ಉತ್ಪತ್ತಿಯಾಗುವ ಗೊಬ್ಬರ ಒಂದು ಟ್ಯಾಕ್ಟರ್ ಗೆ 1000 ರೂ. ನಿಗದಿ ಮಾಡಿ ಹೆಚ್ಚಿನ ಬೇಡಿಕೆ ಬಂದರೆ ದರವನ್ನು ಹೆಚ್ಚಿಸುವುದು. ಕಡಿಮೆ ಬೇಡಿಕೆ ಬಂದರೆ ದರವನ್ನು ಕಡಿತಗೊಳಿಸುವು ಕುರಿತಂತೆ ಸರ್ವ ಸದಸ್ಯರ ಸರ್ವಾನುಮತದಿಂದ ನಿರ್ಣಯ ಕೈಗೊಳ್ಳಲಾಯಿತು.

ಸಭೆಯಲ್ಲಿ ಪುರಸಭೆ ವ್ಯಾಪ್ತಿಯ 23 ವಾರ್ಡಗಳಲ್ಲಿ ಸಮರ್ಪಕ ನೀರು ಸರಬರಾಜು ನಿರ್ವಹಣೆ ಕುರಿತು ಚರ್ಚೆ ನಡೆದಾಗ ಪುರಸಭೆ ಉಪಾಧ್ಯಕ್ಷ ಅಶೋಕ ಹಾರಿವಾಳ ಅವರು, ಪಟ್ಟಣದಲ್ಲಿ ಎರಡೆರಡು ವಾರ್ಡಗಳಿಗೆ ಒಂದೇ ಬಾರಿ ನೀರು ಬಿಡುತ್ತಿರುವುದರಿಂದ ಸಮರ್ಪಕವಾಗಿ ನೀರು ಸರಬರಾಜು ಆಗುತ್ತಿಲ್ಲ. ಪಟ್ಟಣದ ಎಲ್ಲ ವಾರ್ಡಗಳಿಗೆ ಸಮರ್ಪಕವಾಗಿ ನೀರು ಸರಬರಾಜು ಆಗುವಂತೆ ಅಧಿಕಾರಿಗಳು ಕ್ರಮ ವಹಿಸಬೇಕೆಂದ ಅವರು, ಕುಡಿಯುವ



ನೀರು ನಿರ್ವಹಣೆಗಾಗಿ ಪ್ರತಿ ತಿಂಗಳು 5 ಲಕ್ಷ 75 ಸಾವಿರ ರೂಪಾಯಿಗಳನ್ನು ಜಲಮಂಡಳಿಗೆ ನೀಡಲಾಗುತ್ತಿದೆ. ನೀರು ಸರಬರಾಜು ಸಿಬ್ಬಂದಿಗಳಿಗೆ ಪುರಸಭೆಯಿಂದ ಸಂಬಳ ನೀಡಲಾಗುತ್ತಿದೆ. ಇದು ಪುರಸಭೆಗೆ ಹೊರೆಯಾಗುತ್ತಿದೆ. ಸಂಪೂರ್ಣ ನಿರ್ವಹಣೆಯನ್ನು ಜಲಮಂಡಳಿಯು ನಿಭಾಯಿಸುವಂತಾಗಬೇಕೆಂದರು.

ಮುಖ್ಯಾಧಿಕಾರಿ ವಿದ್ಯಾಧರ ಕಲಾದಗಿ ಮಾತನಾಡಿ, ಜಲ ಮಂಡಳಿಯ ಅಭಿಯಂತರರನ್ನು ಸಂಪರ್ಕಿಸಿ ಇದರ ಕುರಿತು ಪರಿಶೀಲಿಸಿ ಮುಂದಿನ ಕ್ರಮ ಕೈಗೊಳ್ಳಲಾಗುವದು ಎಂದರು.

ಪಟ್ಟಣದ ವಿಠ್ಠಲ ಮಂದಿರದ ಮುಂಭಾಗದಲ್ಲಿ ಶಿವಾಜಿ ವೃತ್ತಕ್ಕಾಗಿ ಕಳೆದ ಸಭೆಯಲ್ಲಿ ಠರಾವ ಪಾಸ್ ಮಾಡಲಾಗಿದೆ. ಸಾರ್ವಜನಿಕರಿಂದ ಅಕ್ಷೇಪಣೆ ಪಡೆದು ಮುಂದಿನ ಪ್ರೋಸಿಜರ್ ನಡೆಸಿ ಎಂದು ಪುರಸಭೆ ಅಧ್ಯಕ್ಷೆ ಜಗದೇವಿ ಗುಂಡಳ್ಳಿ ಅಧಿಕಾರಿಗಳಿಗೆ ಸೂಚಿಸಿದರು.

ಸಭೆಯಲ್ಲಿ ಪಟ್ಟಣದಲ್ಲಿ ವೀರರಾಣಿ ಕಿತ್ತೂರ ಚನ್ನಮ್ಮ ಸಭಾಭವನ ನಿರ್ಮಿಸುವ ಕುರಿತು ಸಭೆಯಲ್ಲಿ ನಿರ್ಣಯ ಕೈಗೊಳ್ಳಲಾಯಿತು. ವಾರ್ಡ್ ನಂ. 19 ರ ಹರಳಯ್ಯ ಕಾಲೋನಿ, ಬನ್ನಿ ಮಹಾಕಾಳಿ ಸಮುದಾಯ ಭವನ ನಿರ್ಮಾಣಕ್ಕೆ ಜಾಗೆ ಮಂಜೂರಿಸುವ ಕುರಿತು, ಮಹರ್ಷಿ ವಾಲ್ಮೀಕಿ ವೃತ್ತ ನಾಮಕರಣ ಮಾಡಲು ಪ್ರಸ್ತಾವನೆ ಸಲ್ಲಿಸುವದು, ಸೋಮವಂಶ ಆರ್ಯ ಕ್ಷತ್ರೀಯ ಸಮಾಜ ಸಮುದಾಯ ಭವನ ನಿರ್ಮಾಣಕ್ಕೆ ಜಾಗೆ ಮಂಜೂರಿಸುವ ಕುರಿತು, ಪುರಸಭೆಯ ಬಸವ ಭವನ ಸಮುದಾಯ ಭವನಕ್ಕೆ ಬಣ್ಣ ಮಾಡುವದು, ಸೋಲಾರ ವಿದ್ಯುತ್ ಅಳವಡಿಸುವ ಕುರಿತು ಚರ್ಚಿಸಲಾಯಿತು. ಜುಲೈ,ಅಗಷ್ಟ, ಸೆಪ್ಟೆಂಬರ್ ತಿಂಗಳ ಜಮಾ-ಖರ್ಚು ಓದಿ ದೃಢೀಕರಿಸಲಾಯಿತು.

ಸಭೆಯಲ್ಲಿ ಸದಸ್ಯರಾದ ನೀಲಪ್ಪ ನಾಯಕ, ರಾಜು ರಾಠೋಡ, ಅನ್ನಪೂರ್ಣ ಕಲ್ಯಾಣಿ, ಗೀತಾ ರಾಠೋಡ, ವಿಜಯ ನಾಯಕ, ಲಕ್ಷ್ಮೀಬಾಯಿ ಬೆಲ್ಲದ, ರಜಾಕಬಿ ಬಮ್ಮನಳ್ಳಿ, ದೇವೇಂದ್ರ ನಾಯಕ, ರವಿ ನಾಯ್ಕೋಡಿ, ನಾಗಮ್ಮ ಗುಂಡಿ, ಪುರಸಭೆ ವ್ಯವಸ್ಥಾಪಕ ಸುರೇಶ ಬಾಗೇವಾಡಿ ಸೇರಿದಂತೆ ಪುರಸಭೆ ಅಧಿಕಾರಿಗಳು,ಅಭಿಯಂತರರು ಇದ್ದರು.

# ಹಿಂಗಾರು ಹಂಗಾಮಿನ ಬೆಳೆ ಸ್ಪರ್ಧೆಗೆ ಅರ್ಜಿ ಆಹ್ವಾನ

**ಕೊಪ್ಪಳ:** ಕೃಷಿ ಇಲಾಖೆಯಿಂದ 2025-26ನೇ ಸಾಲಿನ ಕೃಷಿ ಪ್ರಶಸ್ತಿಯಡಿ ಹಿಂಗಾರು ಹಂಗಾಮಿನ ಬೆಳೆ ಸ್ಪರ್ಧೆಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. 2025-26ನೇ ಸಾಲಿನ ಕೃಷಿ ಪ್ರಶಸ್ತಿ ಕಾರ್ಯಕ್ರಮವನ್ನು ಆನ್‌ಲೈನ್ ಮೂಲಕ ಅನುಷ್ಠಾನಗೊಳಿಸಬೇಕಾಗಿರುವ ನಿಟ್ಟಿನಲ್ಲಿ ಕೃಷಿ ಇಲಾಖೆಯ ಕೆ-ಕಿಸಾನ ಪೋರ್ಟಲ್‌ನಲ್ಲಿ ಸಿಟಿಜನ್ ಲಾಗಿನ್ ಅಥವಾ ಆರ್.ಎಸ್.ಕೆ ಲಾಗಿನ್ ಮೂಲಕ ಸಂಬಂಧಿಸಿದ ರೈತ ಸಂಪರ್ಕ ಕೇಂದ್ರ, ಸಾರ್ವಜನಿಕ ಕೇಂದ್ರಗಳಲ್ಲಿ ಸ್ವತಃ ಆಸಕ್ತ ರೈತ ಮತ್ತು ರೈತ ಮಹಿಳೆಯರು ಪ್ರತ್ಯೇಕವಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಸಲಾಗಿರುತ್ತದೆ.

ಬೆಳೆ ಸ್ಪರ್ಧೆಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ನವೆಂಬರ್ 29 ಅಂತಿಮ ದಿನಾಂಕವಾಗಿದೆ. ಪ್ರಸಕ್ತ ಸಾಲಿನ ಹಿಂಗಾರು ಹಂಗಾಮಿನ ಬಿತ್ತನೆ ಕಾರ್ಯವು ಈಗಾಗಲೇ ಪ್ರಾರಂಭವಾಗಿದ್ದು, ಆಸಕ್ತ ರೈತ ಮತ್ತು ರೈತ ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ.

ಕೃಷಿ ಪ್ರಶಸ್ತಿ ಮಾರ್ಗಸೂಚಿಯ ಮಾನದಂಡಗಳ ಪ್ರಕಾರ ರಾಜ್ಯ, ಜಿಲ್ಲಾ, ತಾಲ್ಲೂಕು ಮಟ್ಟದ ಬೆಳೆ ಸ್ಪರ್ಧೆಗೆ ಅರ್ಹರಾಗಲು ಪುರುಷರ ವಿಭಾಗದಲ್ಲಿ ಕನಿಷ್ಟ 15 ಮತ್ತು ಮಹಿಳೆಯರ ವಿಭಾಗದಲ್ಲಿ ಕನಿಷ್ಟ 7 ಅರ್ಜಿಗಳ ನೋಂದಣಿ ಕಡ್ಡಾಯವಾಗಿರುತ್ತದೆ. ಈ ಅವಕಾಶವನ್ನು ಜಿಲ್ಲೆಯ ಎಲ್ಲಾ ರೈತರು ಸದುಪಯೋಗ ಪಡಿಸಿಕೊಳ್ಳಬೇಕು. ಕೃಷಿ ಪ್ರಶಸ್ತಿ ಯೋಜನೆಯಡಿ ರಾಜ್ಯ, ಜಿಲ್ಲಾ, ತಾಲ್ಲೂಕು ಮಟ್ಟದ ಬೆಳೆ ಸ್ಪರ್ಧೆಗೆ ಮಳೆಯಾಶ್ರಿತ ಕಡಲೆ ಮತ್ತು ಜೋಳವನ್ನು ಹಿಂಗಾರು ಹಂಗಾಮಿನ ಬೆಳೆಗಳಾಗಿ ಆಯ್ಕೆ ಮಾಡಲಾಗಿದೆ ಎಂದು ಕೊಪ್ಪಳ ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅತಿಥಿ ಶಿಕ್ಷಕ ಹುದ್ದೆಗೆ ಅರ್ಜಿ ಆಹ್ವಾನ

**ಕೊಪ್ಪಳ:** ಕೊಪ್ಪಳ ತಾಲ್ಲೂಕು ಕವಲೂರಿನ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಯಲ್ಲಿ 2025-26ನೇ ಸಾಲಿನ ಶೈಕ್ಷಣಿಕ ವರ್ಷದಲ್ಲಿ ಖಾಲಿ ಇರುವ ಗಣಿತ ವಿಷಯ ಶಿಕ್ಷಕರ ಹುದ್ದೆಗೆ ಅತಿಥಿ ಶಿಕ್ಷಕರ ನೇಮಕಾತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ. ಅಭ್ಯರ್ಥಿಗಳನ್ನು ಮೆರಿಟ್ ಮತ್ತು ಪಾಠ ಪರಿವೀಕ್ಷಣೆ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲಾಗುವುದು. ಅಭ್ಯರ್ಥಿಗಳು ಎಂ.ಎಸ್‌ಸಿ ಅಥವಾ ಬಿಎಸ್‌ಸಿ, ಬಿಇಡಿ ವಿದ್ಯಾರ್ಹತೆ ಹೊಂದಿರಬೇಕು.

ಅರ್ಜಿ ಸಲ್ಲಿಸಲು ನವೆಂಬರ್ 4 ಕೊನೆಯ ದಿನವಾಗಿದ್ದು, ಅರ್ಜಿಯನ್ನು ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆ, ಕವಲೂರು ವಿಳಾಸಕ್ಕೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಮೊ.ಸಂ. 8904756089 ಗೆ ಸಂಪರ್ಕಿಸಬಹುದು ಎಂದು ಶಾಲೆಯ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಂಪರ್ ಕೊಡುಗೆ ನೀಡಿದ ಚಿಂತಾಮಣಿ ಅಪ್ಲಾಯನ್ಸ್




**ರಬಕವಿ-ಬನಹಟ್ಟಿ:** ದಸರಾ ಹಾಗೂ ದೀಪಾವಳಿ ನಿಮಿತ್ತ ಜವಳಿ ಗ್ರಾಹಕರಿಗೆ ಉತ್ಕೃಷ್ಟವಾದ ವಸ್ತುಗಳೊಂದಿಗೆ ಲಕ್ಕಿ ಡ್ರಾ ಕೂಪನ್ ಯೋಜನೆ ಆಯೋಜಿಸಿದ್ದ ಬಾಗಲಕೋಟೆ ಜಿಲ್ಲೆಯ ಬನಹಟ್ಟಿಯ 'ಚಿಂತಾಮಣಿ ಅಪ್ಲಾಯನ್ಸ್' ಗುರುವಾರ ಸಂಜೆ ಡ್ರಾ ಮಾಡುವ ಮೂಲಕ ಅದೃಷ್ಟಶಾಲಿಗಳಿಗೆ ಟಿವಿ, ಫ್ರಿಜ್, ಕೂಲರ್ ಸೇರಿದಂತೆ ಅನೇಕ ಬಹುಮಾನಗಳನ್ನು ಉಡುಗೊರೆಯಾಗಿ ನೀಡುವಲ್ಲಿ ಯಶಸ್ವಿಯಾದರು.

ಬನಹಟ್ಟಿಯ 'ಚಿಂತಾಮಣಿ ಅಪ್ಲಾಯನ್ಸ್'ನ ಆವರಣದಲ್ಲಿ ಜರುಗಿದ ಅದೃಷ್ಟಶಾಲಿಗಳ ವಿಜೇತ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಕರ್ನಾಟಕ ಹಾಗು ಮಹಾರಾಷ್ಟ್ರ ರಾಜ್ಯಗಳಲ್ಲಿಯೇ ಒಂದೇ ಸೂರಿನಡಿ ಗೃಹೋಪಯೋಗಿ ಅತಿ ದೊಡ್ಡ ಶೋರೂಮ್‌ದಿಂದ ಬ್ರ್ಯಾಂಡೆಡ್ ಸೇರಿದಂತೆ ಅತ್ಯಂತ ಕಡಿಮೆ ಬೆಲೆಯ ಎಲ್ಲ ವರ್ಗಗಳ ಜನರಿಗೂ ಕೈಗೆಟುವ ದರದಲ್ಲಿ ಕಂಪನಿಯಿಂದ ನೇರ ಗ್ರಾಹಕರಿಗಾಗಿ ತಲುಪಿಸುವ ನಿಟ್ಟಿನಲ್ಲಿ ಕಳೆದ 15 ವರ್ಷಗಳಿಂದ ಸೇವೆ ಒದಗಿಸುತ್ತಿದೆಯೆಂದರು.

ರಾಜ್ಯದ ಮೂಲೆ ಮೂಲೆಯಿಂದ ದಸರಾ ಹಾಗು ದೀಪಾವಳಿ ನಿಮಿತ್ತ ಖರೀದಿಸಿದ ಅನೇಕರಿಗೆ ಲಕ್ಕಿ ಡ್ರಾ ಕೂಪನ್ ಮೂಲಕ ಹಲವಾರು ವಸ್ತುಗಳು ಕೈ ಸೇರಿವೆಯೆಂದರು. ಶಂಕರ ಜುಂಜಪ್ಪನವರ, ಪ್ರಭು ಉಮದಿ, ಕಿರಣ ಆಳಗಿ, ಕಾಡು ಭದ್ರನ್ನವರ ಸೇರಿದಂತೆ ಅನೇಕರಿದ್ದರು.

### ಒಟ್ಟು 388 ಕ್ಕೂ ಅಧಿಕ ಅರ್ಜಿಗಳು ಸ್ವೀಕಾರ: ಕೆಲವು ಪ್ರಕರಣಗಳು ಸ್ಥಳದಲ್ಲಿಯೇ ಇತ್ಯರ್ಥ

# ಉಪ ಲೋಕಾಯುಕ್ತರಿಂದ ಸಾರ್ವಜನಿಕ ದೂರುಗಳ ವಿಚಾರಣೆ

**ಕೊಪ್ಪಳ:** ಕೊಪ್ಪಳ ಜಿಲ್ಲೆಯಲ್ಲಿ ಸಾರ್ವಜನಿಕರ ಅಹವಾಲು, ಕುಂದುಕೊರತೆ ದೂರು ವಿಚಾರಣೆ ನಡೆಸಿದ ಗೌರವಾನ್ವಿತ ಉಪಲೋಕಾಯುಕ್ತರಾದ ನ್ಯಾಯಮೂರ್ತಿ ಬಿ.ವೀರಪ್ಪ ಅವರು ಗುರುವಾರ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಪ್ರಕರಣಗಳ ವಿಚಾರಣೆ ನಡೆಸಿದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಡಾ. ಸುರೇಶ ಬಿ. ಇಟ್ನಾಳ, ಗೌರವಾನ್ವಿತ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಕೊಪ್ಪಳ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಚಂದ್ರಶೇಖರ ಸಿ., ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ರಾಮ್ ಎಲ್. ಅರಸಿದ್ದಿ, ಕರ್ನಾಟಕ ಲೋಕಾಯುಕ್ತದ ವಿಚಾರಣೆ ಅಪರ ನಿಬಂಧಕರಾದ ಡಾ. ಕಸನಪ್ಪ ನಾಯ್ಕ, ರಮಾಕಾಂತ್ ಚವ್ಹಾಣ ಹಾಗೂ ಅರವಿಂದ ಎನ್.ವಿ., ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಮಹಾಂತೇಶ್ ಎಸ್. ದರಗದ, ರಾಯಚೂರು ಲೋಕಾಯುಕ್ತ ಪೊಲೀಸ್ ಅಧೀಕ್ಷಕರಾದ ಸತೀಶ್ ಎಸ್. ಚಿಟಗುಬ್ಬಿ, ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ, ಅಪರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಆರ್. ಹೇಮಂತಕುಮಾರ್, ಉಪ ವಿಭಾಗಾಧಿಕಾರಿ ಮಹೇಶ ಮಾಲಗಿತ್ತಿ, ಪ್ರಭಾರಿ ಲೋಕಾಯುಕ್ತ ಡಿವೈಎಸ್ಪಿ ಚಂದ್ರಪ್ಪ ಇ.ಟಿ. ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಯ ಅಧಿಕಾರಿಗಳು ಮತ್ತು ಸಾರ್ವಜನಿಕರು ಉಪಸ್ಥಿತರಿದ್ದರು.



### ಬೆಳಗ್ಗೆಯಿಂದ ರಾತ್ರಿವರೆಗೆ ನಡೆದ ಸುಧೀರ್ಘ ವಿಚಾರಣೆ

ಗುರುವಾರದಂದು ಕೊಪ್ಪಳ ಜಿಲ್ಲೆಯಲ್ಲಿ ಒಟ್ಟು 388 ಕ್ಕೂ ಅಧಿಕ ಅರ್ಜಿಗಳು ಸ್ವೀಕೃತಗೊಂಡವು. ಸಾರ್ವಜನಿಕ ಅಹವಾಲು ಹಾಗೂ ಕುಂದುಕೊರತೆ ದೂರು ಅರ್ಜಿ ಸಲ್ಲಿಸಲು ಜನರಿಗಾಗಿ ಪ್ರತ್ಯೇಕ ಕೌಂಟರಗಳನ್ನು ಸ್ಥಾಪಿಸಲಾಗಿತ್ತು. ಅರ್ಜಿಸಲ್ಲಿಸಲು ಬಂದ ಸಾರ್ವಜನಿಕರಿಗೆ ಕುಡಿಯುವ ನೀರು ಮತ್ತು ಊಟದ ವ್ಯವಸ್ಥೆಯನ್ನು ಮಾಡಲಾಗಿತ್ತು. ಈ ಕಾರ್ಯಕ್ರಮದಲ್ಲಿ ಸ್ವೀಕೃತವಾದ ಸಾರ್ವಜನಿಕರ ಅಹವಾಲು, ಕುಂದುಕೊರತೆ ದೂರು ಅರ್ಜಿಗಳಿಗೆ ಸಂಬಂಧಿಸಿದಂತೆ ದೂರುದಾರರು ಹಾಗೂ ಎದುರುದಾರರ ಸಮ್ಮುಖದಲ್ಲಿ ಉಪ ಲೋಕಾಯುಕ್ತರು ಕಾನೂನು ರಿತ್ಯ ವಿಚಾರಣೆ ನಡೆಸಿದರು. ಬೆಳಗ್ಗೆಯಿಂದ ರಾತ್ರಿವರೆಗೆ ನಡೆದ ಈ ಸುಧೀರ್ಘ ಅವಧಿಯ ವಿಚಾರಣೆಯಲ್ಲಿ ಕೆಲವು ಪ್ರಕರಣಗಳು ಸ್ಥಳದಲ್ಲಿಯೇ ಇತ್ಯರ್ಥಗೊಂಡವು.

**ವಿವಿಧ ಸ್ಥಳಗಳಿಗೆ ಭೇಟಿ:** ಕಾರ್ಯಕ್ರಮಕ್ಕೂ ಮುಂಚೆ ಗುರುವಾರ ಬೆಳಿಗ್ಗೆ ಚಿಕ್ಕಸಿಂಧೋಗಿ ಹತ್ತಿರದಲ್ಲಿ ಕೊಪ್ಪಳ ನಗರಸಭೆ ವತಿಯಿಂದ ನಿರ್ಮಿಸಿರುವ ಎರಡು ಸಾವಿರ ಗುಂಪು ಮನೆಗಳಿಗೆ ಉಪಲೋಕಾಯುಕ್ತರು ಭೇಟಿ ನೀಡಿ, ಪರಿಶೀಲನೆ ನಡೆಸಿದರು. ನಂತರ ನಗರಸಭೆಯ ಘನತ್ಯಾಜ್ಯ ವಿಲೇವಾರಿ ಘಟಕಕ್ಕೆ ಭೇಟಿ ನೀಡಿದರು.

ನಂತರ ಕೊಪ್ಪಳದ ಕೃಷಿ ಉತ್ಪನ್ನ ಮಾರುಕಟ್ಟೆಗೆ ಭೇಟಿ ನೀಡಿ ಪರಿಶೀಲನೆ ನಡೆಸಿ, ಎಪಿಎಂಸಿ ಗೆ ಬರುವ ತೆರಿಗೆ ಹಣದಲ್ಲಿ ರೈತ ಭವನ ನಿರ್ಮಿಸಬೇಕು. ಇದರಿಂದ ಬೆಳೆಗಳ ಮಾರಾಟಕ್ಕೆ ಹಳ್ಳಿಗಳಿಂದ ಬರುವ ರೈತರಿಗೆ ಮತ್ತು ರೈತ ಮಹಿಳೆಯರಿಗೆ ಉಳಿದುಕೊಳ್ಳಲು ವ್ಯವಸ್ಥೆ ಮಾಡಬೇಕು. ಇದರ ಜೊತೆಗೆ ಕುಡಿಯುವ ನೀರು, ಕುಳಿತುಕೊಳ್ಳಲು ಆಸನಗಳ ವ್ಯವಸ್ಥೆ ಮತ್ತು ಶೌಚಾಲಯದ ವ್ಯವಸ್ಥೆಯನ್ನು ಸಹ ಮಾಡಿಕೊಡಬೇಕು. ಎಪಿಎಂಸಿ ಯಲ್ಲಿ ಕೆಲಸ ಮಾಡುವ ಎಲ್ಲಾ ಹಮಾಲರಿಗೆ ಕಡ್ಡಾಯವಾಗಿ ಇನ್ಸೂರೆನ್ಸ್ ಮಾಡಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

# ಭಾಷಣ ಸ್ಪರ್ಧೆ: ಜಿಲ್ಲಾ ಮಟ್ಟಕ್ಕೆ ಆಯ್ಕೆ



**ಕಾರವಾರ:** ಪ್ರಸಕ್ತ ಸಾಲಿನ ಕರ್ನಾಟಕ ರಾಜ್ಯದ ಪ್ರಾಚೀನ ಸ್ಮಾರಕಗಳ ಮೂರ್ತ ಮತ್ತು ಅಮೂರ್ತ ಪರಂಪರೆಯ ಸಂಪತ್ತಿನ ಬಗ್ಗೆ ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸಲು "ಪ್ರಾಚ್ಯಪ್ರಜ್ಞೆ" ಕಾರ್ಯಕ್ರಮದ ಅಂಗವಾಗಿ ಅ.27 ರಂದು ಪ್ರೌಢಶಾಲೆ ವಿದ್ಯಾರ್ಥಿಗಳಿಗೆ ತಾಲೂಕಾ ಮಟ್ಟದ ಸ್ಪರ್ಧೆಯು ಕುಮಟಾ ತಾಲೂಕಿನ ಜನತಾ ವಿದ್ಯಾಲಯ, ಧಾರೇಶ್ವರದಲ್ಲಿ ನಡೆಯಿತು.

ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆ, ಗಂಗೆಕೊಳ್ಳ ಗೋಕರ್ಣದ ವಿದ್ಯಾರ್ಥಿನಿ 'ಪ್ರಾಚ್ಯಪ್ರಜ್ಞೆ-ಮಾನವತೆಯ ಬೆಳಕು' ಎಂಬ ವಿಷಯದ ಕುರಿತು, ಏರ್ಪಡಿಸಿದ ಭಾಷಣ ಸ್ಪರ್ಧೆಯಲ್ಲಿ ಕುಮಾರಿ ಅಂಬಿಕಾ ಪ್ರದೀಪ ನಾಯಕ ಪ್ರಥಮ ಸ್ಥಾನವನ್ನು ಪಡೆದಿರುತ್ತಾರೆ ಹಾಗೂ "ಇಂದಿನ ತಂತ್ರಜ್ಞಾನ ಯುಗದಲ್ಲಿ ಪ್ರಾಚ್ಯಪ್ರಜ್ಞೆಯ ಆವಶ್ಯಕತೆ" ಎಂಬ ವಿಷಯದ ಕುರಿತು ಏರ್ಪಡಿಸಿದ ಪ್ರಬಂಧ ಸ್ಪರ್ಧೆಯಲ್ಲಿ ಮಂಜುಳ ವಿನಾಯಕ ಪಟಗಾರ, ದ್ವಿತೀಯ ಸ್ಥಾನ ಪಡೆದು ಜಿಲ್ಲಾಮಟ್ಟಕ್ಕೆ ಆಯ್ಕೆಗೊಂಡಿರುತ್ತಾರೆ.

2025-26 ನೇ ಸಾಲಿನ "ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ" ಯ ಪ್ರಯುಕ್ತ ಏರ್ಪಡಿಸಿದ ವಸತಿ ಶಾಲೆಗಳ ವಿದ್ಯಾರ್ಥಿಗಳಿಗೆ ಏರ್ಪಡಿಸಿದ 'ನನ್ನ ಮತ ನನ್ನ ಹಕ್ಕು' ಎಂಬ ಭಾಷಣ ಸ್ಪರ್ಧೆಯಲ್ಲಿ ಅಂಬಿಕಾ ಪ್ರದೀಪ ನಾಯಕ ಪ್ರಥಮ ಸ್ಥಾನ ಪಡೆದು ಜಿಲ್ಲಾಮಟ್ಟಕ್ಕೆ ಆಯ್ಕೆಗೊಂಡು ಶಾಲಾ ಕೀರ್ತಿಯನ್ನು ಹೆಚ್ಚಿಸಿರುತ್ತಾಳೆ.

ವಿದ್ಯಾರ್ಥಿನಿಯರ ಯಶಸ್ಸಿಗೆ ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಉಮೇಶ. ವೈ.ಕೆ. ವಸತಿ ಶಾಲೆ ಪ್ರಾಂಶುಪಾಲ ಎನ್. ಆರ್.ನಾಯಕ, ಶಿಕ್ಷಕ-ಶಿಕ್ಷಕೇತರ ಸಿಬ್ಬಂದಿಗಳು ಹಾಗೂ ಪಾಲಕರು ಶುಭ ಹಾರೈಸಿದ್ದಾರೆ.

# ತಂಬಾಕು ಸೇವನೆ ನಿರ್ಮೂಲನೆ ಸರ್ಕಾರದ ಗುರಿ

**ಮುದ್ದೇಬಿಹಾಳ:** ತಂಬಾಕು ಮುಕ್ತ ಭಾರವೆಂಬುದು ತಂಬಾಕು ಸೇವನೆಯನ್ನು ನಿಮೂಲನೆ ಮಾಡುವ ಬಾರತ ಸರ್ಕಾರದ ಗುರಿಯಾಗಿದೆ ಈ ಗುರಿಯನ್ನು ಸಾಧಿಸಲು ತಂಬಾಕು ಸೇವನೆಯ ಹಾನಿಕಾರಕ ಪರಿಣಾಮಗಳ ಭಗ್ಗೆ ಜಾಗೃತಿ ಮೂಡಿಸುವದು ತಂಬಾಕು ಉತ್ಪನ್ನಗಳ ಬಳಕೆ ಉತ್ಪಾದನೆ ಮತ್ತು ಪೂರೈಕೆ ಕಡಿಮೆ ಮಾಡುವದು ರಾಷ್ಟ್ರೀಯ ತಂಬಾಕು ನಿಯಂತ್ರಣ ಕಾರ್ಯಕ್ರಮದ ಗುರಿಯಾಗಿದೆ ಎಂದು ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಎಂ.ಎಸ್. ಗೌಡರ ಅವರು ಹೇಳಿದರು.

ಗುರುವಾರರಂದು ಸ್ಥಳೀಯ ಚಿನ್ಮಯಿ ಜೆಸಿ ಶಾಲೆಯಲ್ಲಿ ಧರ್ಮಸ್ಥಳ ಗ್ರಾಮಾಭಿವೃದ್ದಿ ಯೋಜನೆಯ ವತಿಯಿಂದ ವಿದ್ಯಾರ್ಥಿಗಳಿಗಾಗಿ ಏರ್ಪಡಿಸಲಾದ ಸ್ವಾಥ್ಯ ಸಂಕಲ್ಪ ಕಾರ್ಯಕ್ರಮದಲ್ಲಿ ಉಪನ್ಯಾಸಕರಾಗಿ ಆಗಮಿಸಿ ಮಾತನಾಡುತ್ತಿದ್ದ ಅವರು ತಂಬಾಕು ಭಾರತದ ಎಲ್ಲ ನಾಗರಿಕರ ಆರೋಗ್ಯ ಮತ್ತು ಯೋಗಕ್ಷೇಮಕ್ಕೆ ದೊಡ್ಡ ಅಪಾಯವಾಗಿದೆ ಹೃದಯ ಸಂಭಂದಿತ ಖಾಯಿಲೆಗಳು ಉಸಿರಾಟದ ಕಾಯಿಲೆಗಳು ಮತ್ತು ಕ್ಯಾನ್ಸರ್ ಸೇರಿದಂತೆ ಹೆಚ್ಚಿನ ಸಾಂಕ್ರಾಮಿಕ ಖಾಯಿಲೆಗಳ ಬೆಳವಣಿಗೆಗೆ ಇದು ಸಾಮಾನ್ಯ ಅಪಾಯಕಾರಿ ಅಂಶವಾಗಿದೆ ಎಂದರು

ಬಾರತದಲ್ಲಿ ಎಲ್ಲ ವಯಸ್ಕರಲ್ಲಿ ಶೇ. 10.7 ಧೂಮಪಾನ ಮಾಡುತ್ತಿದ್ದಾರೆ ಎಲ್ಲ ವಯಸ್ಕರಲ್ಲಿ ಶೇ. 21.40 ದೂಮಪಾನವಿಲ್ಲದ ತಂಬಾಕನ್ನು ಬಳಸುತ್ತಿದ್ದಾರೆ ತಂಬಾಕು ಬಳಸುತ್ತಿರುವ ವ್ಯಕ್ತಿಯ ಮೇಲೆ ವ್ಯತಿರಿಕ್ತ ಪರಿಣಾಮ ಬೀರುತ್ತದೆ ಅಲ್ಲದೇ ಪರೋಕ್ಷ ದೂಮಪಾನ ಮೂಲಕ ಸುತ್ತಮುತ್ತಲಿನ ಜನರ ಮೇಲೂ ಪರಿಣಾಮ ಬೀರುತ್ತದೆ ಎಂದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ ಜಿಲ್ಲಾ ಜನಜಾಗೃತಿ ವೇದಿಕೆಯ ಸದಸ್ಯರು ಹಾಗೂ ಚಿನ್ಮಯಿ ಶಾಲಾ ಅಧ್ಯಕ್ಷರಾದ ಡಾ. ವಿರೇಶ ಪಾಟೀಲ ಅವರು ಮಾತನಾಡಿದರು.

ಈ ಕಾರ್ಯಕ್ರಮದಲ್ಲಿ ಇನ್ನೋರ್ವ ಮುಖ್ಯೋಪಾದ್ಯಾಯರಾದ ಸ್ಟೆಲ್ಲಾ ಡಿಸೋಜ, ಧರ್ಮಸ್ಥಳ ಗ್ರಾಮಾಭಿವೃದ್ದಿ ಯೋಜನೆಯ ಸೇವಾ ಪ್ರತಿನಿಧಿ ವಿಜಯಲಕ್ಷ್ಮೀ, ಒಕ್ಕೂಟದ ಅಧ್ಯಕ್ಷರಾದ ಮಂಜುಳಾ ಕೆಸರಟ್ಟಿ, ಶೈಲಜಾ, ವಿದ್ಯಾರ್ಥಿಗಳು ಉಪಸ್ತಿತರಿದ್ದರು.




### ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಚುನಾವಣೆ

# ಜಿಲ್ಲಾ ಘಟಕದ ಪದಾಧಿಕಾರಿಗಳ ಅವಿರೋಧ ಆಯ್ಕೆ



**ಕೊಪ್ಪಳ:** ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ 2025- 28ನೇ ಸಾಲಿನ ಚುನಾವಣೆಯಲ್ಲಿ ಕೊಪ್ಪಳ ಜಿಲ್ಲಾ ಘಟಕದ ಎಲ್ಲಾ ಪದಾಧಿಕಾರಿಗಳು ಅವಿರೋಧವಾಗಿ ಆಯ್ಕೆ ಗೊಂಡಿದ್ದಾರೆ ಎಂದು ಚುನಾವಣಾ ಅಧಿಕಾರಿ ದುರ್ಗಪ್ಪ ತಿಪ್ಪನಾಳ ಪ್ರಕಟಿಸಿದ್ದಾರೆ.

ಕೊಪ್ಪಳ ಜಿಲ್ಲಾ ಘಟಕದ ಅಧ್ಯಕ್ಷ ಸ್ಥಾನಕ್ಕೆ ಹನುಮಂತ ಹಳ್ಳಿಕೇರಿ ಆ ವಿರೋಧ ಆಯ್ಕೆಗೊಂಡರೆ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಯಾಗಿ ನಾಗರಾಜ್ ವೈ ಪುನರ್ ಆಯ್ಕೆಗೊಂಡಿದ್ದಾರೆ. ರಾಜ್ಯ ಕಾರ್ಯಕಾರಣಿ ಸಮಿತಿ ಸದಸ್ಯ ಸ್ಥಾನಕ್ಕೆ ವೀರಣ್ಣ ಕಳ್ಳಿಮನಿ ಅವರು ಅವಿರೋಧ ಆಯ್ಕೆ ಗೊಂಡಿದ್ದಾರೆ.

ಅದರಂತೆ ಇನ್ನುಳಿದ ಸ್ಥಾನಗಳಿಗೆ ಕೂಡ ಆವಿರೋಧ ಆಯ್ಕೆಗೊಂಡಿದ್ದು ಜಿಲ್ಲಾ ಉಪಾಧ್ಯಕ್ಷರಾಗಿ ಕೊಪ್ಪಳ ಕೇಂದ್ರ ಸ್ಥಾನದ ರಾಜು ಬಿ.ಆರ್, ಕಾರಟಗಿಯ ಎಚ್, ಚಾಂದಸಿಂಗ್ ರಜಪೂತ ಮತ್ತು ಗಂಗಾವತಿಯ ಪ್ರಸನ್ನ ದೇಸಾಯಿ ಆಯ್ಕೆಗೊಂಡಿದ್ದಾರೆ.

ಜಿಲ್ಲಾ ಕಾರ್ಯದರ್ಶಿ ಸ್ಥಾನಕ್ಕೆ ಕೊಪ್ಪಳ ಕೇಂದ್ರ ಸ್ಥಾನದ ರುದ್ರಗೌಡ ಪಾಟೀಲ್, ಕುಷ್ಟಗಿಯ ರವೀಂದ್ರ ಬಾಕಳೆ ಮತ್ತು ಗಂಗಾವತಿಯ ವೃಷಬೇಂದ್ರ ಸ್ವಾಮಿ ಹಿರೇಮಠ್ ಮತ್ತು ಖಜಾಂಚಿಯಾಗಿ ಕೊಪ್ಪಳದ ಫಕೀರಪ್ಪ ಗೋಟೂರ ಆಯ್ಕೆಗೊಂಡಿದ್ದಾರೆ. ಉಳಿದಂತೆ ಜಿಲ್ಲಾ ಕಾರ್ಯಕಾರಿ ಸಮಿತಿಯ ಒಟ್ಟು 15 ಸ್ಥಾನದಲ್ಲಿ 13 ಜನ ಸದಸ್ಯರು ಮಾತ್ರ ತಮ್ಮ ಉಮೇದುವಾರಿಕೆ ನಾಮಪತ್ರ ಸಲ್ಲಿಸಿದ್ದಾರೆ.

ಈ ಸಂದರ್ಭದಲ್ಲಿ ಹಿರಿಯ ಪತ್ರಕರ್ತರುಗಳಾದ ಎಂ ಸಾಧಿಕ ಅಲಿ, ಎಚ್.ಎಸ್ ಹರೀಶ್, ಜಿ.ಎಸ್. ಗೋನಾಳ್, ಎನ್. ಎಂ. ದೊಡ್ಡಮನಿ, ಶಿವರಾಜ್ ನುಗದೋಣಿ, ಗಂಗಾವತಿಯ ವೆಂಕಟೇಶ್ ಕುಲಕರ್ಣಿ, ಕೃಷ್ಣ ವಿರಾಪುರ ,ವಿಶ್ವನಾಥ ಬೆಳಗಲ್ಮಠ, ಎಂ.ಜೆ ಶ್ರೀನಿವಾಸ, ಶಿವಪ್ಪ ನಾಯಕ್ ,ನಾಗರಾಜ್ ಇಂಗಳಗಿ, ಕಾರಟಗಿಯ ಸಿದ್ದನಗೌಡ, ಶರಣಪ್ಪ, ಕನಕಗಿರಿಯ ಮಧುಸೂದನ ರೆಡ್ಡಿ, ಸೇರಿದಂತೆ ಅನೇಕರು ಪಾಲ್ಗೊಂಡಿದ್ದು ನೂತನ ಪದಾಧಿಕಾರಿಗಳೆಲ್ಲರಿಗೂ ಸನ್ಮಾನಿಸಿ ಶುಭ ಕೋರಿದರು.

# ಧರಣಿ ನಿರತ ಸಂತ್ರಸ್ಥರಿಗೆ ದುಡಿಮೆಯ ನಷ್ಟ ನೀಡುವಂತೆ ಮನವಿ

**ಬಸವನಬಾಗೇವಾಡಿ:** ತಾಲೂಕಿನ ಕುದರಿಸಾಲವಾಡಗಿ ಗ್ರಾಮದಲ್ಲಿ ಯಾಳವಾರ ಗ್ರಾಮಕ್ಕೆ ಹೋಗುವ ಮುಖ್ಯರಸ್ತೆಯ ಅಭಿವೃದ್ಧಿ ಹಾಗೂ ಅಗಲೀಕರಣ ನೆಪದಲ್ಲಿ ತೆರವು ಗೊಳಿಸಿದ 143 ಕ್ಕೂ ಹೆಚ್ಚು ಕುಟುಂಬಗಳಿಗೆ ಸೂಕ್ತ ಪರಿಹಾರ ಸೇರಿದಂತೆ ವಿವಿಧ ಬೇಡಿಕೆಗಳನ್ನು ಮುಂದಿಟ್ಟುಕೊಂಡು ಮುಖಂಡ ಅಶೋಕಗೌಡ ಪಾಟೀಲ ಅವರ ನೇತೃತ್ವದಲ್ಲಿ ನಡೆಸುತ್ತಿರುವ ಧರಣಿ ಸತ್ಯಾಗ್ರಹ ಗುರುವಾರ ಹದಿನಾರನೇ ದಿನಕ್ಕೆ ಕಾಲಿಟ್ಟಿತ್ತು. ಇಂದು ಧರಣಿಯಲ್ಲಿ ಭಾಗವಹಿಸಿ ಸಂತ್ರಸ್ಥರೆಲ್ಲರೂ ನಿತ್ಯವೂ ಧರಣಿಯಲ್ಲಿ ಭಾಗವಹಿಸುತ್ತಿರುವದರಿಂದಾಗಿ ತಮಗೆ ಆಗುತ್ತಿರುವ ದುಡಿಮೆ ನಷ್ಟವನ್ನು ಸರ್ಕಾರ ನೀಡಬೇಕೆಂದು ಮುಖ್ಯಮಂತ್ರಿಗಳಿಗೆ ಬರೆದ ಮನವಿ ಪತ್ರವನ್ನು ತಹಸೀಲ್ದಾರ ಮೂಲಕ ಸಲ್ಲಿಸಿದರು.

ಅವರು ಸಲ್ಲಿಸಿದ ಮನವಿಯಲ್ಲಿ ಬಸವನ ಬಾಗೇವಾಡಿ ತಾಲೂಕಿನ ಕುದರಿ ಸಾಲವಾಡಗಿ ಗ್ರಾಮದಲ್ಲಿ ಅಗಷ್ಟ 23 ರಂದು ಅನಧಿಕೃತವಾಗಿ, ಅನಾಧಿಕಾರದಿಂದ ಸಾರ್ವಜನಿಕರ ಮನೆಗಳು ಹಾಗೂ ಸಾರ್ವಜನಿಕ ಸ್ಥಳಗಳಲ್ಲಿರುವ ಭವನಗಳು, ಅಂಗನವಾಡಿ ಕೇಂದ್ರ, ಮಹಾನ ರಾಷ್ಟ್ರೀಯ ನಾಯಕರುಗಳ ವೃತ್ತಗಳನ್ನು ಕೆಡವಿ ಊರಿನ ಸಾರ್ವಜನಿಕರ ಬಾಳನ್ನು ಹಾಳುಮಾಡಿ ಅವರಿಗೆ ಬೀದಿಗೆ ಹಾಕಿರುವುದರಿಂದ ಅಲ್ಲಿನ ಸಂತ್ರಸ್ಥರು ಅನಿರ್ಧಿಷ್ಟ ಧರಣಿ ಸತ್ಯಾಗ್ರಹವನ್ನು ಕಳೆದ ಹದಿನೈದು ದಿನಗಳಿಂದ ಆರಂಭಿಸಲಾಗಿದೆ. ಕೂಲಿ ಕಾರ್ಮಿಕರು, ರೈತರು, ಬಡವರು, ಹೆಣ್ಣುಮಕ್ಕಳು ಧರಣಿಯಲ್ಲಿ ನಿತ್ಯವೂ ಭಾಗವಹಿಸಲಾಗುತ್ತಿದೆ. ಪ್ರತಿ ದಿನ ಹೆಣ್ಣುಮಕ್ಕಳಿಗೆ ದಿನಗೂಲಿ ರೂ. 400 ರಿಂದ 600 ರೂ ಇದೆ. ಗಂಡಸರಿಗೆ ರೂ. 600 ರಿಂದ 800 ಇದೆ. ನಾವೆಲ್ಲರೂ ನಿತ್ಯವೂ ಧರಣಿಯಲ್ಲಿ ಭಾಗವಹಿಸುತ್ತಿರುವದರಿಂದಾಗಿ ನಮ್ಮ ನಿತ್ಯ ಜೀವನ ಸಾಗಿಸುವದು ಕಷ್ಟವಾಗಿದೆ.




ಮನೆಯಲ್ಲಿ ಜೀವನೋಪಾಯಕ್ಕಾಗಿ ಸಾಕಿದ ದನ ಕರುಗಳು, ಚಿಕ್ಕ ಚಿಕ್ಕ ಮಕ್ಕಳು ತೊಂದರೆಯಿಂದ ಪರದಾಡುವಂತಾಗಿದೆ. ಭೂಮಿಯಲ್ಲಿ ಬೆಳೆದ ಬೆಳೆಗಳು ನಾಶವಾಗುತ್ತಿವೆ. ಇವೆಲ್ಲ ತೊಂದರೆಗಳನ್ನು ಅನುಭವಿಸಿದ್ದ ಸಂತ್ರಸ್ತರ ನಷ್ಟವನ್ನು ಭರಿಸುವ ಜವಾಬ್ದಾರಿ ಶಾಸಕರದ್ದು ಹಾಗೂ ಸಂಬಂಧಪಟ್ಟ ಅಧಿಕಾರಿಗಳು ಮತ್ತು ಸರ್ಕಾರದ ಜವಾಬ್ದಾರಿ ಇರುತ್ತದೆ. ಪರಿಹಾರವನ್ನು ಪಡೆದುಕೊಳ್ಳಲು ಈ ಮೇಲೆ ಹೇಳಿದ ಎಲ್ಲರ ವಿರುದ್ಧ ದುಡಿಮೆಯ ನಷ್ಟ ಪರಿಹಾರ ಪಡೆದುಕೊಳ್ಳಲು ಸಕ್ಷಮ ನ್ಯಾಯಾಲಯದ ಮೊರೆಹೋಗುವುದು ಅನಿವಾರ್ಯವಾಗುತ್ತದೆ. ಕೂಡಲೇ ಮುಖ್ಯಮಂತ್ರಿಗಳು ಜಿಲ್ಲಾಡಳಿತಕ್ಕೆ ಸೂಕ್ತ ಸಲಹೆ ಸೂಚನೆಗಳನ್ನು ನೀಡಿ ಪರಿಹಾರವನ್ನು ನೀಡಬೇಕೆಂದು ಆಗ್ರಹಿಸಲಾಗಿದೆ.

ಧರಣಿ ಉದ್ದೇಶಿಸಿ ಡಿಎಸ್‌ಎಸ್ ಮುಖಂಡ ಗುರುರಾಜ ಗುಡಿಮನಿ ಮಾತನಾಡಿ, ಧರಣಿ ನಿರತರಿಗೆ ಸಂಬಂಧಪಟ್ಟ ಅಧಿಕಾರಿಗಳಾಗಲಿ, ಶಾಸಕರಾಗಲಿ, ಸರ್ಕಾರವಾಗಲಿ ಯಾವುದೇ ಭರವಸೆ ಕೊಟ್ಟಿರುವುದಿಲ್ಲ. ದೇವರಹಿಪ್ಪರಗಿ ಮತ ಕ್ಷೇತ್ರದ ಶಾಸಕರು ಇಲ್ಲಿಯ ವರೆಗೆ ಪ್ರತಿಭಟನಾ ಸ್ಥಳಕ್ಕೆ ಒಂದು ಬಾರಿ ಮಾತ್ರ ಬಂದು ಹೋಗಿದ್ದಾರೆ. ಸಂತ್ರಸ್ತರಿಗೆ ಅನೂಕೂಲವಾಗುವ ರೀತಿಯಲ್ಲಿ ಲಿಖಿತ ಭರವಸೆಯನ್ನು ಕೊಟ್ಟಿರುವುದಿಲ್ಲ. ಪ್ರತಿಭಟನಾ ನಿರತ ಸಂತ್ರಸ್ತರು ಕಡುಬಡವರಿದ್ದು ರೈತರಿದ್ದು ಕೂಲಿ' ಕಾರ್ಮಿಕರಿದ್ದಾರೆ. ಅವರು ದುಡಿಯದೆ ಅವರ ಉಪಜೀವನ ಸಾಗಿಸಲಾಗುವುದಿಲ್ಲ. ಅಂತಹ ಪರಸ್ಥಿತಿಯಲ್ಲಿ ತಮಗೆ ನ್ಯಾಯಬೇಕೆಂದು ಸ್ಥಳೀಯ ಮಿನಿವಿಧಾನಸೌಧ ಮುಂಭಾಗ ಹದಿನೈದು ದಿನಗಳಿಂದ ಧರಣಿ ಆರಂಭಿಸಿದ್ದಾರೆ. ಸರ್ಕಾರ ಇವರಿಗೆ ನ್ಯಾಯ ಕೊಡದೇ ಹೋದರೆ ನಮ್ಮ ಹೋರಾಟ ತೀವ್ರ ಸ್ವರೂಪ ತಾಳುತ್ತದೆ ಎಂದರು.

ಮುಖಂಡ ಮುತ್ತುರಾಜ ಹಾಲಿಹಾಳ ಮಾತನಾಡಿದರು. ಅರವಿಂದ ಸಜ್ಜನ ಮನವಿ ಪತ್ರ ಓದಿ ಶಿರಸ್ತೇದಾರ ಬಿ.ಆರ್.ಪೋಲೇಶಿ ಅವರಿಗೆ ಸಲ್ಲಿಸಿದರು. ಈ ಸಂದರ್ಭದಲ್ಲಿ ಯಮನೂರಿ ಚಲವಾದಿ, ದವಲಬಿ ಯಲಗಾರ, ಹಸನಸಾಬ ಅತ್ತಾರ, ಸಂಗಪ್ಪ ಕುಂಟೋಜಿ, ಬಸಮ್ಮ ತಮದಡ್ಡಿ, ರೇವಣಸಿದ್ದ ಇಂಗಳಗಿ, ಶರಣಪ್ಪ ಇಂಗಳಗಿ, ಗಂಗಾಬಾಯಿ ಇಂಗಳಗಿ, ಗೌರವ್ವ ಕಳ್ಳಿಮನಿ, ಮುನೇರಾಬೇಗಂ ಅತ್ತಾರ, ಮಮತಾಜ ಹೆಬ್ಬಾಳ, ಮುರ್ತುಜಸಾ ಬಾವೂರ ಸೇರಿದಂತೆ ಇತರರು ಇದ್ದರು.

# ನಾಳೆ ಕಣ್ಣಿನ ಉಚಿತ ತಪಾಸನೆ ಶಿಬಿರ

**ಮುಧೋಳ:** ತಾಲೂಕಿನ ಮುಗಳಖೋಡದಲ್ಲಿ 40 ನೇ ವೇದಾಂತ ಪರಿಷತ್ ಗುರುಪಾದೇಶ್ವರ ಮಹಾಸ್ವಾಮಿಗಳ ಸ್ಮರಣೋತ್ಸವ ಆರಂಭ ಆಗಿದ್ದು, ಇಂಚಲ್‌ದ ಡಾ.ಶಿವಾನಂದ ಭಾರತಿ ಶ್ರೀಗಳು ಸಾನಿಧ್ಯದಲ್ಲಿ ವೀರಭದ್ರ ಶ್ರೀಗಳು, ಪ್ರಣವಾನಂದ ಶ್ರೀಗಳು, ಗುರುಪಾದೇಶ್ವರ ಶ್ರೀಗಳು, ಶಂಕರಾನಂದ ಶ್ರೀಗಳು, ಗುರುನಾಥ ಶಾಸ್ತ್ರಿಗಳ ಉಪಸ್ಥಿತಿಂ, ಮಠದ ಪೀಠಾಧಿಪತಿ ರಾಮಯ್ಯಶ್ರೀಗಳು ಸಮುಖದಲ್ಲಿ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ನ.2 ರವರಿಗೆ ಜರುಗಲಿವೆ.



ಪ್ರತಿ ದಿನ ಸಂಜೆ ಪ್ರವರ್ಚನ ನಡೆಯಲಿವೆ. ನ.1 ರಂದು ಉಚಿತ ಕಣ್ಣಿನ ತಪಾಸಣೆ ಶಿಬಿರ, ಅರಳಿಕಟ್ಟಿ ಫೌಂಡೇಶನದಿಂದ ಉಚಿತ ಇಸಿಜಿ, ಬಿಪಿ ಶುಗರ್ಸ್ ತಪಾಸಣೆ, ಸಾಯಿ ಗ್ರೂಪ್ ಆಫ್‌ದಿಂದ ಸ್ವಯಂ ಪ್ರೇರಿತ ರಕ್ತದಾನ ಶಿಬಿರ ನಡೆಯಲಿವೆ. ನ.2 ರಂದು ರಾಜ್ಯ ಮಟ್ಟದ ಭಜನಾ ಸ್ಪರ್ಧೆಯನ್ನು ಆಯೋಜಿಸಲಾಗಿದೆ. ಎಂದು ಮಠದ ಪೀಠಾಧಿಪತಿ ರಾಮಯ್ಯ ಶ್ರೀಗಳು ತಿಳಿಸಿದ್ದಾರೆ.



## ಸಿಡಿಲು ಬಡಿದು ಮೃತ ಪಟ್ಟಿದ್ದ ಕುಟುಂಬಕ್ಕೆ ನೆರವು

**ಕಾರವಾರ:** ಹೊಟ್ಟೆ ಪಾಡಿಗಾಗಿ ಗೋವಾ ರಾಜ್ಯದಲ್ಲಿ ಕೆಲಸ ಮಾಡುತ್ತಿದ್ದ ವೇಳೆ ಸಿಡಿಲು ಬಡಿದು ಮೃತ ಪಟ್ಟಿದ್ದ ಹೊನ್ನಾವರ ತಾಲೂಕಿನ ಕಾಸರಕೋಡ ಪಂಚಾಯತನ ನಿವಾಸಿ ಕೃಷ್ಣ ಗಣಪಯ್ಯ ಗೌಡ ಇವರ ಮನೆಗೆ ಭೇಟಿ ನೀಡಿದ, ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಮಂಕಾಳ ವೈದ್ಯ ಅವರು, ಕುಟುಂಬಕ್ಕೆ ಆಧಾರವಾಗಿದ್ದ ಪತಿಯ ಅಗಲಿಕೆಯಿಂದ ದುಃಖದಲ್ಲಿದ್ದ ಪತ್ನಿಗೆ ಹಾಗೂ ತಾಯಿಗೆ ಧೈರ್ಯ ಹೇಳಿ, ಮಗುವಿನ ಮುಂದಿನ ವಿದ್ಯಾಭ್ಯಾಸಕ್ಕೆ ವೈಯಕ್ತಿಕವಾಗಿ ರೂ.1 ಲಕ್ಷ ರೂಪಾಯಿ ಆರ್ಥಿಕ ಸಹಾಯ ನೀಡಿದರು.

# ಸಾಧನೆಗೈದ ಕ್ರೀಡಾಪಟುಗಳಿಗೆ ಡಾ.ಸುಧಾಮೂರ್ತಿ ಸನ್ಮಾನ

**ವಿಜಯಪುರ:** ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆ ಅನೇಕ ಅಂತರಾಷ್ಟ್ರಮಟ್ಟದ ಸೈಕ್ಲಿಂಗ್ ಕ್ರೀಡಾಪಟುಗಳನ್ನು ನೀಡಿದೆ. ಅದರಲ್ಲೂ ವಿಜಯಪುರ ನಗರದಲ್ಲಿ ಕ್ರೀಡಾ ವಸತಿ ನಿಲಯ ಇರುವುದರಿಂದ ಇಲ್ಲಿನ ಭಾಗದ ಯುವಕರಿಗೆ ಸಾಧನೆ ಮಾಡಲು ಅನುಕೂಲವಾಗಿದೆ ಎಂದು ರಾಜ್ಯ ಸಭಾ ಸದಸ್ಯರಾದ ಡಾ. ಸುಧಾ ಮೂರ್ತಿಯವರು ಅಭಿಪ್ರಾಯಪಟ್ಟರು.

ಬುಧವಾರ ನಗರದ ಸರಕಾರಿ ಸೈಕ್ಲಿಂಗ್ ಕ್ರೀಡಾ ನಿಲಯದಲ್ಲಿ ರಾಷ್ಟ್ರಮಟ್ಟದಲ್ಲಿ ಸಾಧನೆಗೈದ ಕ್ರೀಡಾಪಟುಗಳನ್ನು ಸನ್ಮಾನಿಸಿ ಮಾತನಾಡಿ ಸೈಕ್ಲಿಂಗ್ ಕ್ರೀಡೆಯಲ್ಲಿ ತರಬೇತಿ ಪಡೆಯುತ್ತಿರುವ ವಿದ್ಯಾರ್ಥಿಗಳು ರಸ್ತೆಯಲ್ಲಿ ಅಪಘಾತ ಹಾಗೂ ಕಷ್ಟಗಳನ್ನು ಎದುರಿಸಬೇಕಾಗುತ್ತದೆ. ಈ ದೃಷ್ಟಿಯಿಂದ ನನ್ನ ಪರವಾಗಿ ವಸತಿ ನಿಲಯದಲ್ಲಿ ಇದ್ದ ಎಲ್ಲಾ ವಿದ್ಯಾರ್ಥಿಗಳಿಗೆ ಜೀವ ವಿಮೆಯನ್ನು ಮಾಡಿಸಲಾಗುವುದು ಹಾಗೂ ದಿನಾಲು ಅಭ್ಯಾಸ ಮಾಡಲು ವಸತಿ ನಿಲಯದಲ್ಲೆ ಸಂಸದರ ಅನುದಾನ ಅಡಿಯಲ್ಲಿ ಉನ್ನತ ಮಟ್ಟದ ಸೈಕ್ಲಿಂಗ್ ಟ್ರ್ಯಾಕ್ ನಿರ್ಮಿಸಿ, ಉನ್ನತ ಮಟ್ಟದ ಕ್ರೀಡಾ ಸಲಕರಣೆಗಳನ್ನು ಪೂರೈಸಲಾಗುವುದು ಎಂದು ಅವರು ಹೇಳಿದರು.

ಇದೇ ಸಂದರ್ಭದಲ್ಲಿ ರಾಷ್ಟ್ರಮಟ್ಟದ ಸೈಕ್ಲಿಂಗ್ ಕ್ರೀಡೆಯಲ್ಲಿ ಸಾಧನೆ ಮಾಡಿದ ಶ್ರೀನಿವಾಸ್ ರಜಪೂತ - ಬಂಗಾರ ಪದಕ -1, ದೀಪಿಕಾ ಫಡತರೆ - ಬಂಗಾರ ಪದಕ - 2, ಛಾಯಾ ನಾಗಶೆಟ್ಟಿ - ಬಂಗಾರ ಪದಕ - 2, ಸುಜಲ ಜಾಧವ - ಬಂಗಾರ ಪದಕ -1, ಬೆಳ್ಳಿ ಪದಕ - 1, ಅಭಿಷೇಕ ದಿಡ್ಡಿಬಾಗಿಲು - ಬೆಳ್ಳಿ ಪದಕ - 1, ಕೋಕಿಲಾ ಚವ್ಹಾಣ - ಬೆಳ್ಳಿ ಪದಕ - 1, ನಿತೀಶ ಪೂಜಾರಿ - ಬೆಳ್ಳಿ ಪದಕ - 1, ಪುನಿತ ಬಿರಾದಾರ - ಕಂಚಿನ ಪದಕ -2, ಬಸವರಾಜ ಯಳಮೇಲಿ - ಕಂಚಿನ ಪದಕ -2, ವರ್ಷಾ ಚವ್ಹಾಣ - ಕಂಚಿನ ಪದಕ -1, ಜ್ಯೋತಿ ರಾಠೋಡ - ಕಂಚಿನ ಪದಕ -1, ಪಾಯಲ್ ಚವ್ಹಾಣ - ಕಂಚಿನ ಪದಕ -1, ಕ್ರೀಡಾಪಟುಗಳನ್ನು ಸನ್ಮಾನಿಸಲಾಯಿತು.



ಮಹಿಳೆಯರ ವಿಭಾಗದಲ್ಲಿ ವಿಜಯಪುರ ಜಿಲ್ಲೆ ಸಮಗ್ರ ವೀರಾಗ್ರಣಿ ಪ್ರಶಸ್ತಿ ಪುರುಷರ ವಿಭಾಗದಲ್ಲಿ ವಿಜಯಪುರ ಜಿಲ್ಲೆ ದ್ವಿತೀಯ ವೀರಾಗ್ರಣಿ ಪ್ರಶಸ್ತಿ ಪಡೆದುಕೊಂಡಿದೆ.

ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಡಾ.ಆನಂದ ಕೆ., ಡಾ. ಜಾವಿದ ಜಮಾದಾರ, ಭೀಮಸೇನ ಕೊಕರೆ, ಎಸ್.ಎಸ್. ಹಿರೇಮಠ, ರಾಜು ಬಿರಾದಾರ, ರಾಜಶೇಖರ ಧೈವಾಡಿ, ಆಕಾಶ ತಿಮ್ಮಶೆಟ್ಟಿ, ಜಿ.ಎಮ್. ಮಲಜಿ, ಪ್ರಿಯಾಂಕ ಉಪಸ್ಥಿತರಿದ್ದರು.

## ನ.2ರಂದು ಮ್ಯಾರಥಾನ್ ಓಟ

**ವಿಜಯಪುರ:** ವಿಜಯಪುರ ಮಹಾನಗರ ಪಾಲಿಕೆ ವತಿಯಿಂದ ವೃಕ್ಷ ಅಭಿಯಾನ ಪ್ರತಿಷ್ಠಾನ ವಿಜಯಪುರ ಇವರ ಸಹಯೋಗದಲ್ಲಿ ಸ್ವಚ್ಛ ಭಾರತ ಮಿಷನ್-2.0 ರಡಿ ನಗರದ ಸಾರ್ವಜನಿಕರಲ್ಲಿ ಸ್ವಚ್ಛತೆ ಕುರಿತು ಅರಿವು ಮೂಡಿಸಲು ನ.02ರಂದು ನಗರದಲ್ಲಿ ಮ್ಯಾರಥಾನ್ ಓಟ ಕಾರ್ಯಕ್ರಮ ಆಯೋಜಿಸಲಾಗಿದೆ. ಅಂದು ಬೆಳಿಗ್ಗೆ 6-30ರಿಂದ ನಗರದ ಡಾ.ಬಿ.ಆರ್.ಅಂಬೇಡ್ಕರ್ ಕ್ರೀಡಾಂಗಣದಿಂದ ಮ್ಯಾರಥಾನ್ ಓಟ ಆರಂಭಗೊಂಡು, ಸ್ಟೇಶನ ರಸ್ತೆ, ಗೋಲಗುಮ್ಮಟ, ಡಾ.ಬಿ.ಆರ್.ಅಂಬೇಡ್ಕರ್ ವೃತ್ತ, ಗಗನ್ ಮಹಲ್, ನರಸಿಂಹಸ್ವಾಮಿ ದೇವಸ್ಥಾನ ರಸ್ತೆ, ಬಸವೇಶ್ವರ ವೃತ್ತ, ಮಹಾತ್ಮಾ ಗಾಂಧಿ ವೃತ್ತ, ಶಿವಾಜಿ ವೃತ್ತ, ವಾಟರ್ ಟ್ಯಾಂಕ್ ಇಬ್ರಾಹಿಂ ರೋಜಾ, ವಾಟರ್ ಟ್ಯಾಂಕ್, ಬಾರಾಕಮಾನ ಮಾರ್ಗವಾಗಿ ಡಾ.ಬಿ.ಆರ್.ಅಂಬೇಡ್ಕರ್ ಕ್ರೀಡಾಂಗಣದಲ್ಲಿ ಮುಕ್ತಾಯವಾಗಲಿದೆ. ಈ ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಭಾಗವಹಿಸಿ ಯಶಸ್ವಿಗೊಳಿಸುವಂತೆ ಮಹಾನಗರ ಪಾಲಿಕೆ ವಿಜಯ ಮೆಕ್ಕಳಕಿ ತಿಳಿಸಿದ್ದಾರೆ.

## ಕುಡಿಯುವ ನೀರು ಪೂರೈಕೆಯಲ್ಲಿ ವ್ಯತ್ಯಯ

**ವಿಜಯಪುರ:** ವಿಜಯಪುರ ನಗರಕ್ಕೆ ಕುಡಿಯುವ ನೀರು ಸರಬರಾಜು ಮಾಡುವ ಕೊಲ್ಹಾರ ಮೂಲ ಸ್ಥಾವರದಿಂದ ಜಲನಗರ ಪಂಪಿನ ಮನೆಯವರೆಗೆ ಅಳವಡಿಸಿರುವ ಮುಖ್ಯ ಏರು ಕೊಳವೆ ಮಾರ್ಗದಲ್ಲಿ ನೀರು ಸೋರುವಿಕೆಯಾಗುತ್ತಿರುವ ದುರಸ್ತಿ ಕಾಮಗಾರಿಯನ್ನು ಜಲ ಮಂಡಳಿಯಿಂದ ಕೈಗೊಳ್ಳಲಾಗುತ್ತಿರುವ ಹಿನ್ನಲೆಯಲ್ಲಿ ದಿನಾಂಕ: 02-11-2025ರಂದು ವಿಜಯಪುರ ನಗರಕ್ಕೆ ಕೊಲ್ಹಾರ ಶುದ್ಧ ಕುಡಿಯುವ ನೀರಿನ ಘಟಕದಿಂದ ನೀರು ಸರಬರಾಜು ಆಗುವ ಪ್ರದೇಶಗಳಿಗೆ ನೀರು ಸರಬರಾಜುವಿನಲ್ಲಿ ವ್ಯತ್ಯವಾಗಲಿದ್ದು, ಸಾರ್ವಜನಿಕರು ಜಲಮಂಡಳಿಯೊಂದಿಗೆ ಸಹಕರಿಸುವಂತೆ ಜಲಮಂಡಳಿ ಕಾರ್ಯಪಾಲಕ ಅಭಿಯಂತರರು ಕೋರಿದ್ದಾರೆ.

## ಜಿಲ್ಲಾ ಸಹಕಾರಿ ಯೂನಿಯನ್‌ಗೆ ನೇಮಕ



**ರಾಮದುರ್ಗ:** ಬೆಳಗಾವಿ ಜಿಲ್ಲಾ ಸಹಕಾರಿ ಯೂನಿಯನ್‌ಗೆ ತಾಲೂಕಿನ ಚಿಪ್ಪಲಕಟ್ಟಿ ಗ್ರಾಮದ ಮುಖಂಡ ಗುರುನಾಥ ದುಂಡಪ್ಪ ಹೂಗಾರ ನಾಮನಿರ್ದೇಶಿತ ಸದಸ್ಯರಾಗಿ ನೇಮಕಗೊಂಡಿದ್ದಾರೆ. ಇವರು ಚಿಪ್ಪಲಕಟ್ಟಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘದ ಅಧ್ಯಕ್ಷರಾಗಿ 20 ವರ್ಷ ಸೇವೆ, ರಾಮದುರ್ಗ ಟಿ.ಎ.ಪಿ.ಸಿ.ಎಂ. ಎಸ್ ನಿರ್ದೇಶಕರಾಗಿ, ಪಿ.ಎಲ್.ಡಿ ಬ್ಯಾಂಕಿಗೆ 3 ಅವಧಿಗೆ ನಿರ್ದೇಶಕರಾಗಿ ಸೇವೆ ಸಲ್ಲಿಸಿದ್ದಾರೆ. ಅವರ ಸೇವೆಯನ್ನು ಪರಿಗಣಿಸಿ ಬೆಳಗಾವಿ ಜಿಲ್ಲಾ ಸಹಕಾರಿ ಯೂನಿಯನಿಗೆ ನಾಮನಿರ್ದೇಶಿತ ಸದಸ್ಯ ಸ್ಥಾನ ಲಭಿಸಿದೆ.

# ಶಿವಾಪೂರದಲ್ಲಿ ಮೌನ ಅನುಷ್ಠಾನದ ಮಹಾಮಂಗಲ ಸಮಾರಂಭ



**ಹಳ್ಳೂರ:** ತಪಸ್ಸು ಪೂಜೆ ಹೋಮ ಹವನಗಳು, ಮೌನ ಅನುಷ್ಠಾನ ಭಕ್ತಿಯಿಂದ ಪೂಜಿಸಿ ಧ್ಯಾನಿಸಿದರೆ ಪಾಪ ಕರ್ಮಗಳು ನಾಶವಾಗಿ ಪುಣ್ಯ ಪ್ರಾಪ್ತಿಯಾಗಿ ಜಗತ್ತು ಉದ್ಧಾರವಾಗುತ್ತಿದೆಂದು ಗೋಕಾಕ ಶೂನ್ಯ ಸಂಪಾದನ ಮಠದ ಶ್ರೀ ಮುರುಘ ರಾಜೇಂದ್ರ ಮಹಾಸ್ವಾಮಿಗಳು ಹೇಳಿದರು.

ಅವರು ಶಿವಾಪೂರ ಗ್ರಾಮದ ಶ್ರೀ ಅಡವಿ ಸಿದ್ದೇಶ್ವರ ಮಠದ ಪೀಠಾಧಿಪತಿಗಳಾದ ಅಡವಿ ಸಿದ್ದರಾಮ ಮಹಾಸ್ವಾಮಿಗಳ 25 ದಿನಗಳ ಕಾಲ ನಡೆದ ಮೌನ ಅನುಷ್ಠಾನದ ಮಹಾ ಮಂಗಲ ಸಮಾರಂಭದ ದಿವ್ಯ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿ ಅನುಷ್ಠಾನದ ಪಲದಿಂದ ಭಕ್ತರು ಸಮಾಜ ಉದ್ದಾರಾಗುತ್ತದೆ. ಸಮಾಜದಲ್ಲಿನ ಅಂಧಕಾರ ಅಜ್ಞಾನವನ್ನು ಕಳೆಯುವ ಪೂಜ್ಯರ ಮಾರ್ಗ ದರ್ಶನದಲ್ಲಿ ಸಾಗಿರಿ ಕೆಲವು ಸ್ವಾಮೀಜಿಗಳು ರಾಜಕೀಯ, ಜಾತಿ ಬೆನ್ನು ಹತ್ತಿ ಸಮಾಜದ ಸ್ವಾಸ್ಥ್ಯ ಹಾಳು ಮಾಡುತ್ತಿದ್ದಾರೆ.

ಮಹಾತ್ಮರು ಗುರುವಿಗೆ ಶ್ರೇಷ್ಠ ಸ್ಥಾನ ಮಾನವಿದೆ. ಬೇಧ ಭಾವ ಮಾಡದೆ ಎಲ್ಲರನ್ನು ಪ್ರೀತಿಸಿ ಉಪದೇಶ ನೀಡಿ ಉದ್ದಾರ ಮಾಡುವ ಕಾರ್ಯ ಮಾಡಬೇಕು. ಸೂರ್ಯ, ಚಂದ್ರರಿಗೆ ಗ್ರಹಣ ಬರುತ್ತವೆ ದೇವಾದಿ ದೇವತೆಗಳಿಗೂ ಕಷ್ಟ ಕಾರ್ಪಣ್ಯಗಳು ಬಂದಿವೆ. ನಾವು ಸತ್ಯ ಧರ್ಮದ ದಾರಿಯಲ್ಲಿ ಸಾಗಿ ಕಷ್ಟ ಎದುರಿಸಿ ಧೈರ್ಯದಿಂದ ಇದ್ದಾಗ ಮಾತ್ರ ಜಯ ಸಿಗುತ್ತಿದೆಂದು ಹೇಳಿದರು.

ಅಡವಿ ಸಿದ್ದೇಶ್ವರ ಮಠದ ಪೀಠಾಧಿಪತಿಗಳಾದ ಅಡವಿ ಸಿದ್ದರಾಮ ಮಹಾಸ್ವಾಮಿಗಳು ಮಾತನಾಡಿ ಭಕ್ತರ ಕಷ್ಟ ಕಾರ್ಪಣ್ಯಗಳು ಬಯಲಾಗಿ ಜೀವನವು ನೆಮ್ಮದಿಯಿಂದ ಬದುಕಲಿ, ಸುಖ ಸಮೃದ್ಧಿ ದೊರೆಯಿಲಿ ಎಂದು ಶಿವನ ಧ್ಯಾನದಲ್ಲಿ ಮಗ್ನನಾಗಿದ್ದು ಮೌನ ಅನುಷ್ಠಾನದಿಂದ ಎಲ್ಲರಿಗೂ ಶುಭವಾಗಲೆಂದು ಹಾರೈಸಿದರು.

ಜಡಿ ಸಿದ್ದೇಶ್ವರ ಮಠದ ಶಿವಾನಂದ ಮಹಾಸ್ವಾಮಿಗಳು, ಶಿವಲಿಂಗ ಮುರುಘ ರಾಜೇಂದ್ರ ಶಿವಾಚಾರ್ಯ ಸ್ವಾಮೀಜಿ.ಸಂಗಮೇಶ್ವರ ಪೂಜ್ಯರು, ಗಂಗಾಧರ ಮಹಾಸ್ವಾಮಿಗಳು, ವೀರೇಶ ದೇವರು. ವೇದಮೂರ್ತಿ ಶಂಕರಯ್ಯ ಹಿರೇಮಠ ಆಶೀರ್ವಚನ ನೀಡಿದರು.

ಪ್ರಾರಂಭದಲ್ಲಿ ಶಿವಾಪೂರ ಗೊರಗುದ್ದಿ ತೋಟದಿಂದ ಅಡವಿ ಸಿದ್ದೇಶ್ವರ ಮಠದವರೆಗೆ ಅಡವಿ ಸಿದ್ದರಾಮ ಮಹಾಸ್ವಾಗಳನ್ನು ರಥದಲ್ಲಿ ಕುಳ್ಳಿರಿಸಿ ಸಹಸ್ರಾರು ಭಕ್ತರ ಸಮ್ಮುಖದಲ್ಲಿ ಕುಂಬ ಮೇಳ ಆರತಿ ಭವ್ಯ ಮೆರವಣಿಗೆಯೊಂದಿಗೆ ಶ್ರೀ ಮಠಕ್ಕೆ ಬರಮಾಡಿಕೊಂಡರು.

ಧರ್ಮ ಸಭೆ ನಡೆದು ಸರ್ವರಿಗೂ ಮಹಾ ಪ್ರಸಾದ ವ್ಯವಸ್ಥೆ ನಡೆಯಿತು. ಗ್ರಾಮದ ಗುರು ಹಿರಿಯರು ಉಪಸ್ಥಿತರಿದ್ದರು.

# ಪಟೇಲರು ರಾಷ್ಟ್ರದ ಏಕತೆಗಾಗಿ ತಮ್ಮ ಜೀವನ ಮುಡುಪಾಗಿಟ್ಟಿದ್ದರು



**ಕೊಪ್ಪಳ:** ಸರ್ದಾರ್ ವಲ್ಲಭಭಾಯಿ ಪಟೇಲ್ ಅವರು ತಮ್ಮ ಜೀವನದುದ್ದಕ್ಕೂ ರಾಷ್ಟ್ರದ ಏಕತೆಗಾಗಿ ಶ್ರಮಿಸಿದ್ದರು ಎಂದು ಗೌರವಾನ್ವಿತ ಉಪಲೋಕಾಯುಕ್ತರಾದ ಬಿ. ವೀರಪ್ಪ ಹೇಳಿದರು.

ಅವರು ಶುಕ್ರವಾರ ಕೊಪ್ಪಳ ಜಿಲ್ಲಾ ಪೊಲೀಸ್ ವತಿಯಿಂದ ಜಿಲ್ಲಾ ಕ್ರೀಡಾಂಗಣದಲ್ಲಿ ರಾಷ್ಟ್ರೀಯ ಐಕ್ಯತಾ ದಿನಾಚರಣೆ ನಿಮಿತ್ತ ಹಮ್ಮಿಕೊಂಡಿದ್ದ ಐಕ್ಯತೆಗಾಗಿ ಓಟ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಸ್ವಾತಂತ್ರ್ಯ ಪೂರ್ವದಲ್ಲಿ ಸರ್ದಾರ್ ವಲ್ಲಭಭಾಯಿ ಪಟೇಲ್ ಸೇರಿದಂತೆ ಇತರೆ ಹಲವಾರು ನಾಯಕರು ಎಷ್ಟು ಶ್ರಮ ಪಟ್ಟಿದ್ದಾರೆ. ರಾಷ್ಟ್ರೀಯ ಐಕ್ಯತೆ ಅವರ ರಕ್ತದಲ್ಲಿತ್ತು. ಐಕ್ಯತೆ ಬೆಳೆಸಬೇಕಾದರೆ ನಮ್ಮಲ್ಲಿ ನಿಸ್ವಾರ್ಥ ದೇಶಭಕ್ತಿ ಇರಬೇಕು. ಭಾರತ ಹಲವಾರು ಧರ್ಮಗಳ ಸಮ್ಮಿಲನವಾಗಿದೆ. ಐಕ್ಯತೆಗಾಗಿ ನಾವು ದಿನದ 24 ತಾಸು ಶ್ರಮಿಸಬೇಕಿದೆ ಎಂದರು.

ಐಕ್ಯತೆ ಜೊತೆಗೆ ಈ ದೇಶದ ದೊಡ್ಡ ಪಿಡುಗು ಭ್ರಷ್ಟಾಚಾರವಾಗಿದೆ. ಇದರ ನಿರ್ಮೂಲನೆಗೆ ನಾವೆಲ್ಲರೂ ಶ್ರಮಿಸಬೇಕಿದೆ. ನಮ್ಮ ಮಕ್ಕಳಿಗೆ ದೇಶಭಕ್ತಿ, ದೇಶಾಭಿಮಾನ ಹಾಗೂ ಐಕ್ಯತೆಯಿಂದ ಬಾಳುವಂತೆ ಅವರಿಗೆ ತಿಳಿ ಹೇಳಬೇಕೆಂದರು.

ಈ ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಡಾ. ಸುರೇಶ ಬಿ. ಇಟ್ನಾಳ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ರಾಮ್ ಎಲ್. ಅರಸಿದ್ದಿ, ಕರ್ನಾಟಕ ಲೋಕಾಯುಕ್ತದ ವಿಚಾರಣೆ ಅಪರ ನಿಬಂಧಕರಾದ ಡಾ. ಕಸನಪ್ಪ ನಾಯ್ಕ, ರಮಾಕಾಂತ್ ಚವ್ಹಾಣ ಹಾಗೂ ಅರವಿಂದ ಎನ್.ವಿ., ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಸದಸ್ಯ ಕಾರ್ಯದರ್ಶಿಗಳು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಮಹಾಂತೇಶ್ ಎಸ್. ದರಗದ, ರಾಯಚೂರು ಲೋಕಾಯುಕ್ತ ಪೊಲೀಸ್ ಅಧೀಕ್ಷಕರಾದ ಸತೀಶ್ ಎಸ್. ಚಿಟಗುಬ್ಬಿ, ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ, ಅಪರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಆರ್.ಹೇಮಂತಕುಮಾರ್, ಉಪ ವಿಭಾಗಾಧಿಕಾರಿ ಮಹೇಶ ಮಾಲಗಿತ್ತಿ, ಉಪ ಅರಣ್ಯ ಸಂರಕ್ಷಣಾಧಿಕಾರಿ ನಿರ್ಮಲಾ, ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ವಿಠಲ ಜಾಬಗೌಡರ ಸೇರಿದಂತೆ ಇತರೆ ಅಧಿಕಾರಿಗಳು ಹಾಗೂ ಜಿಲ್ಲಾ ಕ್ರೀಡಾ ವಸತಿ ನಿಲಯದ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಕಾರ್ಯಕ್ರಮದ ನಂತರ ಗೌರವಾನ್ವಿತ ಉಪಲೋಕಾಯುಕ್ತರು ಜಿಲ್ಲಾ ಕ್ರೀಡಾ ವಸತಿ ನಿಲಯಕ್ಕೆ ಭೇಟಿ ನೀಡಿ ವಸತಿ ನಿಲಯದಲ್ಲಿ ಮಕ್ಕಳಿಗೆ ನೀಡುತ್ತಿರುವ ಸೌಲಭ್ಯಗಳನ್ನು ಪರಿಶೀಲಿಸಿದ ನಂತರ ವಿದ್ಯಾರ್ಥಿಗಳ ಸಮಸ್ಯೆಗಳನ್ನು ಆಲಿಸಿ ವಸತಿ ನಿಲಯದಲ್ಲಿ ಮಕ್ಕಳಿಗೆ ಯಾವುದೇ ಸಮಸ್ಯೆಗಳಾಗದಂತೆ ನೋಡಿಕೊಳ್ಳುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ತಿಳಿಸಿದರು.

## ಸುದೀರ್ಘವಾಗಿ ತ್ರೈಮಾಸಿಕ ಕೆ.ಡಿ.ಪಿ ಸಭೆ ನಡೆಸಿದ ಸಚಿವೆ ಲಕ್ಷ್ಮೀ ಹೆಬ್ಬಾಳಕರ

# ಜವಾಬ್ದಾರಿಯುತವಾಗಿ ಕೆಲಸ ಮಾಡಲು ಅಧಿಕಾರಿಗಳಿಗೆ ಸೂಚನೆ

**ಉಡುಪಿ:** ಸರ್ಕಾರದ ಯೋಜನೆಗಳು ಜನ ಸಾಮಾನ್ಯರಿಗೆ ತಲುಪಬೇಕೆಂದರೆ ಅಧಿಕಾರಿಗಳು ಜವಾಬ್ದಾರಿಯುತವಾಗಿ ಕೆಲಸ ಮಾಡಬೇಕು. ಆಗಷ್ಟೇ ಸರ್ಕಾರಕ್ಕೆ ಒಳ್ಳೆಯ ಹೆಸರು ಬರುತ್ತದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರು ಹಾಗೂ ಉಡುಪಿ ಜಿಲ್ಲಾ ಉಸ್ತುವಾರಿ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು.

ಜಿಲ್ಲಾ ಪಂಚಾಯತ್ ಆವರಣದಲ್ಲಿ ಶುಕ್ರವಾರ ನಡೆದ ತ್ರೈಮಾಸಿಕ ಕೆಡಿಪಿ ಸಭೆಯಲ್ಲಿ ಮಾತನಾಡಿದ ಸಚಿವರು, ಅಧಿಕಾರಿಗಳು ಬದ್ಧತೆಯಿಂದ ರೈತರ ಸಮಸ್ಯೆಗಳನ್ನು ಬಗೆಹರಿಸಲು ಸೂಚನೆ ನೀಡಿದರು. ಅತಿವೃಷ್ಟಿಯಿಂದ ಹಾನಿಗೊಳಗಾದ ರೈತರಿಗೆ ಪರಿಹಾರ ನೀಡಲು ತಯಾರಿ ಮಾಡಲಾಗುತ್ತದೆ. ಇದಕ್ಕೆ ರಾಜ್ಯ ಸರ್ಕಾರ 8000 ಕೋಟಿ ರೂಪಾಯಿ ಅನುದಾನವನ್ನು ನೀಡುತ್ತಿದೆ. ಇದೊಂದು ವಿಶೇಷ ಪ್ರಕರಣ ಎಂದು ಪರಿಗಣಿಸಿ ಪರಿಹಾರ ನೀಡಲು ತೀರ್ಮಾನಿಸಲಾಗಿದೆ ಎಂದರು. ವಾರಾಹಿ ನೀರಾವರಿ ಯೋಜನೆಗೆ ರೈತರ ಜಮೀನನ್ನು ಸ್ವಾಧೀನಪಡಿಸಿಕೊಂಡಿದ್ದು, ಈವರೆಗೂ ರೈತರಿಗೆ ಸರ್ಕಾರದಿಂದ ಪರಿಹಾರ ನೀಡಿರುವುದಿಲ್ಲ, ಈ ಕುರಿತು ಸರ್ಕಾರದಿಂದ ಹಣ ಬಿಡುಗಡೆಗೊಳಿಸಲು ಪ್ರಯತ್ನಿಸಲಾಗುವುದು. ಈ ಯೋಜನೆಯಲ್ಲಿ ಕೆಲವು ಜಮೀನುಗಳು ಡೀಮ್ಡ್ ಫಾರೆಸ್ಟ್ ಹಾಗೂ ಮೀಸಲು ಅರಣ್ಯ ಪ್ರದೇಶದಲ್ಲಿ ಹಾದು ಹೋಗುತ್ತಿರುವ ಹಿನ್ನೆಲೆಯಲ್ಲಿ ಅರಣ್ಯ ಇಲಾಖೆಯ ಅನುಮತಿ ನೀಡುವಂತೆ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಸೂಚನೆ ನೀಡಿದರು.



### ಸೂಕ್ತವಾಗಿ ಹಾಸ್ಟೆಲ್ ನಿರ್ವಹಣೆಗೆ ಕ್ರಮ

ಜಿಲ್ಲೆಗೆ ವಿದ್ಯಾಭ್ಯಾಸಕ್ಕೆ ಹೊರ ಜಿಲ್ಲೆಗಳಿಂದ ಅದರಲ್ಲೂ ಉತ್ತರ ಕರ್ನಾಟಕದಿಂದ ವಿದ್ಯಾರ್ಥಿಗಳು ಬರುತ್ತಿದ್ದಾರೆ, ಶಾಲಾ ದಾಖಲಾತಿ ಒಂದು ತಿಂಗಳಾದರೂ ಹಾಸ್ಟೆಲ್ ಸೌಲಭ್ಯ ಸಿಗದೆ ತೊಂದರೆ ಉಂಟಾಗುತ್ತಿದೆ. ಈ ಬಗ್ಗೆ ಕ್ರಮ ವಹಿಸಿ ಸಮಸ್ಯೆ ಉಂಟಾಗದಂತೆ ನೋಡಿಕೊಳ್ಳಬೇಕು. ತಾಲೂಕು ಕೇಂದ್ರಗಳಲ್ಲಿ ಸೂಕ್ತವಾಗಿ ಹಾಸ್ಟೆಲ್ ನಿರ್ವಹಣೆ ಮಾಡಬೇಕು ಎಂದರು. ಸರ್ಕಾರ ಜನ ಸಾಮಾನ್ಯರಿಗೆ ಉತ್ತಮ ಆರೋಗ್ಯ ಸೇವೆಗಳನ್ನು ನೀಡಬೇಕು, ಸರ್ಕಾರ ಅನೇಕ ಜನಪರ ಯೋಜನೆಗಳನ್ನು ಜಾರಿಗೆ ತಂದಿದೆ. ಉತ್ತಮ ಸೇವೆಯನ್ನು ನೀಡಬೇಕು, ಹೆರಿಗೆ ತಜ್ಞರ ಕೊರತೆಯಿಂದ ಜಿಲ್ಲೆಯ ಸರ್ಕಾರಿ ಆಸ್ಪತ್ರೆಗಳಲ್ಲಿ ಹೆರಿಗೆ ಪ್ರಮಾಣವು ಕಡಿಮೆ ಆಗುತ್ತಿದೆ. ಸರ್ಕಾರಿ ಆಸ್ಪತ್ರೆಗಳಲ್ಲಿ ಹೆರಿಗೆ ಪ್ರಮಾಣ ಹೆಚ್ಚಿಸುವಂತೆ ಸಚಿವರು ಆದೇಶಿಸಿದರು.

ಜಿಲ್ಲೆಯಲ್ಲಿ ಸಾರ್ವಜನಿಕರು ವಾಸದ ಮನೆ ಅಥವಾ ಕಟ್ಟಡ ಕಟ್ಟಲು ಬೇಡಿಕೆ ಇರುವ ಕೆಂಪು ಕಲ್ಲು ಗಣಿಗಾರಿಕೆಗೆ ಪಟ್ಟಾ ಲ್ಯಾಂಡ್ ನಲ್ಲಿ 30 ನಲ್ಲಿ ಅನುಮತಿ ನೀಡಿದರೂ ಸಹ ಅರಣ್ಯ ಇಲಾಖೆಯಿಂದ ಆಕ್ಷೇಪಣೆ ಮಾಡುತ್ತಿದ್ದು, ಈ ಬಗ್ಗೆ ಜಿಲ್ಲಾಧಿಕಾರಿಗಳು ಶೀಘ್ರದಲ್ಲೇ ಅರಣ್ಯ ಇಲಾಖೆ ಅಧಿಕಾರಿಗಳಿಗೆ ನೋಟಿಸ್ ಕೊಟ್ಟು ಕ್ರಮ ವಹಿಸಬೇಕು ಎಂದ ಸಚಿವರು, ಇದಕ್ಕಾಗಿ ಮೂರು ದಿನಗಳ ಗಡುವು ನೀಡಿದರು. ಪ್ರಧಾನ ಮಂತ್ರಿ ಸಿಂಚಾಯಿ ಯೋಜನೆಯಡಿ ಸಣ್ಣ ಪ್ರಮಾಣದ ಚೆಕ್ ಡ್ಯಾಂಗಳನ್ನು ನಿರ್ಮಾಣ ಕೈಗೆತ್ತಿಕೊಳ್ಳಲಾಗಿದ್ದು, ಈ ಚೆಕ್ ಡ್ಯಾಂಗಳಲ್ಲಿ ನೀರು ನಿಲ್ಲದ ಸ್ಥಿತಿಯಿದೆ. ಈ ಚೆಕ್ ಡ್ಯಾಂಗಳ ನಿರ್ಮಾಣಕ್ಕೆ ನಕ್ಷೆ ಅವೈಜ್ಞಾನಿಕವಾಗಿದ್ದು, ಅನುದಾನದ ಬಳಕೆಯೂ ಪೂರ್ಣ ಪ್ರಮಾಣದಲ್ಲಿ ಆಗಿಲ್ಲ, ಎಂಬ ದೂರುಗಳು ಕೇಳಿ ಬರುತ್ತಿವೆ, ಈ ಬಗ್ಗೆ ಜಿಪಂ ಸಿಇಒ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಬೇಕೆಂದು ಸೂಚನೆ ನೀಡಿದರು.

ಜಿಲ್ಲೆಯಲ್ಲಿ ಕೈಗೊಂಡಿರುವ ಬಂದರು ಅಭಿವೃದ್ಧಿ ಕಾಮಗಾರಿಗಳನ್ನು ಆದ್ಯತೆಯ ಮೇಲೆ ನಿಗದಿತ ಅವಧಿಯಲ್ಲಿ ಪೂರ್ಣ ಗೊಳಿಸಬೇಕು. ಕೆಲವು ನಿರ್ಮಾಣ ಕಾರ್ಯಗಳಿಗೆ ಸಿಆರ್ ಝಡ್ ನ ಅನುಮತಿಯ ಅಗತ್ಯವಿದೆ, ಅದನ್ನು ಪಡೆಯಲು ಅನುಕೂಲ ಆಗುವಂತೆ ರಾಜ್ಯ ಮಟ್ಟದ ಅಖಿಚ ಕಮಿಟಿ ರಚಿಸಬೇಕಿದ್ದು, ಈಗಾಗಲೇ ಪ್ರಸ್ತಾವನೆ ಕೇಂದ್ರ ಸರ್ಕಾರದ ಮುಂದಿದೆ, ಸಮಿತಿಯನ್ನು ತ್ವರಿತವಾಗಿ ರಚಿಸುವಂತೆ ನೋಡಿಕೊಳ್ಳಬೇಕು ಎಂದರು. ಜಿಲ್ಲೆಯಲ್ಲಿ ಕಡಲ ಕೊರೆತ ಉಂಟಾಗುತ್ತಿದ್ದು, ಇದನ್ನು ಗಂಭೀರವಾಗಿ ತೆಗೆದುಕೊಂಡು ವೈಜ್ಞಾನಿಕವಾಗಿ ಶಾಶ್ವತ ಪರಿಹಾರ ಕಂಡುಕೊಳ್ಳಲು ಜಿಲ್ಲಾಧಿಕಾರಿಗಳಿಗೆ ಸಚಿವರು ಸೂಚನೆ ನೀಡಿದರು. ಈ ವೇಳೆ ಶಾಸಕರಾದ ಸುನೀಲ್ ಕುಮಾರ್, ಯಶ್ ಪಾಲ್ ಸುವರ್ಣ, ಗುರ್ಮೆ ಸುರೇಶ್ ಶೆಟ್ಟಿ, ಗುರುರಾಜ್ ಗಂಟಿಹೊಳೆ, ಕಿರಣ್ ಕುಮಾರ್ ಕೊಡ್ಗಿ, ವಿಧಾನ ಪರಿಷತ್ ಸದಸ್ಯರಾದ ಎಸ್.ಎಲ್. ಭೋಜೇಗೌಡ, ಮಂಜುನಾಥ್ ಭಂಡಾರಿ, ಡಾ.ಧನಂಜಯ್ ಸರ್ಜಿ, ಜಿಲ್ಲಾ ಗ್ಯಾರಂಟಿ ಯೋಜನೆಯ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಅಶೋಕ್ ಕುಮಾರ್ ಕೊಡವೂರು, ಜಿಲ್ಲಾಧಿಕಾರಿ ಟಿ.ಕೆ.ಸ್ವರೂಪ, ಜಿಲ್ಲಾ ಪಂಚಾಯತ್ ಸಿಇಒ ಪ್ರತೀಕ್ ಬಾಯಲ್, ಪೊಲೀಸ್ ವರಿಷ್ಠಾಧಿಕಾರಿ ಹರಿರಾಮ್ ಶಂಕರ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ಕನ್ನಡ ರಾಜ್ಯೋತ್ಸವ: ಪುಸ್ತಕಗಳಿಗೆ ಶೇ. 50 ರಷ್ಟು ರಿಯಾಯಿತಿ

**ಧಾರವಾಡ:** ಕನ್ನಡ ರಾಜ್ಯೋತ್ಸವದ ಅಂಗವಾಗಿ 2025 ರ ನವೆಂಬರ್ ತಿಂಗಳು ಪೂರ್ತಿ ಕನ್ನಡ ಪುಸ್ತಕ ಪ್ರಾಧಿಕಾರದ ಎಲ್ಲಾ ಪುಸ್ತಕಗಳನ್ನು ಶೇ. 50 ರಷ್ಟು ರಿಯಾಯಿತಿ ದರಗಳಲ್ಲಿ ಮಾರಾಟ ಮಾಡಲಾಗುವುದು.ಪುಸ್ತಕ ಪ್ರಿಯರು ಈ ಅವಕಾಶ ಬಳಸಿಕೊಳ್ಳಬೇಕು. ಬೆಂಗಳೂರಿನ ಕನ್ನಡ ಭವನದ ಸಿರಿಗನ್ನಡ ಪುಸ್ತಕ ಮಳಿಗೆಯಲ್ಲಿ (ಸಂಪರ್ಕ ಸಂಖ್ಯೆ:080-22107705) ಹಾಗೂ ಎಲ್ಲಾ ಜಿಲ್ಲೆಗಳ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ಹಾಗೂ ಕನ್ನಡ ಪುಸ್ತಕ ಪ್ರಾಧಿಕಾರದಿಂದ ತೆರೆಯಲಾದ ಎಲ್ಲಾ ಸಿರಿಗನ್ನಡ ಪುಸ್ತಕ ಮಾರಾಟ ಮಳಿಗೆಗಳಲ್ಲಿ ಈ ರಿಯಾಯಿತಿ ಸೌಲಭ್ಯ ದೊರೆಯಲಿದೆ. ಕನ್ನಡ ಪುಸ್ತಕ ಪ್ರಾಧಿಕಾರದ ವೆಬ್‌ಸೈಟ್ https://kpp.karnataka.gov.in ಮೂಲಕ ಆನ್‌ಲೈನ್ ಪುಸ್ತಕ ಖರೀದಿಯಲ್ಲಿ ಕೂಡ ಈ ಶೇ.50 ರಷ್ಟು ರಿಯಾಯಿತಿ ಲಭ್ಯವಿದೆ. ಕನ್ನಡ ಪುಸ್ತಕ ಪ್ರಾಧಿಕಾರವು ಕನ್ನಡ ಸಾಹಿತ್ಯ ಕ್ಷೇತ್ರಕ್ಕೆ ಸಂಬಂಧಿಸಿದಂತೆ, ಎಲ್ಲಾ ಪ್ರಕಾರದ ಸಾಹಿತ್ಯ ಕೃತಿಗಳನ್ನು ಈವರೆಗೆ ಪ್ರಕಟಿಸುತ್ತಾ ಬಂದಿದೆ. ಇವುಗಳಲ್ಲಿ ವ್ಯಕ್ತಿ ಚಿತ್ರಗಳು, ನಾಟಕಗಳು, ಅಲೆಮಾರಿ ಸಮುದಾಯ, ವೈದ್ಯಕೀಯ, ಪ್ರಾಚೀನ ಕನ್ನಡ ಸಾಹಿತ್ಯ, ಜಾನಪದ, ಪರಿಸರ, ಕೃಷಿ ಹೀಗೆ ಹಲವು ಹತ್ತು ಪ್ರಕಾರಗಳಲ್ಲಿ ಸಾಹಿತ್ಯ ಕೃತಿಗಳನ್ನು ಇದುವರೆಗೆ ಸುಮಾರು 700ಕ್ಕೂ ಹೆಚ್ಚಿನ ಶೀರ್ಷಿಕೆಗಳನ್ನು ಮುದ್ರಿಸಿ ಪ್ರಕಟಿಸಿದೆ. ಅತ್ಯಂತ ಮೌಲಿಕವಾದ, ಪ್ರಾಜ್ಞರಿಂದ ರಚಿತವಾದ ಈ ಕೃತಿಗಳನ್ನು ಜನಸಾಮಾನ್ಯರಿಗೆ ಸುಲಭ ಬೆಲೆಯಲ್ಲಿ ತಲುಪಿಸಬೇಕೆಂಬ ಉದ್ದೇಶ ಕನ್ನಡ ಪುಸ್ತಕ ಪ್ರಾಧಿಕಾರದ್ದಾಗಿದೆ ಎಂದು ಕನ್ನಡ ಪುಸ್ತಕ ಪ್ರಾಧಿಕಾರದ ಆಡಳಿತಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನಾಳೆ ರಾಜ್ಯಮಟ್ಟದ ಮಲ್ಲಕಂಬ ಕ್ರೀಡಾಕೂಟ

**ಗದಗ:** ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಶಾಲಾ ಶಿಕ್ಷಣ ಇಲಾಖೆ ಸಹಯೋಗದಲ್ಲಿ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳ ರಾಜ್ಯಮಟ್ಟದ ಮಲ್ಲಕಂಬ ಕ್ರೀಡಾಕೂಟ-2025 ನವಂಬರ 2 ರಂದು ರವಿವಾರ ಬೆಳಗ್ಗೆ 10 ಘಂಟೆಗೆ ನಗರದ ಕೆ.ಎಚ್ ಪಾಟೀಲ ಜಿಲ್ಲ್ಲಾ ಕ್ರೀಡಾಂಗಣದಲ್ಲಿ ಜರುಗುವುದು.

ಕರ್ನಾಟಕ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹಾಗೂ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಮಧು ಬಂಗಾರಪ್ಪ ಅವರು ಕಾರ್ಯಕ್ರಮ ಘನ ಉಪಸ್ಥಿತಿ ವಹಿಸುವರು. ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್. ಕೆ. ಪಾಟೀಲ ಕಾರ್ಯಕ್ರಮ ಉದ್ಘಾಟಿಸುವರು.

ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ, ವಿಧಾನ ಪರಿಷತ್ ಶಾಸಕರು ಹಾಗೂ ಸರ್ಕಾರಿ ಮುಖ್ಯ ಸಚೇತಕ ಸಲೀಂ ಅಹ್ಮದ್, ಕರ್ನಾಟಕ ರಾಜ್ಯ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷ್ಷರು ಹಾಗೂ ರೋಣ ಶಾಸಕ ಜಿ.ಎಸ್. ಪಾಟೀಲ, ಸಂಸದ ಪಿ.ಸಿ.ಗದ್ದಿಗೌಡರ, ಕರ್ನಾಟಕ ರಾಜ್ಯ ವಿಕೇಂದ್ರಿಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿಯ ಉಪಾಧ್ಯಕ್ಷ ಡಿ.ಆರ್.ಪಾಟೀಲ, ವಿಧಾನ ಪರಿಷತ್ ಶಾಸಕ ಎಸ್.ವಿ.ಸಂಕನೂರ, ಪ್ರದೀಪ ಶೆಟ್ಟರ, ನರಗುಂದ ಶಾಸಕ ಸಿ.ಸಿ.ಪಾಟೀಲ, ಶಿರಹಟ್ಟಿ ಶಾಸಕ ಚಂದ್ರು ಲಮಾಣಿ, ಗದಗ ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಜಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಟಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ.ಅಸೂಟಿ ಆಗಮಿಸುವರು. ವಿಶೇಷ ಆಹ್ವಾನಿತರಾಗಿ ಯೋಜನೆ, ಕಾರ್ಯಕ್ರಮ, ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆಯ ಕಾರ್ಯದರ್ಶಿ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಮಣದೀಪ್ ಚೌಧರಿ, ಬೆಳಗಾವಿ ವಿಭಾಗದ ಪ್ರಾದೇಶಿಕ ಆಯುಕ್ತೆ ಶ್ರೀಮತಿ ಜಾನಕಿ ಕೆ.ಎಂ, ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸಿ.ಎನ್.ಶ್ರೀಧರ, ಜಿಲ್ಲಾ ಪೋಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್ ಆಗಮಿಸುವರು.

ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಆರ್. ಎಸ್. ಬುರಡಿ, ಡಯಟ್ ಉಪನಿರ್ದೇಶಕಿ ಮಂಗಲಾ ಬಿ. ತಾಪಸ್ಕರ್, ಜಿಲ್ಲಾ ದೈಹಿಕ ಶಿಕ್ಷಣಾಧಿಕಾರಿಗಳು ಎನ್. ಆರ್. ನಿಡಗುಂದಿ, ಸರ್ವರಿಗೂ ಆದರದ ಸ್ವಾಗತ ಕೋರಿದ್ದಾರೆ.

# ಮಾವರಕರರಿಗೆ ರಾಜ್ಯೋತ್ಸವ ಪ್ರಯುಕ್ತ ಸನ್ಮಾನ

**ಬೆಳಗಾವಿ:** ಮಾಧ್ಯಮ ಕ್ಷೇತ್ರದಲ್ಲಿ ಗಣನೀಯ ಸೇವೆ ಸಲ್ಲಿಸಿದ ಬೆಳಗಾವಿಯ ಲೋಕ ಕ್ರಾಂತಿ ದಿನಪತ್ರಿಕೆಯ ಸಂಪಾದಕರಾದ ಶ್ರೀ ಹಿರೋಜಿ ಮಾವರಕರ ಅವರನ್ನು ರಾಜ್ಯೋತ್ಸವದ ಪ್ರಯುಕ್ತ ಜಿಲ್ಲಾಡಳಿತದ ವತಿಯಿಂದ ಸನ್ಮಾನಿಸಲು ನಿರ್ಧರಿಸಲಾಗಿದೆ.



1 ನವೆಂಬರ 2025 ರಂದು ಮುಂಜಾನೆ 9.30 ಗಂಟೆಗೆ ಜಿಲ್ಲಾ ಕ್ರೀಡಾಂಗಣದಲ್ಲಿ ಜರಗುವ ಕರ್ನಾಟಕ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಶ್ರೀ ಹಿರೋಜಿ ಮಾವರಕರ ಅವರನ್ನು ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಗಣ್ಯರುಗಳು ಸನ್ಮಾನಿಸಲಿದ್ದಾರೆ.

ಕಳೆದ 14 ವರ್ಷಗಳಿಂದ ಲೋಕ ಕ್ರಾಂತಿ ದಿನ ಪತ್ರಿಕೆಯ ಉಸ್ತುವಾರಿ ಹೊತ್ತುಕೊಂಡಿರುವ ಶ್ರೀ ಹಿರೋಜಿ ಮಾವರಕರ ಅವರು ಬಡ ಮಕ್ಕಳಿಗಾಗಿ ಗೋಕಾಕದಲ್ಲಿ ಉಚಿತ ಶಿಕ್ಷಣ ಸಂಸ್ಥೆಯನ್ನು ನಡೆಸುತ್ತಿದ್ದಾರೆ. ಅಲ್ಲದೆ ಗೋಕಾಕದಲ್ಲಿ ವಿಶೇಷ ಚೇತನ ಮಕ್ಕಳ ಶಾಲೆಯನ್ನು ಕೂಡ ಇವರು ನಡೆಸುತ್ತಿರುವುದು ಸ್ತುತ್ಯರ್ಹವಾಗಿದೆ. ಬೆಳಗಾವಿ ಜಿಲ್ಲೆ ಖಾನಾಪುರ ತಾಲೂಕಿನಲ್ಲಿರುವ ಶ್ರೀ ಕ್ಷೇತ್ರ ಕಕ್ಕೇರಿಯಲ್ಲಿ ಇವರು ನಿರಂತರವಾಗಿ ಧಾರ್ಮಿಕ ಕಾರ್ಯಕ್ರಮಗಳನ್ನು ಆಯೋಜಿಸುತ್ತಿರುವುದು ಭಕ್ತರ ಮೆಚ್ಚುಗೆಗೆ ಪಾತ್ರವಾಗಿದೆ. ಲೋಕ ಕ್ರಾಂತಿ ದಿನಪತ್ರಿಕೆಯ ಮೂಲಕ ನೊಂದವರ, ಶೋಷಿತರ ಮುಖವಾಣಿಯಾಗಿ ಕೆಲಸ ಮಾಡುತ್ತ ಸಮಾಜ ಮುಖಿ ಕಾರ್ಯಗಳಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡಿರುವ ಶ್ರೀ ಹಿರೋಜಿ ಮಾವರಕರ ಅವರ ಸಾಧನೆಯನ್ನು ಗುರುತಿಸಿ ಜಿಲ್ಲಾಡಳಿತವು ಇಂದು ಅವರನ್ನು ಸನ್ಮಾನಿಸುತ್ತಿರುವುದಕ್ಕೆ ಅವರ ಅಭಿಮಾನಿಗಳು ಸಂತಸ ವ್ಯಕ್ತಪಡಿಸಿದ್ದಾರೆ.

# ನಾಳೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ

**ಬೆಳಗಾವಿ:** ಕ.ವಿ.ಪ್ರ.ನಿ.ನಿ. ವತಿಯಿಂದ 110 ಕೆ.ವ್ಹಿ. ಕಣಬರ್ಗಿ ಉಪಕೇಂದ್ರದಲ್ಲಿ ಮೂರನೇಯ ತ್ರೈಮಾಸಿಕ ಹಾಗೂ ಇತರೆ ತುರ್ತು ನಿರ್ವಹಣಾ ಕಾರ್ಯಗಳನ್ನು ಕೈಗೊಳ್ಳುತ್ತಿರುವುದರಿಂದ ಸದರಿ ಉಪಕೇಂದ್ರದಿಂದ ಸರಬರಾಜು ಆಗುವ ಪಿ. ಎಲ್. ನಂ. 910 ರಿಂದ ಪಿ. ಎಲ್. ನಂ 1365 ಆಟೋ ನಗರ, ಕಣಬರ್ಗಿ ನಗರ, ಪಿ. ಎಲ್. ನಂ 1125 ರಿಂದ ಪಿ.ಎಲ್. ನಂ 4087 ರಾಮತೀರ್ಥ ನಗರ, ಪಿ.ಎಲ್. ನಂ 1 ರಿಂದ ಪಿ. ಎಲ್, ನಂ 1124 ರಾಮತೀರ್ಥ ನಗರ, ರೆವಿನೀವ್ ಕಾಲೋನಿ, ರೇಣುಕಾ ನಗರ, ಕಾಕತಿ, ಮುತ್ಯಾನಟ್ಟಿ, ಬಸವನಕೂಡಚಿ, ಪಿ. ಎಲ್, ನಂ 01 ರಿಂದ ಪಿ. ಎಲ್. ನಂ 909 ಆಟೋ ನಗರ ಹಾಗೂ 33 ಕೆ. ವ್ಹಿ ಬಾಳೇಕುಂದ್ರಿ ಉಪಕೇಂದ್ರ, 33 ಕೆವ್ಹಿ ಕಾಕತಿ ಉಪಕೇಂದ್ರ, 33 ಕೆವ್ಹಿ ಸುಜಲಾನ, 33 ಕೆವ್ಹಿ ಗ್ಯಾರಿಸನ್ ಎಲ್ಲ ಮಾರ್ಗಗಳಿಗೆ ನವೆಂಬರ, 02, 2025 ರಂದು ಬೆಳಿಗ್ಗೆ 09 ಘಂಟೆಯಿಂದ ಸಂಜೆ 04 ಘಂಟೆಯವರೆಗೆ ವಿದ್ಯುತ್ ನಿಲುಗಡೆಯಾಗಲಿದೆ ಎಂದು ಕಾ ಮತ್ತು ಪಾ ನಗರ ವಿಭಾಗ ಕಾರ್ಯನಿರ್ವಾಹಕ ಇಂಜಿನೀಯರರು(ವಿ)ತಿಳಿಸಿದ್ದಾರೆ.

# ಕರ್ನಾಟಕ ರಾಜ್ಯೋತ್ಸವ: ಮಾಧ್ಯಮ ಪ್ರತಿನಿಧಿಗಳಿಗೆ ಸನ್ಮಾನ



**ಬೆಳಗಾವಿ:** ಮಾಧ್ಯಮ ಕ್ಷೇತ್ರದಲ್ಲಿ ಗಣನೀಯ ಸೇವೆ ಸಲ್ಲಿಸಿದ ಜಿಲ್ಲೆಯ 11 ಜನ ಮಾಧ್ಯಮ ಪ್ರತಿನಿಧಿಗಳಿಗೆ ಕರ್ನಾಟಕ ರಾಜ್ಯೋತ್ಸವ ಪ್ರಯುಕ್ತ ಜಿಲ್ಲಾಡಳಿತದ ವತಿಯಿಂದ ಸನ್ಮಾನಿಸಲು ನಿರ್ಧರಿಸಲಾಗಿದೆ.

**ಸನ್ಮಾನಿತರ ವಿವರ:** ಕನ್ನಡಪ್ರಭ ದಿನಪತ್ರಿಕೆಯ ಹಿರಿಯ ಉಪ ಸಂಪಾದಕರಾದ ಸದಾನಂದ ಮಜತಿ, ವಿಜಯವಾಣಿ ದಿನಪತ್ರಿಕೆಯ ಜಿಲ್ಲಾ ವರದಿಗಾರರಾದ ಮಂಜುನಾಥ ಕೋಳಿಗುಡ್ಡ, ಕೆ.ಪಿ.ಎನ್ ಸಂಸ್ಥೆಯ ಛಾಯಾಗ್ರಾಹಕರಾದ ವೀರನಗೌಡ ಇನಾಮತಿ, ಟಿ.ವಿ.9 ಜಿಲ್ಲಾ ವರದಿಗಾರರಾದ ಸಹದೇವ ಮಾನೆ, ಸುವರ್ಣ ನ್ಯೂಸ್ ಜಿಲ್ಲಾ ವರದಿಗಾರರಾದ ಅನಿಲ್ ಕಾಜಗಾರ, ಟಿ.ವಿ.9 ಸಂಸ್ಥೆಯ ಕ್ಯಾಮರಾಮನ್ ಪ್ರವೀಣ ಶಿಂಧೆ, ಟಿ.ವಿ.5 ಸಂಸ್ಥೆಯ ಕ್ಯಾಮರಾಮನ್ ರವಿ ಭೋವಿ, ಲೋಕಕ್ರಾಂತಿ ದಿನಪತ್ರಿಕೆಯ ಸಂಪಾದಕರಾದ ಹಿರೋಜಿ ಮಾವರಕರ, ಸಂಯುಕ್ತ ಕರ್ನಾಟಕ ದಿನಪತ್ರಿಕೆ ಚಿಕ್ಕೋಡಿ ವರದಿಗಾರರಾದ ಸಂಜೀವ ಕಾಂಬಳೆ, ವಿಜಯಕರ್ನಾಟಕ ದಿನಪತ್ರಿಕೆಯ ನಿಪ್ಪಾಣಿ ವರದಿಗಾರರಾದ ಗಜಾನನ ರಾಮನಕಟ್ಟಿ, ಪತ್ರಿಕಾ ವಿತರಕರಾದ ಶಂಕರ ಸುತಗಟ್ಟಿ.

1 ನವೆಂಬರ 2025 ರಂದು ಮುಂಜಾನೆ 9.30 ಗಂಟೆಗೆ ಜಿಲ್ಲಾ ಕ್ರೀಡಾಂಗಣದಲ್ಲಿ ಜರಗುವ ಕರ್ನಾಟಕ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಸನ್ಮಾನಕ್ಕೆ ಭಾಜನರಾದ ಮಾಧ್ಯಮ ಪ್ರತಿನಿಧಿಗಳನ್ನು ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಗಣ್ಯರುಗಳು ಸನ್ಮಾನಿಸಲಿದ್ದಾರೆ.

# ಇಂದು ಕನ್ನಡ ರಾಜ್ಯೋತ್ಸವ

## ಜಿಲ್ಲಾಡಳಿತದಿಂದ ವಿವಿಧ ಕಾರ್ಯಕ್ರಮ

**ಬಾಗಲಕೋಟೆ:** ಜಿಲ್ಲೆಯಾದ್ಯಂತ ನವೆಂಬರ 1 ರಂದು ಆಚರಿಸಲ್ಪಡುವ ಕನ್ನಡ ರಾಜ್ಯೋತ್ಸವ ಅಂಗವಾಗಿ ಜಿಲ್ಲಾಡಳಿತದ ವತಿಯಿಂದ ನವನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

ಇಂದು ಬೆಳಿಗ್ಗೆ 7.30ಕ್ಕೆ ಜಿಲ್ಲಾಡಳಿತ ಭವನದ ಆವರಣದಲ್ಲಿ ಕನ್ನಡಾಂಬೆಯ ಭಾವಚಿತ್ರಕ್ಕೆ ಪೂಜೆ ಸಲ್ಲಿಸುವ ಮೂಲಕ ಮೆರವಣಿಗೆಗೆ ಚಾಲನೆ ದೊರೆಯಲಿದೆ. ಮೆರವಣಿಗೆ ವಿವಿಧ ಜಾನಪದ ಕಲಾತಂಡಗಳೊಂದಿಗೆ ನಗರದ ನಾನಾ ಕಡೆ ಸಂಚರಿಸಿ ಜಿಲ್ಲಾ ಕ್ರೀಡಾಂಗಣಕ್ಕೆ ಮುಕ್ತಾಯಗೊಳ್ಳಲಿದೆ. 9 ಗಂಟೆಗೆ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಧ್ವಜಾರೋಹಣ ನೆರವೇರಿಸುವರು. ನಂತರ ರಾಷ್ಟ್ರಗೀತೆ, ನಾಡಗೀತೆ, ರೈತಗೀತೆಯ ನಂತರ ಪೊಲೀಸ್ ಇಲಾಖೆಯಿಂದ ಧ್ವಜವಂದನೆ, ಉಸ್ತುವಾರಿ ಸಚಿವರಿಂದ ಕನ್ನಡ ರಾಜ್ಯೋತ್ಸವ ಸಂದೇಶ, ಶಾಲಾ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮ, ಜಿಲ್ಲಾ ರಾಜ್ಯೋತ್ಸವದ ಸನ್ಮಾನ ಹಾಗೂ ಸ್ಥಬ್ಧ ಚಿತ್ರಗಳ ಪ್ರದರ್ಶನ ನಡೆಯಲಿದೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಾಸಕರು ಹಾಗೂ ಬಿಟಿಡಿಎ ಅಧ್ಯಕ್ಷರಾದ ಎಚ್.ವಾಯ್.ಮೇಟಿ ವಹಿಸಲಿದ್ದು, ಮುಖ್ಯ ಅತಿಥಿಗಳಾಗಿ ನವದೆಹಲಿಯ ಕರ್ನಾಟಕ ವಿಶೇಷ ಪ್ರತಿನಿಧಿ-2 ಹಾಗೂ ವಿಧಾನ ಪರಿಷತ್ ಸದಸ್ಯ ಪ್ರಕಾಶ ಹುಕ್ಕೇರಿ, ಬೀಳಗಿ ಶಾಸಕ ಹಾಗೂ ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷ ಜೆ.ಟಿ.ಪಾಟೀಲ, ಹುನಗುಂದ ಶಾಸಕ ಹಾಗೂ ರಾಜ್ಯ ವೀರಶೈವ ಲಿಂಗಾಯತ ಅಭಿವೃದ್ಧಿ ನಿಗಮದ ಅಧ್ಯಕ್ಷ ವಿಜಯಾನಂದ ಕಾಶಪ್ಪನವರ, ಸಂಸದ ಪಿ.ಸಿ.ಗದ್ದಿಗೌಡರ, ಸೇರಿದಂತೆ ರಾಜ್ಯಸಭಾ ಸದಸ್ಯರು, ಜಿಲ್ಲೆಯ ಎಲ್ಲ ಶಾಸಕರು, ವಿಧಾನ ಪರಿಷತ್ ಸದಸ್ಯರು ಹಾಗೂ ಇತರೆ ಗಣ್ಯಮಾನ್ಯರು ಆಗಮಿಸಲಿದ್ದಾರೆ. ಸಂಜೆ 5.30 ರಿಂದ 7.30 ವರೆಗೆ ನವನಗರದ ಕಲಾಭವನದಲ್ಲಿ ಶಾಲಾ-ಕಾಲೇಜು ವಿದ್ಯಾರ್ಥಿಗಳಿಂದ ನೃತ್ಯ ರೂಪಕಗಳು ಹಾಗೂ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿವೆ.




BELAGINA SURYODHYA KANNADA DAILY MORNING Editor, Printer, PUblisher and Owned By GURURAJ IRAPPA KADAM Plot No.2743 NEAR KEB POWER HOUSE RAMTEERTH NAGAR, SHIVAJI NAGAR BELAGAVI-590016 DIST-BELAGAVI,STATE KARNATAKA PRINTED At M/S LAXMI PRINTERS, No. 627,Auto Nagar,Belagavi,Dist- Belagavi Karnataka, RNI No. KARKAN/2019/77640, Volume : 07, Issue : 227, Postal Reg No. PMG/KA/NK/BM/135/25-27 / POST AT Vantamury Colony Post Office